ಸಂಪುಟ : 4 ಸಂಚಿಕೆ : 37 ಪುಟ : 4 ಬೆಲೆ : ರೂ. 4 ಮಂಗಳವಾರ, ಮಾರ್ಚ್, 21, 2023 E-mail: newsbelagavi@gmail.com Mobile No-9900332089

ಬೆಳಗಾವಿ ಮತ್ತು ಬೆಂಗಳೂರಿನಿಂದ ಏಕ ಕಾಲದಲ್ಲಿ ಪ್ರಕಟಿತ



# ಬೆಳಗಾವಿ ವರದಿ

BELAGAVI VARADI KANNADA DAILY

ಕರ್ನಾಟಕ ಕನ್ನಡ ದಿನಪತ್ರಿಕೆ

ಸಂಪಾದಕರು : ಸತೀಶ್.ಬಿ.ಜಿ

Volume : 4 Issue : 37 Pages : 4 Rate : 4 Rs Tuesday, March 21, 2023 RNI : KARKAN/2020/79084 Post Regn.No:G-2/PMG/KA/NK/BM/139/2021-23 belagavivaradi@gmail.com



## ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ 10 ಲಕ್ಷ ಯುವಕರಿಗೆ ಉದ್ಯೋಗ

### ಕಾಂಗ್ರೆಸ್‌ನಿಂದ 4ನೇ ಗ್ಯಾರಂಟಿ ಯೋಜನೆ ಘೋಷಣೆ

### ನಿರುದ್ಯೋಗಿ ಪದವೀಧರರಿಗೆ 3000 ರೂ, ಡಿಪ್ಲೊಮಾ ಪದವೀಧರರಿಗೆ 1500 ರೂ. ಭತ್ಯೆ

ಬೆಳಗಾವಿ: ಕರ್ನಾಟಕದಲ್ಲಿ ಈ ಬಾರಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ್ರೆ ಮುಂದಿನ 5 ವರ್ಷಗಳಲ್ಲಿ 10 ಲಕ್ಷ ಯುವಕರಿಗೆ ಉದ್ಯೋಗಾವಕಾಶ ನೀಡಲಿದೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಭರವಸೆ ನೀಡಿದರು.

ನಗರದ ಸಿಪಿಎಡ್ ಮೈದಾನದಲ್ಲಿ ನಡೆದ 'ಯುವಕ್ರಾಂತಿ' ಸಮಾವೇಶವನ್ನುದ್ದೇಶಿಸಿ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ, 5 ವರ್ಷಗಳಲ್ಲಿ 10 ಲಕ್ಷ ಯುವಕರಿಗೆ ಉದ್ಯೋಗ ನೀಡಲಿದೆ. ಜೊತೆಗೆ ಸರ್ಕಾರಿ ಇಲಾಖೆಗಳಲ್ಲಿ ಖಾಲಿಯಿರುವ 2.5 ಲಕ್ಷ ಉದ್ಯೋಗವನ್ನು ರಾಜ್ಯದ ಯುವಜನರಿಗೆ ಸಿಗುವಂತೆ ಮಾಡಲಿದೆ ಎಂದು ಘೋಷಣೆ ಮಾಡಿದರು.

ಅನ್ನಭಾಗ್ಯ ಯೋಜನೆ ಅಡಿಯಲ್ಲಿ ಪ್ರತಿ ತಿಂಗಳು ಕುಟುಂಬಕ್ಕೆ 10 ಕೆಜಿ ಅಕ್ಕಿ ಉಚಿತ, 200 ಯೂನಿಟ್ ವಿದ್ಯುತ್ ಉಚಿತ, ಕುಟುಂಬದ ಓರ್ವ ಮಹಿಳೆಗೆ 2 ಸಾವಿರ ರೂ. ನೀಡಲಾಗುವುದು ಎಂದು ಅವರು ಭರವಸೆ ನೀಡಿದರು.

ಕೆಲ ತಿಂಗಳ ಹಿಂದೆ ಕನ್ಯಾಕುಮಾರಿಯಿಂದ ಕಾಶ್ಮೀರದ ವರೆಗೆ ಭಾರತ್ ಜೋಡೋ ಯಾತ್ರೆ ನಡೆಸಲಾಯಿತು. ಅದಕ್ಕೆ ರಾಜ್ಯದಿಂದಲೂ ಜನರು ಅಪಾರ ಬೆಂಬಲ ಕೊಟ್ಟಿದ್ದರು. ನಾನು ಅವರಿಗೆ ಧನ್ಯವಾದ ತಿಳಿಸುತ್ತೇನೆ.

ನಾವು ರಾಜ್ಯದಲ್ಲಿ ಭಾರತ್ ಜೋಡೊ ಯಾತ್ರೆ ಕೈಗೊಂಡ ಸಂದರ್ಭದಲ್ಲಿ ಯುವಕರು ನಮಗೆ ಕೆಲ ಸಂದೇಶ ಕೊಟ್ಟರು. ಯಾವುದೇ ಪದವೀಧರರಿಗೂ ಕರ್ನಾಟಕ ಸರ್ಕಾರ ಉದ್ಯೋಗ ಕೊಡುತ್ತಿಲ್ಲ, ಯಾವುದೇ ಕೆಲಸ ಆಗಬೇಕು ಅಂದರೂ 40 ಪರ್ಸೆಂಟ್ ಕಮಿಷನ್ ಕೊಡಬೇಕಾಗಿದೆ. ಇಡೀ ದೇಶದಲ್ಲೇ ಕರ್ನಾಟಕ ಸರ್ಕಾರ ಅತ್ಯಂತ ಭ್ರಷ್ಟ ಸರ್ಕಾರವಾಗಿದೆ ಎಂಬ ಸಂದೇಶಗಳನ್ನ ನೀಡಿದರು. ಯುವಕರಿಗೆ ನಿರುದ್ಯೋಗದಿಂದ ಸಮಸ್ಯೆಗಳಾಗುತ್ತಿವೆ. ಸಾಕಷ್ಟು ಮುಜುಗರ ಎದುರಿಸುತ್ತಿದ್ದಾರೆ. ಇದೆಲ್ಲವನ್ನು ಮನಗಂಡು ನಮ್ಮ ಸರ್ಕಾರ 'ಯುವನಿಧಿ'ಯನ್ನ ಘೋಷಣೆ ಮಾಡಿದೆ ಎಂದು ಹೇಳಿದರು.

ದೇಶದಲ್ಲಿ ಎಲ್ಲ ಕೈಗಾರಿಕೆಗಳನ್ನ ಅದಾನಿ ಕೈಗೆ ಕೊಡುತ್ತಿದ್ದಾರೆ. ರಸ್ತೆ ಏರ್‌ಪೋರ್ಟ್‌ಗಳನ್ನ ಅವರಿಗೇ ಬಿಟ್ಟುಕೊಡಲಾಗುತ್ತಿದೆ.




ಬಿಜೆಪಿ ಸರ್ಕಾರದಿಂದ ತಮ್ಮ ಗೆಳೆಯರಿಗೆ ಮಾತ್ರ ಲಾಭವಾಗುತ್ತಿದೆ. ಇದರಿಂದಲೇ ಭ್ರಷ್ಟಾಚಾರ ಹೆಚ್ಚಾಗುತ್ತಿದೆ. ಇದೆಲ್ಲವನ್ನೂ ಕಾಂಗ್ರೆಸ್ ಯುವಕರಿಗೆ ತಿಳಿಸುವ ಕೆಲಸ ಮಾಡಿದೆ ಎಂದು ತಿಳಿಸಿದರು.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮಾತನಾಡಿ, ಪ್ರಧಾನಿ ಮೋದಿಯವರು ನಾನು ರಿಮೋಟ್ ಕಂಟ್ರೋಲ್ನಲ್ಲಿ ಇದ್ದೇನೆ ಎಂದು ಹೇಳುತ್ತಾರೆ. ಆದರೆ, ಬಿಜೆಪಿ ಅಧ್ಯಕ್ಷ ನಡ್ಡಾ ಯಾರ ಕಂಟ್ರೋಲ್ನಲ್ಲಿ ಇದ್ದಾರೆ ಎಂದು ಪ್ರಶ್ನಿಸಿದರು.

ಖರ್ಗೆ ರಿಮೋಟ್ ಕಂಟ್ರೋಲ್ನಲ್ಲಿ ಇದ್ದಾರೆ ಎಂಬ ಪ್ರಧಾನಿ ನರೇಂದ್ರ ಮೋದಿ ಆರೋಪಕ್ಕೆ ಮಲ್ಲಿಕಾರ್ಜುನ ಖರ್ಗೆ ಅವರು ತಿರುಗೇಟು ನೀಡಿ, ಜೋಡೋ ಯಾತ್ರೆ ವೇಳೆ ಜನ ತಮ್ಮ ಸಮಸ್ಯೆ ಬಗ್ಗೆ ಹೇಳಿಕೊಂಡಿದ್ದರು. ದೇಶದಲ್ಲಿ ಜಾತಿ ಪದ್ಧತಿ, ಅಸ್ಪೃಶ್ಯತೆ ಆಚರಣೆ ಇನ್ನೂ ಜೀವಂತವಿದೆ. ಇದನ್ನು ಹೇಳಿದ್ದಕ್ಕೆ ರಾಹುಲ್ ಗಾಂಧಿಗೆ ಕಿರುಕುಳ ಕೊಡುತ್ತಿದ್ದಾರೆ. ಜೈಲಿಗೆ ಹಾಕಿದರೂ ನಾವು ಸತ್ಯವನ್ನ ಹೇಳುವುದನ್ನ ಬಿಡುವುದಿಲ್ಲ. ಖಾಲಿ ಇರುವ ಉದ್ಯೋಗವನ್ನು ಬಿಜೆಪಿ ಸರ್ಕಾರ ಭರ್ತಿ ಮಾಡುತ್ತಿಲ್ಲ. ನಾವು ಅಧಿಕಾರಕ್ಕೆ ಬಂದರೆ ಒಂದೂವರೆ ವರ್ಷದಲ್ಲಿ ಒಂದೂವರೆ ಲಕ್ಷ ಹುದ್ದೆ ಭರ್ತಿ ಮಾಡುತ್ತೇವೆ ಎಂದು ಹೇಳಿದರು.

ಈಗ ಚುನಾವಣೆ ಬರುತ್ತಿದೆ. ಕರ್ನಾಟಕ ರಾಜ್ಯಕ್ಕೆ ಬಹಳ ಮಹತ್ವದ ಚುನಾವಣೆ. ಇಡೀ ದೇಶಕ್ಕೂ ಒಂದು ಸಂದೇಶ ಕೊಡುವ ಚುನಾವಣೆ. ಒಗಟ್ಟಾಗಿ ಈ ಚುನಾವಣೆಯನ್ನ ನಾವೆಲ್ಲರೂ ಎದುರಿಸಬೇಕಾಗಿದೆ. ಎಐಸಿಸಿ ಅಧ್ಯಕ್ಷನಾದ ಮೇಲೆ ಮೊದಲ ಬಾರಿಗೆ ನಾನು ಇಲ್ಲಿ ಕಾಲಿಟ್ಟಿದ್ದೇನೆ. ಬೆಳಗಾವಿ ಕಾಂಗ್ರೆಸ್‌ಗೆ ಒಂದು ಪವಿತ್ರವಾದ ಭೂಮಿ, ಕಾಂಗ್ರೆಸ್ ಅಧಿವೇಶನದಲ್ಲಿ ಅಧ್ಯಕ್ಷರಾಗಿ ಮಹಾತ್ಮ ಗಾಂಧೀಜಿ ಬೆಳಗಾವಿಯಲ್ಲಿ ನಡೆದ ಸಮಾವೇಶದಲ್ಲಿ ಭಾಗಿಯಾಗಿದ್ದರು. ಇಂದು ಅದೇ ಕಾಂಗ್ರೆಸ್ ಪಕ್ಷದ ಅಧ್ಯಕ್ಷನ್ನಾಗಿ ನನ್ನನ್ನು ಕುರಿಸಿದ್ದೀರಿ ಎಂದರು.

ಪ್ರಧಾನಿ ಮೋದಿಗೆ ಪ್ರಶ್ನೆ ಮಾಡಿದ ಖರ್ಗೆ: ಒಂದು ಕಾಲದಲ್ಲಿ ಬೆಳಗಾವಿ ಕಾಂಗ್ರೆಸ್ನ ಶಕ್ತಿಶಾಲಿ ಜಿಲ್ಲೆಯಾಗಿತ್ತು. ಹದಿನೆಂಟು ಸೀಟ್ನಲ್ಲಿ 15-16 ಸೀಟ್ ಗೆಲ್ಲುತ್ತೇವೆ. ಇಂದು ಆ ಪರಿಸ್ಥಿತಿ ಇದೆ. ಖಂಡಿತವಾಗಿ 18 ಸ್ಥಾನವನ್ನ ಬೆಳಗಾವಿಯಲ್ಲಿ ಗೆಲ್ಲುತ್ತೇವೆ. ಇಲ್ಲಿನ ಸರ್ಕಾರ ನಲವತ್ತು ಪರ್ಸೆಂಟ್ ಸರ್ಕಾರ. ಯಾವ ಕಾಲದಲ್ಲಿ ಇಷ್ಟೊಂದು ದೊಡ್ಡ ಪ್ರಮಾಣದ ಭ್ರಷ್ಟಾಚಾರ ಇರಲಿಲ್ಲ. ಗುತ್ತಿಗೆದಾರರು ಪರ್ಸೆಂಟೇಜ್ ಕೊಡುವ ಕುರಿತು ಮೋದಿಯವರಿಗೆ ದೂರು ಕೊಟ್ಟಿದ್ದಾರೆ. ನೀವು ಯಾಕೆ ಅದರ ವಿರುದ್ಧ ಕೇಸ್ ಮಾಡಲಿಲ್ಲ ಎಂದು ಪ್ರಶ್ನಿಸಿದರು. ಜಮ್ಮು ಕಾಶ್ಮೀರದಲ್ಲಿ 40 ದಿನದ ಹಿಂದೆ ರಾಹುಲ್ ಗಾಂಧಿ ಹೇಳಿದ ಮಾತನ್ನ, ನಿಮಗೆ ಯಾವ ಹೆಣ್ಣು ಮಗಳು ಹೇಳಿದಲು ಅಂತಾ ಸಾಕ್ಷಿ ಕೊಡಿ ಎಂದು ಅವರ ಮನೆಗೆ ಬಂದು ಕೇಳುತ್ತಿದ್ದಾರೆ. ಕರ್ನಾಟಕದಲ್ಲಿ ನಲವತ್ತು ಪರ್ಸೆಂಟ್ ಸಾಕ್ಷಿ ಕೊಟ್ಟರೂ ಏನು ಮಾಡಿದಿರಿ ಎಂದು ಹೇಳಿದರು.

## ಮುಂಬೈಗೆ ತೆರಳುತ್ತಿದ್ದ ಇಂಡಿಗೋ ವಿಮಾನ ಮಯನ್ಮಾರ್ ಗೆ ಡೈವರ್ಟ್

ಮುಂಬೈ: ಬ್ಯಾಂಕಾಕ್‌ನಿಂದ ಮುಂಬೈಗೆ ತೆರಳುತ್ತಿದ್ದ ಇಂಡಿಗೋ ವಿಮಾನವನ್ನು ವೈದ್ಯಕೀಯ ತುರ್ತು ಪರಿಸ್ಥಿತಿಯ ಕಾರಣ ಭಾನುವಾರ ಮಯನ್ಮಾರ್ ನ ರಂಗೂನ್(ಯಾಂಗೋನ್)ಗೆ ತಿರುಗಿಸಲಾಗಿದೆ ಎಂದು ವಿಮಾನಯಾನ ಸಂಸ್ಥೆ ತಿಳಿಸಿದೆ.

ಆದಾಗ್ಯೂ, ವಿಮಾನ ಲ್ಯಾಂಡ್ ಆಗುತ್ತಿದ್ದಂತೆ "ವಿಮಾನ ನಿಲ್ದಾಣದ ವೈದ್ಯಕೀಯ ತಂಡ" ಪ್ರಯಾಣಿಕ ಸಾವನ್ನಪ್ಪಿದ್ದಾರೆ ಎಂದು ಘೋಷಿಸಿರುವುದಾಗಿ ಇಂಡಿಗೋ ಸೋಮವಾರ ಪ್ರಕಟಣೆಯಲ್ಲಿ ತಿಳಿಸಿದೆ.




ಇಂಡಿಗೋ ಫ್ಲೈಟ್ 6ಇ-57, ಬ್ಯಾಂಕಾಕ್‌ನಿಂದ ಮುಂಬೈಗೆ ಹಾರಾಟ ನಡೆಸುತ್ತಿದ್ದ ವಿಮಾನದಲ್ಲಿ ಪ್ರಯಾಣಿಕರೊಬ್ಬರ ವೈದ್ಯಕೀಯ ತುರ್ತುಪರಿಸ್ಥಿತಿಯ ಕಾರಣ ರಂಗೂನ್‌ಗೆ ತಿರುಗಿಸಲಾಗಿದೆ. ದುರದೃಷ್ಟವಶಾತ್, ಆಗಮನದ ನಂತರ, ವಿಮಾನ ನಿಲ್ದಾಣದ ವೈದ್ಯಕೀಯ ತಂಡ ಪ್ರಯಾಣಿಕ ಮೃತಪಟ್ಟಿರುವುದಾಗಿ ಘೋಷಿಸಿದರು" ಎಂದು ಏರ್‌ಲೈನ್ ಸಂಕ್ಷಿಪ್ತ ಪ್ರಕಟಣೆಯಲ್ಲಿ ತಿಳಿಸಿದೆ.

ಇಂಡಿಗೋ ಪ್ರಯಾಣಿಕನೊಬ್ಬರು ಮಾರ್ಗ ಮಧ್ಯದಲ್ಲಿ ವಿಮಾನದಲ್ಲಿ ಅಸ್ವಸ್ಥಗೊಂಡು ಸಾವನ್ನಪ್ಪಿದ ಎರಡನೇ ಘಟನೆ ಇದಾಗಿದೆ.

ಈ ಹಿಂದೆ ಮಾರ್ಚ್ 17 ರಂದು ರಾಂಚಿ-ಪುಣೆ ಇಂಡಿಗೋ ವಿಮಾನವನ್ನು ಪ್ರಯಾಣಿಕರೊಬ್ಬರ ವೈದ್ಯಕೀಯ ತುರ್ತು ಪರಿಸ್ಥಿತಿಯ ಕಾರಣ ನಾಗ್ಪುರ ವಿಮಾನ ನಿಲ್ದಾಣಕ್ಕೆ ತಿರುಗಿಸಲಾಗಿತ್ತು ಮತ್ತು ತಕ್ಷಣ ನಾಗ್ಪುರದ ಆಸ್ಪತ್ರೆಗೆ ಕರೆದೊಯ್ಯಲಾಗಿತ್ತು. ಆದರೆ ಅವರು ಮೃತಪಟ್ಟಿರುವುದಾಗಿ ವೈದ್ಯರು ಘೋಷಿಸಿದ್ದರು.

## ಪ್ರವಾಹ ಬಂದಾಗ ಬರಲಿಲ್ಲ, ವೋಟ್‌ಗಾಗಿ ಮೇಲಿಂದ ಮೇಲೆ ರಾಜ್ಯಕ್ಕೆ ಪ್ರಧಾನಿ ಆಗಮನ: ಸಿದ್ದರಾಮಯ್ಯ

ಬೆಳಗಾವಿ: ಪ್ರಧಾನಿ ನರೇಂದ್ರ ಮೋದಿ ಅವರು ರಾಜ್ಯಕ್ಕೆ ಪ್ರವಾಹ ಬಂದಾಗ ಬರಲಿಲ್ಲ, ಕೊರೊನಾ ಬಂದಾಗ ಆಮ್ಲಜನಕ ಸಿಗದೆ ರಾಜ್ಯದಲ್ಲಿ ನೂರಾರು ಜನ ಸತ್ತಾಗ, ಚಿಕಿತ್ಸೆ ಸಿಗದೆ ಲಕ್ಷಾಂತರ ಜನ ಸತ್ತಾಗ ಕರ್ನಾಟಕಕ್ಕೆ ಬರಲಿಲ್ಲ. ಈಗ ಚುನಾವಣೆ ಬರುತ್ತಿರುವುದರಿಂದ ವೋಟ್ ಗಾಗಿ ಮೇಲಿಂದ ಮೇಲೆ ರಾಜ್ಯಕ್ಕೆ ಬರುತ್ತಿದ್ದಾರೆ ಎಂದು ವಿಪಕ್ಷ ನಾಯಕ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದರು.



ನಗರದ ಸಿಪಿಎಡ್ ಮೈದಾನದಲ್ಲಿ ಹಮ್ಮಿಕೊಂಡಿದ್ದ ಯುವ ಕ್ರಾಂತಿ ಸಮಾವೇಶದಲ್ಲಿ ಪಾಲ್ಗೊಂಡು, ಸಹಸ್ರಾರು ಯುವ ಜನರನ್ನು ಉದ್ದೇಶಿಸಿ ಮಾತನಾಡಿದ ಅವರು, ನರೇಂದ್ರ ಮೋದಿ ಅವರು ಅಧಿಕಾರಕ್ಕೆ ಬಂದು 9 ವರ್ಷವಾಗುತ್ತಾ ಬಂದಿದೆ, ರಾಜ್ಯದಲ್ಲಿ ಬಿಜೆಪಿ ಸರ್ಕಾರ ಹಿಂಬಾಗಿಲ ಮೂಲಕ ಅಧಿಕಾರಕ್ಕೆ ಬಂದು 4 ವರ್ಷ ತುಂಬುತ್ತಾ ಬಂದಿದೆ. ರಾಜ್ಯ ಬಿಜೆಪಿ ನಾಯಕರು ತಮ್ಮದು ಡಬ್ಬಲ್ ಇಂಜಿನ್ ಸರ್ಕಾರ ಎಂದು ಬಹಳಾ ಬಡಾಯಿ ಕೊಚ್ಚಿಕೊಂಡರು. ಕಳೆದ 9 ವರ್ಷದಲ್ಲಿ ದೇಶದ ಯುವ ಜನರಿಗೆ ನೀವು ಏನು ಮಾಡಿದ್ದೀರಿ? ಎಂದು ಕೇಳಲು ಬಯಸುತ್ತೇನೆ ಎಂದು ಪ್ರಶ್ನಿಸಿದರು.

ಇಲ್ಲಿ ಸೇರಿರುವ ಯುವ ಜನರು ಕರ್ನಾಟಕದಲ್ಲಿರುವ ಯುವಜನ ವಿರೋಧಿ, ಭ್ರಷ್ಟ ಬಿಜೆಪಿ ಸರ್ಕಾರವನ್ನು ಕಿತ್ತೊಗೆದು ಮುಂದಿನ 5 ವರ್ಷಗಳ ಕಾಲ ರಾಜ್ಯದ ಭವಿಷ್ಯವನ್ನು ರೂಪಿಸುವ ಕಾಂಗ್ರೆಸ್ ಸರ್ಕಾರವನ್ನು ತರುತ್ತೇವೆ ಎಂದು ಶಪಥ ಮಾಡಬೇಕು. ರಾಜೀವ್ ಗಾಂಧಿ ಅವರು 18 ವರ್ಷ ತುಂಬಿದ ಎಲ್ಲ ಯುವಕ, ಯುವತಿಯರಿಗೆ ಮತದಾನದ ಹಕ್ಕು ನೀಡಿದ್ದರು, ಇದರಿಂದ ದೇಶದ ಯುವ ಜನರು ರಾಜಕೀಯದಲ್ಲಿ ಸಕ್ರಿಯವಾಗಿ ಭಾಗವಹಿಸಲು ಸಾಧ್ಯವಾಗಿದೆ. ಇದಕ್ಕಾಗಿ ನಾವು ಅವರನ್ನು ಈ ಸಂದರ್ಭದಲ್ಲಿ ನೆನೆಯಲೇಬೇಕು. ರಾಜೀವ್ ಗಾಂಧಿ ಅವರು ತಂತ್ರಜ್ಞಾನ ಕ್ಷೇತ್ರದಲ್ಲಿ ಕ್ರಾಂತಿ ಮಾಡಿದ್ದರಿಂದ ದೇಶದ ಯುವಜನರಿಗೆ ಉದ್ಯೋಗ ಸಿಗಲು ಸಾಧ್ಯವಾಯಿತು ಎಂದು ತಿಳಿಸಿದರು.

ಇಡೀ ರಾಜ್ಯ ಸರ್ಕಾರವೇ ಭ್ರಷ್ಟವಾಗಿದೆ. ಇಲ್ಲಿನ ಸರ್ಕಾರಕ್ಕೆ ಜನರಿಗೆ ಮುಖ ತೋರಿಸಲು ಆಗುತ್ತಿಲ್ಲ ಎಂಬ ಕಾರಣಕ್ಕೆ ಮೋದಿ ಅವರನ್ನು ಪದೇ ಪದೇ ಕರೆದುಕೊಂಡು ಬಂದು ಚುನಾವಣೆ ಗೆಲ್ಲಬಹುದು ಎಂದು ಲೆಕ್ಕಾಚಾರ ಹಾಕಿದ್ದಾರೆ, ಆದರೆ ಮತ್ತೆ ಮತ್ತೆ ನಾಡಿನ ಜನರನ್ನು ದಡ್ಡರನ್ನಾಗಿ ಮಾಡಲು ಸಾಧ್ಯವಿಲ್ಲ ಎಂಬುದನ್ನು ಮೋದಿಯವರಿಗೆ ತಿಳಿಸಲು ಬಯಸುತ್ತೇನೆ ಎಂದು ಹೇಳಿದರು.

ಪಾಕಿಸ್ತಾನ, ಚೀನಾ, ಹಿಂದುತ್ವ ಎಂದು ಹೇಳಿ ಜನರ ಮತ ಪಡೆದು ಅಧಿಕಾರಕ್ಕೆ ಬಂದ ನಂತರ ಮೋದಿ ಅವರು ಸಂಪೂರ್ಣವಾಗಿ ಯುವ ಜನರನ್ನು ಮರೆತಿದ್ದಾರೆ. 2014ರಲ್ಲಿ ಈ ದೇಶದ ಯುವ ಜನರಿಗೆ ಪ್ರತೀ ವರ್ಷ 2 ಕೋಟಿ ಉದ್ಯೋಗ ನೀಡುತ್ತೇನೆ ಎಂದು ಅವರು ಹೇಳಿದ್ದರು, ಈಗ 9 ವರ್ಷದಲ್ಲಿ 18 ಉದ್ಯೋಗ ನೀಡಬೇಕಿತ್ತು ಆದರೆ ಇದಕ್ಕೂ ಹೆಚ್ಚಿನ ಸಂಖ್ಯೆಯ ಉದ್ಯೋಗಗಳು ನಷ್ಟವಾಗಿದೆ. ಕೇಂದ್ರ ಸರ್ಕಾರದ ತಲೆಬುಡವಿಲ್ಲದ ಆರ್ಥಿಕ ನೀತಿಗಳಿಂದಾಗಿ ಲಕ್ಷಾಂತರ ಎಂ,ಎಸ್,ಎಂ,ಇ ಗಳು ಮುಚ್ಚಿಹೋದವು. ಇದರಿಂದ ಇಲ್ಲಿ ಉದ್ಯೋಗಗಳು ಸಿಗುವುದು ಕಷ್ಟವಾಯಿತು, ದೇಶದ 12,89,000 ಯುವ ಜನರು ಹೊರದೇಶದಲ್ಲಿ ಉದ್ಯೋಗ ಹುಡುಕಿಕೊಂಡು ಹೋಗಿದ್ದಾರೆ, ಈ ರೀತಿ ಪ್ರತಿಭಾ ಪಲಾಯನಕ್ಕೆ ನಿಮ್ಮ ಬಳಿ ಉತ್ತರವಿದೆಯಾ ಮೋದಿಜೀ? ಎಂದು ಟೀಕಿಸಿದರು.

## ಉರಿಗೌಡ, ನಂಜೇಗೌಡ ಸಿನಿಮಾ ಕೈಬಿಟ್ಟ ಸಚಿವ ಮುನಿರತ್ನ

ಮಂಡ್ಯ: ವಿಧಾನಸಭಾ ಚುನಾವಣೆ ಸಮೀಪಿಸುತ್ತಿದ್ದಂತೆ ರಾಜ್ಯ ರಾಜಕೀಯದಲ್ಲಿ ಮುನ್ನೆಲೆಗೆ ಬಂದಿದ್ದ ಉರಿಗೌಡ, ನಂಜೇಗೌಡ ವಿಚಾರ ಸಿನಿಮಾ ಹಂತಕ್ಕೂ ಬಂದು ನಿಂತಿತ್ತು. ಮೇ 18ರಂದು ಉರಿಗೌಡ, ನಂಜೇಗೌಡ ಸಿನಿಮಾಗೆ ಮುಹೂರ್ತ್ ಕೂಡ ನಿಗದಿಯಾಗಿರುವುದಾಗಿ ತೋಟಗಾರಿಕಾ ಸಚಿವ ಮುನಿರತ್ನ ಜಾಹಿರಾತು ಪ್ರಕಟಿಸಿದ್ದರು. ಆದರೀಗ ಸ್ವತ; ಮುನಿರತ್ನ ಅವರೇ ಸಿನಿಮಾ ನಿರ್ಮಾಣ ವಿಚಾರ ಕೈಬಿಟ್ಟಿದ್ದಾರೆ.

ಉರಿಗೌಡ, ನಂಜೇಗೌಡ ಸಿನಿಮಾ ಮಾಡಲು ಸಚಿವರು ಸಿದ್ಧತೆ ನಡೆಸುತ್ತಿದ್ದಂತೆ ವಿಪಕ್ಷ ಕಾಂಗ್ರೆಸ್ ಹಾಗೂ ಜೆಡಿಎಸ್ ನಾಯಕರು ಮುಗಿಬಿದ್ದು ವಾಗ್ದಾಳಿ ನಡೆಸಿದ್ದರು. ಈ ಎಲ್ಲಾ ಬೆಳವಣಿಗೆ ಬೆನ್ನಲ್ಲೇ



ಆದಿಚುಂಚನಗಿರಿ ನಿರ್ಮಲಾನಂದನಾಥ ಶ್ರೀಗಳು ಸಚಿವ ಮುನಿರತ್ನ ಅವರನ್ನು ಕರೆದು ಮಾತುಕತೆ ನಡೆಸಿದ್ದು, ಶ್ರೀಗಳ ಜೊತೆ ಚರ್ಚೆಯ ಬಳಿಕ ಸಚಿವ ಮುನಿರತ್ನ ಯೂಟರ್ನ್ ಹೊಡೆದಿದ್ದಾರೆ.

ಉರಿಗೌಡ, ನಂಜೇಗೌಡ ಸಿನಿಮಾ ನಿರ್ಮಾಣ ಮಾಡಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಉರಿಗೌಡ, ನಂಜೇಗೌಡ ಸಿನಿಮಾ ಮಾಡುವ ವಿಚಾರ ನನಗೆ ಇರಲಿಲ್ಲ. ಟಿಪ್ಪು ವಿಚಾರ ಚರ್ಚೆಗೆ ಬಂದಾಗ ಅಂದು ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಒಂದು ಮಾತು ಹೇಳಿದ್ದರು. ಸಚಿವ ಮುನಿರತ್ನಗೆ ಉರಿಗೌಡ, ನಂಜೇಗೌಡ ಸಿನಿಮಾ ಮಾಡಲು ಯಾರೋ ಹೇಳಿರಬೇಕು, ಅಶ್ವತ್ಥನಾರಾಯಣ ಈ ಬಗ್ಗೆ ಸೂಚಿಸಿರಬೇಕು ಎಂದಿದ್ದರು. ಆಗಲೇ ನನಗೆ ಹೊಳೆಯಿತು. ಯಾಕೇ ನಾನೊಬ್ಬ ನಿರ್ಮಾಪಕನಾಗಿ ಇದನ್ನು ಸಿನಿಮಾ ಮಾಡಬಾರದು. ಐತಿಹಾಸಿಕ ರೀತ ದೊಡ್ಡಮಟ್ಟದಲ್ಲಿ ಸಿನಿಮಾ ಮಾಡಬೇಕು ಎಂದು ತೀರ್ಮಾನಿಸಿದೆ. ಆದರೆ ಈಗ ಈ ವಿಚಾರ ಕೈಬಿಟ್ಟಿರುವುದಾಗಿ ತಿಳಿಸಿದರು.

## ಕಾರು ನಿಲ್ಲಿಸುವ ವೇಳೆ ಜಗಳ, ಯುವಕನ ಕೊಲೆ

ಬೆಂಗಳೂರು: ಕಾರು ನಿಲ್ಲಿಲುವ ವೇಳೆ ಏರ್ಪಟ್ಟ ಜಗಳ ತಾರಕಕ್ಕೇರಿ ಕೊಲೆಯಾಗಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ.



ಬೆಂಗಳೂರಿನ ಹೊಸಕೋಟೆ ತಾಲೂಕಿನ ಮೇಡಿಮಲ್ಲಸಂದ್ರ ಗ್ರಾಮದಲ್ಲಿ ಈ ಘಟನೆ ನಡೆದಿದ್ದು, ಇಸ್ಮಾಯಿಲ್ ಖಾನ್(26)ನನ್ನು ಇರಿದು ಕೊಲೆ ಮಾಡಿದ್ದಾರೆ ಎನ್ನಲಾಗಿದೆ. ಆಸ್ತಿ ಹಂಚಿಕೆ ವಿಚಾರದ ವೈಷಮ್ಯದ ನಡುವೆ ಕಾರು ನಿಲ್ಲಿಸುವ ವೇಳೆ ಜಗಳದಲ್ಲಿ ಚಾಕುವಿನಿಂದ ಇರಿದು ಇಸ್ಮಾಯಿಲ್ ಖಾನ್ ನನ್ನು ಕೊಲೆ ಮಾಡಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಸಯ್ಯದ್ ಹಿದಾಯತ್ ಶಾ, ಸಯ್ಯದ್ ಅಜೀಂ ಶಾ, ಸಯ್ಯದ್ ಅಖಿಲ್ ಶಾ ಸೇರಿ ಕೊಲೆ ಮಾಡಿದ್ದಾರೆ ಎಂದು ಆರೋಪಿಸಲಾಗಿದೆ.

ಕಳೆದ ಹಲವು ದಿನಗಳಿಂದ ದಾಯಾದಿಗಳ ಮಧ್ಯೆ ಆಸ್ತಿ ವಿಚಾರಕ್ಕೆ ಕಲಹ ನಡೆಯುತ್ತಿದ್ದು, ಈ ನಡುವೆ ಮನೆ ಮುಂದೆ ಕಳೆದ ರಾತ್ರಿ ಕಾರು ನಿಲ್ಲಿಸುವ ವಿಚಾರಕ್ಕೆ ಜಗಳ ಉಂಟಾಗಿದೆ. ಬಳಿಕ ಮಾತಿನ ಚಕಮಕಿ ವಿಕೋಪಕ್ಕೆ ತಿರುಗಿ ಡ್ರಾಗರ್ ನಿಂದ ಎದೆ ಮತ್ತು ಮೂತ್ರಪಿಂಡ ಜಾಗಕ್ಕೆ ಇರಿದು ಹಲ್ಲೆ ಮಾಡಲಾಗಿದ್ದು, ಸ್ಥಳದಲ್ಲೇ ಇಸ್ಮಾಯಿಲ್ ಖಾನ್ ಸಾವನ್ನಪ್ಪಿದ್ದಾನೆ. ಕೊಲೆ ನಡೆಸಿ ಬಳಿಕ ಆರೋಪಿಗಳು ಪರಾರಿಯಾಗಿದ್ದು ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿರುವ ಅನುಗೊಂಡನಹಳ್ಳಿ ಪೊಲೀಸರು ಮುಂದಿನ ತನಿಖೆಯನ್ನು ಕೈಗೊಂಡಿದ್ದಾರೆ. ಪರಾರಿಯಾಗಿರುವ ಆರೋಪಿಗಳ ಬಂಧನಕ್ಕೆ ಪೊಲೀಸರು ಬಲೆ ಬೀಸಿದ್ದಾರೆ.

## ಆಟೋ ಸೇವೆಯಲ್ಲಿ ವ್ಯತ್ಯಯ: ಬೆಂಗಳೂರಿನಲ್ಲಿ ಬೈಕ್ ಟ್ಯಾಕ್ಸಿಗಳಿಗೆ ಅನುಮತಿ ನೀಡದಂತೆ ಒಕ್ಕೂಟಗಳ ಆಗ್ರಹ




ಬೆಂಗಳೂರು: ಇ-ಬೈಕ್ ಟ್ಯಾಕ್ಸಿಗಳಿಗೆ ಅನುಮತಿ ನೀಡುವ ರಾಜ್ಯ ಸರ್ಕಾರದ ನಿರ್ಧಾರದ ವಿರುದ್ಧ ಆಟೋ ಒಕ್ಕೂಟಗಳು ಒಂದು ದಿನದ ಮುಷ್ಕರಕ್ಕೆ ಕರೆ ನೀಡಿರುವುದರಿಂದ ಸೋಮವಾರ ಬೆಂಗಳೂರು ರಸ್ತೆಗಳಲ್ಲಿ ಆಟೋರಿಕ್ಷಾಗಳು ಸಂಚರಿಸುವುದಿಲ್ಲ. ದ್ವಿಚಕ್ರ ವಾಹನಗಳನ್ನು (ವೈಟ್ ಬೋರ್ಡ್ ಬೈಕ್) ಬೈಕ್ ಟ್ಯಾಕ್ಸಿಗಳಾಗಿ ಬಳಸುವುದನ್ನು ನಿಷೇಧಿಸಬೇಕೆಂದು ಒಕ್ಕೂಟಗಳು ಒತ್ತಾಯಿಸಿವೆ.

ರಾಜ್ಯ ಸಾರಿಗೆ ಇಲಾಖೆಯು ತನ್ನ ಎಲೆಕ್ಟ್ರಿಕ್ ಬೈಕ್ ಟ್ಯಾಕ್ಸಿ ಯೋಜನೆಯಡಿಯಲ್ಲಿ ಮೊದಲ ಮತ್ತು ಕೊನೆಯ ಮೈಲಿ ಸಂಪರ್ಕವನ್ನು ಸುಧಾರಿಸಲು ನಗರದಲ್ಲಿ 100 ಇ-ಬೈಕ್ ಟ್ಯಾಕ್ಸಿಗಳನ್ನು ನಿರ್ವಹಿಸಲು ಖಾಸಗಿ ಕಂಪನಿ ಬೌನ್ಸ್‌ಗೆ ಅನುಮತಿ ನೀಡಿತು. 5 ಕಿ.ಮೀ.ಗೆ 25 ರೂ., 10 ಕಿ.ಮೀ.ಗೆ 50 ರೂ. ದರವನ್ನು ಇಲಾಖೆ ನಿಗದಿಪಡಿಸಿದೆ.

ಇತ್ತೀಚೆಗಷ್ಟೇ ಆಟೋ ಚಾಲಕನೊಬ್ಬ ಬೈಕ್ ಟ್ಯಾಕ್ಸಿ ಸವಾರನನ್ನು ಅಡ್ಡಗಟ್ಟಿ, ಹೆಲ್ಮೆಟ್ ಒಡೆದು, ಮತ್ತೆ ಬೈಕ್ ಟ್ಯಾಕ್ಸಿ ನಡೆಸುವುದು ಕಂಡು ಬಂದರೆ ಗಂಭೀರ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದ್ದನ್ನು ಬಂಧಿಸಲಾಗಿತ್ತು.

"ಜನರು ತಮ್ಮ ವೈಯಕ್ತಿಕ ವೈಟ್ ಬೋರ್ಡ್ ಬೈಕ್‌ಗಳು ಮತ್ತು ಸ್ಕೂಟರ್‌ಗಳನ್ನು ಟ್ಯಾಕ್ಸಿಗಳಾಗಿ ತಮ್ಮ ವಾಹನಗಳನ್ನು Rapido ನಂತಹ ಕಂಪನಿಗಳೊಂದಿಗೆ ಲಿಂಕ್ ಮಾಡುವ ಮೂಲಕ ಬಳಸುತ್ತಿದ್ದಾರೆ. ಇದು ಕಾನೂನುಬಾಹಿರವಾಗಿದೆ. ಕೋವಿಡ್ ನಂತರ ಈಗಾಗಲೇ ಆದಾಯವನ್ನು ಅನುಭವಿಸಿದ ಸುಮಾರು ಎರಡು ಲಕ್ಷ ಆಟೋ ಚಾಲಕರ ಆದಾಯವನ್ನು ತಿನ್ನುತ್ತವೆ ಎಂದು ಬೆಂಗಳೂರು ಆಟೋ ಚಾಲಕರ ಒಕ್ಕೂಟಗಳ ಒಕ್ಕೂಟದ ಸಂಚಾಲಕ ಮಂಜುನಾಥ್ ಹೇಳಿದರು.

## ಕರ್ನಾಟಕ ವಿಧಾನಸಭೆ ಚುನಾವಣೆ: ಮತದಾರರ ಪಟ್ಟಿಯಲ್ಲಿ 17,000 ಶತಾಯುಷಿಗಳು



ಬೆಂಗಳೂರು: ಮೈಸೂರು ರಾಜ್ಯದ ಕಾಲದಲ್ಲೂ ಕರ್ನಾಟಕದ ಎಲ್ಲಾ ಚುನಾವಣೆಗಳನ್ನು ನೋಡಿದ ಕೆಲವೇ ಕೆಲವು ಮತದಾರಿದ್ದಾರೆ.

ಈ ವರ್ಷದ ರಾಜ್ಯ ವಿಧಾನಸಭಾ ಚುನಾವಣೆಯ ಮತದಾರರ ಪಟ್ಟಿಯಲ್ಲಿ 17,000 ಕ್ಕೂ ಹೆಚ್ಚು ನೋಂದಾಯಿತ ಮತದಾರರು 100 ವರ್ಷಕ್ಕಿಂತ ಮೇಲ್ಪಟ್ಟವರು.

ಕರ್ನಾಟಕದಲ್ಲಿ ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯ ಪ್ರಕಾರ, ಇದು ಇಲ್ಲಿಯವರೆಗೆ ರಾಜ್ಯದಲ್ಲಿ ಅತಿ ಹೆಚ್ಚು ಶತಾಯುಷಿ ಮತದಾರರ ಸಂಖ್ಯೆಯಾಗಿದೆ.

ರಾಜ್ಯದಲ್ಲಿ ಒಟ್ಟು 5.21 ಕೋಟಿ ನೋಂದಾಯಿತ ಮತದಾರರಿದ್ದು, ಅವರಲ್ಲಿ 2.59 ಕೋಟಿ ಮಹಿಳೆಯರು ಇದ್ದಾರೆ.

ಮೊದಲ ಬಾರಿಗೆ ಮತದಾನ ಮಾಡುತ್ತಿರುವವರು 9.17 ಲಕ್ಷ ಮತ್ತು ತೃತೀಯ ಲಿಂಗ ಮತದಾರರು 4,699, ಇವರಲ್ಲದೆ 16,973 ಶತಾಯುಷಿಗಳಿದ್ದು, ಅವರಲ್ಲಿ 9,985 ಮಹಿಳೆಯರು ಇದ್ದಾರೆ.

ಈ ಶತಾಯುಷಿಗಳಲ್ಲಿ ಹಲವರು ಮತದಾನ ಮಾಡಲು ಹೋಗಬಹುದು., ಆದರೆ ಅವರಲ್ಲಿ ಅನೇಕರು ವಯಸ್ಸಿಗೆ ಸಂಬಂಧಿಸಿದ ಸಮಸ್ಯೆಗಳಿಂದ ತಮ್ಮ ಮನೆಯಿಂದ ಹೊರಬರಲು ಸಾಧ್ಯವಾಗದಿರಬಹುದು.

ಕೆಲವರು 80 ವರ್ಷಕ್ಕಿಂತ ಮೇಲ್ಪಟ್ಟ 12.15 ಲಕ್ಷ ನೋಂದಾಯಿತ ಮತದಾರರ ಭಾಗವಾಗಿದ್ದಾರೆ. ಅಂತಹ ಹಿರಿಯ ನಾಗರಿಕರಿಗೆ ಸಹಾಯ ಮಾಡಲು, ಚುನಾವಣಾ ಆಯೋಗವು ಈ ಬಾರಿ ಪೋಸ್ಟಲ್ ಬ್ಯಾಲೆಟ್ ಪರಿಚಯಿಸಿದೆ, ಅಲ್ಲಿ ಅವರು ಮನೆಯಿಂದಲೇ ಮತ ಚಲಾಯಿಸಬಹುದು.

ಬೆಂಗಳೂರು ಜಿಲ್ಲೆ (ಬೆಂಗಳೂರು ಗ್ರಾಮಾಂತರ ಮತ್ತು ಬಿಬಿಎಂಪಿ ಮಿತಿಗಳನ್ನು ಒಳಗೊಂಡಂತೆ) 4,081 ಶತಾಯುಷಿ ಮತದಾರರನ್ನು ಹೊಂದಿದೆ. ಮೈಸೂರು (1,744) ಮತ್ತು ಬೆಳಗಾವಿ (1,536) ನಂತರದ ಸ್ಥಾನದಲ್ಲಿವೆ.

ಈ ಮೂರು ಜಿಲ್ಲೆಗಳು ಎಲ್ಲಾ ಶತಾಯುಷಿ ಮತದಾರರಲ್ಲಿ ಶೇ. 40 ರಷ್ಟಿದ್ದಾರೆ . ಕೊಡಗಿನಲ್ಲಿ ಕನಿಷ್ಠ ಅಂದರೆ 112. ಗದಗದಲ್ಲಿ 122, ಯಾದಗಿರಿಯಲ್ಲಿ 142, ವಿಜಯನಗರದಲ್ಲಿ 186 ಮತ್ತು ಉತ್ತರ ಕನ್ನಡದಲ್ಲಿ 193 ಮತದಾರರಿದ್ದಾರೆ.

# ಬಿಜೆಪಿ ಬೆಳಗಾವಿ ಜಿಲ್ಲಾ ಗ್ರಾಮಾಂತರ ಜಿಲ್ಲಾ ಮಟ್ಟದ ಮಹಿಳಾ ಮೋರ್ಚಾ ಸಮಾವೇಶ



ಸುರೇಬಾನ: ರಾಜ್ಯದ ಮುಖ್ಯಮಂತ್ರಿಗಳು ಭೂರಹಿತ ಮಹಿಳೆಯರ ಕುಟುಂಬಕ್ಕೆ ಪ್ರತಿ ತಿಂಗಳು ಸಾವಿರ ರೂ. ಮಾಸಾಸನ ಘೋಷಣೆ ಮಾಡಿದ್ದು, ಬಿ.ಎಸ್. ಯಡಿಯೂರಪ್ಪನವರು, ಬಸವರಾಜ ಬೊಮ್ಮಾಯಿಯವರ ನೇತೃತ್ವದ ಸರಕಾರದಲ್ಲಿ ಎಲ್ಲ ಸಾಮಾಜಿಕ ಭದ್ರತಾ ಪಿಂಚಣಿಗಳ ಹಣವನ್ನು ಸಹ ಹೆಚ್ಚಿಸಿದೆ ಎಂದು ಬಿಜೆಪಿ ಮಹಿಳಾ ಮೋಚಾ ರಾಜ್ಯಾಧ್ಯಕ್ಷೆ ಗೀತಾ ವಿವೇಕಾನಂದ ಹೇಳಿದರು.

ಸ್ಥಳೀಯ ಸುರೇಬಾನ-ಮನಿಹಾಳ ಗ್ರಾಮದ ಶ್ರೀ ಆತ್ಮಾನಂದ ಪುಣ್ಯಾಶ್ರಮದ ಆವರಣದ ಎದುರಿನ ಆವರಣದಲ್ಲಿ ಬಿಜೆಪಿ ಬೆಳಗಾವಿ ಜಿಲ್ಲಾ ಗ್ರಾಮಾಂತರ ಜಿಲ್ಲಾ ಮಟ್ಟದ ಮಹಿಳಾ ಮೋರ್ಚಾ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು.

ಡಾ. ಬಾಬಾಸಾಹೇಬ ಅಂಬೇಡ್ಕರ ಅವರ ಆಶಯದಂತೆ ಸಮಾಜ ಸಮಾಜದ ಕನಸಿನಂತೆ, ಪ್ರಧಾನ ಮಂತ್ರಿ ನರೇಂದ್ರ ಮೋದಿ ಹಾಗೂ ಉಭಯ ಸರಕಾರಗಳು ರಾಜ್ಯದ ಜನತೆ ಹಾಗೂ ಮಹಿಳಾ ಕಲ್ಯಾಣಕ್ಕಾಗಿ ಹಲವು ಯೋಜನೆಗಳನ್ನು ಜಾರಿಗೆ ತಂದಿವೆ. ಜನತೆ ಅವುಗಳ ಸದ್ಬಳಕೆ ಮಾಡಿಕೊಳ್ಳಬೇಕು. ಎಂದ ಅವರು, ಭಾಗ್ಯಲಕ್ಷ್ಮೀ ಯೋಜನೆ, ರೈತ ವಿದ್ಯಾನಿಧಿ, ಪಿ.ಎಂ. ಕಿಸಾನ್, ವಿದ್ಯಾರ್ಥಿನಿಯರಿಗೆ ಉಚಿತ ಬಸ್ ಪಾಸ್ ಸೌಲಭ್ಯ ಸೇರಿದಂತೆ ಹಲವಾರು ಜನೋಪಯೋಗಿ ಕೆಲಸಗಳನ್ನು ಉಭಯ ಸರಕಾರಗಳು ಮಾಡಿವೆ. ಜನತೆ ಅವುಗಳ ಸದ್ಬಳಕೆ ಮಾಡಿಕೊಳ್ಳಬೇಕು. ರಾಜ್ಯದಲ್ಲಿ ಮತ್ತೊಮ್ಮೆ ಬಿಜೆಪಿ ಸರಕಾರ ಅಧಿಕಾರಕ್ಕೆ ತರಲು ಮಹಿಳೆಯರು ಆಶೀರ್ವದಿಸಬೇಕು ಎಂದರು ಕರೆ ನೀಡಿದರು.

ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಭಾರತಿ ಮಗದುಮ್ ಮಾತನಾಡಿ, ಉಭಯ ಸರಕಾರಗಳು ಮಹಿಳಾ ಕಲ್ಯಾಣಕ್ಕೆ ಸ್ತ್ರೀಶಕ್ತಿ ಸಂಘಗಳ ಮುಖಾಂತರ ಸ್ವಾವಲಂಭಿ ಬದುಕಿಗೆ ತರಬೇತಿ, ಸ್ತ್ರೀಶಕ್ತಿ ಸಂಘಗಳಿಗೆ ಸಬ್ಸಿಡಿ ರೂಪದಲ್ಲಿ ಸಾಲ ಸೌಲಭ್ಯ ನೀಡಿವೆ. ಮಹಿಳೆಯರು ಗೌರವಯುತವಾಗಿ ಜೀವನ ನಡೆಸಲು ವಿರೋಧ ಪಕ್ಷದವರ ಸುಳ್ಳು ಭರವಸೆಯ ಗ್ಯಾರಂಟಿ ಕಾರ್ಡ ಹಾಗೂ ಆಶ್ವಾಸನೆಗಳಿಗೆ ಕಿವಿಗೊಡದೆ 2023ರ ಚುನಾವಣೆಯಲ್ಲಿ ಬಿಜೆಪಿ ಪಕ್ಷಕ್ಕೆ ಸಂಪೂರ್ಣ ಬಹುಮತ ನೀಡಲು ಶ್ರಮಿಸಬೇಕು ಎಂದು ಕಿವಿಮಾತು ಹೇಳಿದರು.

ಶಾಸಕ ಮಹಾದೇವಪ್ಪ ಯಾದವಾಡ ಮಾತನಾಡಿ, ಪ್ರಧಾನ ಮಂತ್ರಿ ನರೇಂದ್ರ ಮೋದಿಜೀ ಭಾರತವನ್ನು ವಿಶ್ವಗುರು ಮಾಡುವ ನಿಟ್ಟಿನಲ್ಲಿ ಜನತ್ತಿನ ಗಮನ ಸೆಳೆದ ಏಕೈಕ ಪ್ರಧಾನ ಮಂತ್ರಿಯಾಗಿದ್ದಾರೆ.

ಮಹಿಳೆಯರು ಮನಸ್ಸು ಮಾಡಿದರೆ ಎಲ್ಲವನ್ನು ಸಾಧಿಸಲು ಸಾಧ್ಯವಿದೆ. ಸ್ತ್ರೀಕುಲದ ಕಲ್ಯಾಣಕ್ಕಾಗಿ ಭಾರತೀಯ ಜನತಾ ಪಕ್ಷದ ಡಬಲ್ ಇಂಜಿನ್ ಸರಕಾರ ಹಲವು ಯೋಜನೆಗಳನ್ನು ಜಾರಿಗೆ ತಂದಿದೆ. ತಾಯಂದಿರ ಆಶೀರ್ವಾದಿಂದ 2023ರ ಚುನಾವಣೆಯಲ್ಲಿ ರಾಜ್ಯದಲ್ಲಿ 150ಕ್ಕೂ ಹೆಚ್ಚು ಸ್ಥಾನಗಳಲ್ಲಿ ಬಿಜೆಪಿ ಗೆಲವು ಸಾಧಿಸಿ, ಅಧಿಕಾರಕ್ಕೆ ಬರಲು ಸರ್ವರು ಶ್ರಮಿಸಬೇಕು ಎಂದರು.

ಬಿಜೆಪಿ ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ರೇಖಾ ಚಿನ್ನಾಕಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ನ್ಯಾಯವಾದಿ ಹಾಗೂ ಬಿಜೆಪಿ ಮುಖಂಡ ಪಿ.ಎಫ್. ಪಾಟೀಲ, ಮಾಜಿ ಜಿ.ಪಂ ಸದಸ್ಯ ರಮೇಶ ದೇಶಪಾಂಡೆ, ಓಬಿಸಿ ಮೋರ್ಚಾದ ಮುಖಂಡ ಲಕ್ಷ್ಮಣ ತಪಸಿ, ಧನಲಕ್ಷ್ಮೀ ಸಹಕಾರಿ ಸಕ್ಕರೆ ಕಾರ್ಖಾನೆಯ ಅಧ್ಯಕ್ಷ ಮಲ್ಲಣ್ಣ ಯಾದವಾಡ, ಡಾ. ಕೆ.ವ್ಹಿ. ಪಾಟೀಲ, ಮಾರುತಿ ಕೊಪ್ಪದ, ವಿಜಯ ಗುಡದಾರಿ, ಬಿಜೆಪಿ ಮಂಡಲ ಅಧ್ಯಕ್ಷ ರಾಜೇಶ ಬೀಳಗಿ, ಮಹಿಳಾ ಮೋರ್ಚಾ ಕಾರ್ಯದರ್ಶಿ ಶೋಭಾ ನಗರಿ, ಮಂಡಲ ಕಾರ್ಯದರ್ಶಿ ಉಮೇಶ ಹಕಾಟಿ, ರಾಜೇಶ್ವರಿ ದೇಸಾಯಿ, ನಯನಾ ರಸ್ಕೆ, ಉಮಾದೇವಿ ಭೋಪನ್ನವರ, ಶಾಂತಾ ಮಡ್ಡಿಕರ, ಶಾರದಾ ಪಾಳೇಕರ, ಮಹಾದೇವಿ ಗುರುಬಸನ್ನವರ, ಲಕ್ಷ್ಮಣ ಯಲ್ಲರಡ್ಡಿ, ನಿಂಗಮ್ಮ ಮೆಳ್ಳಿಕೇರಿ ಸೇರಿದಂತೆ ಇತರರಿದ್ದರು.

# 7 ನೂತನ ವಿ.ವಿ.ಗಳಿಗೆ ಕುಲಪತಿಗಳ ನೇಮಕ



ಬೆಂಗಳೂರು: ರಾಜ್ಯ ಸರಕಾರವು ನೂತನವಾಗಿ ಸ್ಥಾಪಿಸಿರುವ ಚಾಮರಾಜನಗರ, ಬೀದರ್, ಹಾವೇರಿ, ಹಾಸನ, ಕೊಡಗು, ಕೊಪ್ಪಳ ಮತ್ತು ಬಾಗಲಕೋಟೆ ವಿಶ್ವವಿದ್ಯಾಲಯಗಳಿಗೆ ಚೊಚ್ಚಲ ಕುಲಪತಿಗಳನ್ನು ನೇಮಿಸಿ, ಸೋಮವಾರ ಆದೇಶ ಹೊರಡಿಸಿದೆ ಎಂದು ಉನ್ನತ ಶಿಕ್ಷಣ ಸಚಿವ ಡಾ.ಸಿ ಎನ್ ಅಶ್ವತ್ಥನಾರಾಯಣ ತಿಳಿಸಿದ್ದಾರೆ.

ಇದರಂತೆ ಬೆಂಗಳೂರು ವಿವಿ ಪತ್ರಿಕೋದ್ಯಮ ವಿಭಾಗದ ಡಾ.ಬಿ ಕೆ ರವಿ ಅವರನ್ನು ಕೊಪ್ಪಳ ವಿವಿ, ಬಾಗಲಕೋಟೆಯ ತೋಟಗಾರಿಕೆ ವಿ.ವಿ.ದ ಡಾ.ಅಶೋಕ ಸಂಗಪ್ಪ ಆಲೂರು ಅವರನ್ನು ಕೊಡಗು ವಿವಿ, ಮೈಸೂರು ವಿವಿ ಮಾನವಶಾಸ್ತ್ರ ವಿಭಾಗದ ಡಾ.ಎಂ ಆರ್ ಗಂಗಾಧರ ಅವರನ್ನು ಚಾಮರಾಜನಗರ ವಿವಿ, ಬೆಳಗಾವಿಯ ಕೆ.ಎಸ್.ಗೋಗಟೆ ಎಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲರಾದ ಡಾ.ಆನಂದ್ ಶರದ್ ದೇಶಪಾಂಡೆ ಅವರನ್ನು ಬಾಗಲಕೋಟೆ ವಿವಿ, ಕುವೆಂಪು ವಿ.ವಿ.ದ ಡಾ.ಬಿ ಎಸ್ ಬಿರಾದಾರ್ ಅವರನ್ನು ಬೀದರ್ ವಿವಿ, ಬಾಗಲಕೋಟೆಯ ಬಸವೇಶ್ವರ ಎಂಜಿನಿಯರಿಂಗ್ ಕಾಲೇಜಿನ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ವಿಭಾಗದ ಡಾ.ಸುರೇಶ್ ಎಚ್ ಜಂಗಮಶೆಟ್ಟಿ ಅವರನ್ನು ಹಾವೇರಿ ವಿವಿ ಮತ್ತು ಧಾರವಾಡದ ಕರ್ನಾಟಕ ವಿ.ವಿ.ದ ನಿವೃತ್ತ ಪ್ರೊಫೆಸರ್ ಆಗಿರುವ ಡಾ.ಟಿ ಸಿ ತಾರಾನಾಥ್ ಅವರನ್ನು ಹಾಸನ ವಿಶ್ವವಿದ್ಯಾಲಯದ ಕುಲಪತಿಗಳಾಗಿ ನೇಮಿಸಲಾಗಿದೆ ಎಂದು ಅವರು ಪತ್ರಿಕಾ ಪ್ರಕಟಣೆಯಲ್ಲಿ ಹೇಳಿದ್ದಾರೆ.

ಸರಕಾರವು ಜಿಲ್ಲೆಗೆ ಒಂದಾದರೂ ವಿಶ್ವವಿದ್ಯಾಲಯ ಇರಬೇಕು ಎನ್ನುವ ತತ್ತ್ವದಡಿಯಲ್ಲಿ ಈ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಿರುವುದನ್ನು ಇಲ್ಲಿ ಸ್ಮರಿಸಬಹುದಾಗಿದೆ.

# ಶ್ರೀ ಜಗದ್ಗುರು ಪಂಚಾಚಾರ್ಯ ಯುಗಮಾನೋತ್ಸವ ಮತ್ತು ಶ್ರೀ ಜಗದ್ಗುರು ರೇಣುಕಾಚಾರ್ಯ ರಥೋತ್ಸವ

ಹುಬ್ಬಳ್ಳಿ : ಹುಬ್ಬಳ್ಳಿ ತಾಲೂಕ ತಿರುಮಲಕೊಪ್ಪದ (ತಡಸ ಕ್ರಾಸ್) ಶ್ರೀ ಜಗದ್ಗುರು ರೇಣುಕ ಧರ್ಮ ನಿವಾಸದಲ್ಲಿ ಮಾರ್ಚ 22ರಂದು ಸಂಜೆ ಶ್ರೀ ಜಗದ್ಗುರು ಪಂಚಾಚಾರ್ಯ ಯುಗಮಾನೋತ್ಸವ, ಶ್ರೀ ಜಗದ್ಗುರು ರೇಣುಕಾಚಾರ್ಯ ರಥೋತ್ಸವ ಮತ್ತು ಜನ ಜಾಗೃತಿ ಧರ್ಮ ಸಮಾವೇಶ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳವರ ಸಾನ್ನಿಧ್ಯದಲ್ಲಿ ಜರುಗಲಿದೆ.

ಅ.ಭಾ.ವೀರಶೈವ ಶಿವಾಚಾರ್ಯ ಸಂಸ್ಥೆಯ ಅಧ್ಯಕ್ಷರಾದ ಮುಕ್ತಿಮಂದಿರ ಕ್ಷೇತ್ರದ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಉದ್ಘಾಟಿಸುವ ಸಮಾರಂಭದಲ್ಲಿ ಸುಳ್ಳದ ಶಿವಸಿದ್ಧರಾಮೇಶ್ವರ ಶಿವಾಚಾರ್ಯರು, ಸೂಡಿಯ ಡಾ.ಕೊಟ್ಟೂರು ಬಸವೇಶ್ವರ ಶಿವಾಚಾರ್ಯರು, ಮಳಲಿ ಸಂಸ್ಥಾನ ಮಠದ ಡಾ.ನಾಗಭೂಷಣ ಶಿವಾಚಾರ್ಯರು, ದೇವಿಕೊಪ್ಪದ ಸಂಗಮೇಶ್ವರ ದೇವರು ಉಪದೇಶಾಮೃತ ನೀಡುವರು.

ಮುಖ್ಯ ಅತಿಥಿಗಳಾಗಿ ಶಾಸಕರಾದ ಕುಸುಮಾವತಿ ಶಿವಳ್ಳಿ, ಮಾಜಿ ಸಚಿವ ಪಿ.ಸಿ.ಸಿದ್ಧನಗೌಡ್ರ, ಮಾಜಿ ಸಂಸದ ಎಂ.ಸಿ.ಕುನ್ನೂರು, ಮಾಜಿ ಶಾಸಕರಾದ ಎಸ್.ಜಿ.ಚಿಕ್ಕನಗೌಡ್ರ, ಎಂ.ಎಸ್.ಅಕ್ಕಿ, ಎಂ.ಆರ್.ಪಾಟೀಲ, ಬಸವರಾಜ ಕುಂದಗೋಳಮಠ, ರವಿ ಜಟಾರ, ತಿಪ್ಪಣ್ಣ ಬರದ್ವಾಡ, ಚನ್ನಮ್ಮ ಶಿವನಗೌಡ್ರ, ಶಿವಪ್ರಕಾಶ ಲಿಂಬಯ್ಯಸ್ವಾಮಿಮಠ, ಎಂ.ವಿ. ಚರಂತಿಮಠ, ಡಾ.ಎಸ್.ಪಿ.ಬಳಿಗೇರ, ವೀರೇಶ ಪಾಟೀಲ, ಪ್ರಕಾಶ ಬೆಂಡಿಗೇರಿ, ವಿಶ್ವನಾಥ ಹಿರೇಗೌಡ್ರ, ಶಂಕರಗೌಡ ಸಿದ್ಧನಗೌಡ್ರ, ಎನ್.ಎಸ್.ಪಾಟೀಲ ನೂಲ್ವಿ ಸೇರಿದಂತೆ ಹಲವಾರು ಗಣ್ಯರು ಪಾಲ್ಗೊಳ್ಳಲಿರುವರು. ಅಂದು ಸಂಜೆ ಶ್ರೀ ಜಗದ್ಗುರು ರೇಣುಕಾಚಾರ್ಯ ರಥೋತ್ಸವ ಸಡಗರ ಸಂಭ್ರಮದಿಂದ ಜರುಗಲಿದೆ.

ದಿನಾಂಕ 21 ಮಂಗಳವಾರ ಪ್ರಾತ:ಕಾಲ ಲಿಂ.ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳ ಮಂಗಲ ಮೂರ್ತಿಗೆ ರುದ್ರಾಭಿಷೇಕ ಸಂಜೆ ತಿರುಮಲಕೊಪ್ಪ ಗ್ರಾಮದಿಂದ ಉತ್ಸವ ಮೂರ್ತಿ ಮತ್ತು ಕಳಸ ಮೆರವಣಿಗೆ ಜರುಗುವುದು. ದಿನಾಂಕ 22 ಬುಧವಾರ ಪ್ರಾತ:ಕಾಲ ಜಂಗಮ ವಟುಗಳಿಗೆ ಶಿವದೀಕ್ಷೆ ಅಯ್ಯಾಚಾರ ನಡೆಯಲಿದ್ದು ದಿನಾಂಕ 23ರ ಬೆಳಿಗ್ಗೆ ಹೆಣ್ಣು ಮಕ್ಕಳಿಗೆ ಉಡಿ ತುಂಬುವ ಕಾರ್ಯಕ್ರಮ ಸಂಜೆ ಪಾರ್ವತಿ ರಥೋತ್ಸವ, ಕಡುಬಿನ ಕಾಳಗ ಹಾಗೂ ಧರ್ಮ ಸಭೆ ನಡೆಯುವುದು.

# ವಿಶ್ವಕರ್ಮ ಸಮಾಜಕ್ಕೆ ಸಾಮಾಜಿಕ, ಶೈಕ್ಷಣಿಕ ಹಾಗೂ ರಾಜಕೀಯ ಕ್ಷೇತ್ರಗಳಲ್ಲಿ ಪ್ರಾತಿನಿಧ್ಯಕ್ಕೆ ಮನವಿ ಮಾರ್ಚ್ 24 ರಂದು ರಾಜ್ಯ ಮಟ್ಟದ ಸಮಾವೇಶ



ಬೆಂಗಳೂರು: ಕರ್ಮ ಸಿದ್ಧಾಂತವನ್ನ ಪಾಲಿಸುತ್ತಾ ಬಂದಿರುವ ಶ್ರಮಿಕ ಜನಾಂಗವಾದ ವಿಶ್ವಕರ್ಮ ಸಮಾಜ ಮೂಲ ಸೌಲಭ್ಯಗಳಿಂದ ವಂಚಿತವಾಗಿದೆ. ಧಾರ್ಮಿಕ, ಸಾಮಾಜಿಕ, ಶೈಕ್ಷಣಿಕ ಹಾಗೂ ರಾಜಕೀಯ ಕ್ಷೇತ್ರಗಳಲ್ಲಿ ಪ್ರಾತಿನಿಧ್ಯವಿಲ್ಲದೆ ಸೊರಗುತ್ತಿದ್ದು ಸಮಾಜಕ್ಕೆ ನ್ಯಾಯ ಕಲ್ಪಿಸುವ ಒಕ್ಕೊರಲಿನ ಪ್ರಾತಿನಿಧ್ಯಕ್ಕೆ ಮಾರ್ಚ್ 24 ರಂದು ಬೆಂಗಳೂರಿನಲ್ಲಿ ರಾಜ್ಯ ಮಟ್ಟದ ವಿಶ್ವಕರ್ಮ ಸಮಾಜದ ಜನಜಾಗೃತಿ ಸಮಾವೇಶವನ್ನು ಆಯೋಜಿಸಲಾಗಿದೆ ಎಂದು ಶ್ರೀ ವಿಶ್ವಕರ್ಮ ಸೇವಾ ಪ್ರತಿಷ್ಠಾನದ ಕಾರ್ಯಾಧ್ಯಕ್ಷರು ಹಾಗೂ ಜೆಡಿಎಸ್ ರಾಜ್ಯ ಉಪಾಧ್ಯಕ್ಷರಾದ ಡಾ॥ಬಿ.ಎಂ ಉಮೇಶ್ ಕುಮಾರ್ ಹೇಳಿದರು.

ನಗರದ ಪ್ರೆಸ್‌ಕ್ಲಬ್‌ನಲ್ಲಿ ಪತ್ರಿಕಾಗೋಷ್ಠಿಯನ್ನ ಉದ್ದೇಶಿಸಿ ಮಾತನಾಡಿದ ಅವರು, ರಾಜ್ಯದ ಅಭಿವೃದ್ಧಿಯಲ್ಲಿ ವಿಶ್ವಕರ್ಮ ಸಮುದಾಯದ ಗಮನಾರ್ಹ ಕೊಡುಗೆಯನ್ನು ನೀಡಿದೆ. ರಾಜ್ಯದ ಉದ್ದಗಲಕ್ಕೂ ನೆಲೆಸಿರುವ ಸಮಸ್ತ ವಿಶ್ವ ಕರ್ಮ ಜನಾಂಗ ಒಟ್ಟಾರೆ ಮೂಲ ಸೌಲಭ್ಯಗಳಿಂದ ವಂಚಿತಗೊಂಡಿದೆ. ಸಮುದಾಯಕ್ಕೆ ಸಿಗಬೇಕಾದಂತಹ ಹಲವಾರು ಸೌಲಭ್ಯಗಳು ದೊರೆತಿಲ್ಲ ಇದಕ್ಕೆ ರಾಜಕೀಯ ಹಾಗೂ ಸಾಮಾಜಿಕ ಇಚ್ಛಾಶಕ್ತಿಯ ಕೊರತೆ ಹೆಚ್ಚಾಗಿದೆ. ನಮ್ಮ ಸಮುದಾಯಕ್ಕೆ ಸಿಗಬೇಕಾದಂತಹ ಧಾರ್ಮಿಕ, ಸಾಮಾಜಿಕ, ಶೈಕ್ಷಣಿಕ ಹಾಗೂ ರಾಜಕೀಯ ಸೌಲಭ್ಯಗಳನ್ನು ಪಡೆದುಕೊಳ್ಳುವ ನಿಟ್ಟಿನಲ್ಲಿ ಸಮಾಜವನ್ನ ಮತ್ತೊಮ್ಮೆ ಪುನರುತ್ಥಾನಗೊಳಿಸುವ ಅವಶ್ಯಕತೆ ಇದೆ. ಇದು ಕೇವಲ ಮಾತಿನಿಂದ ಸಾಧ್ಯವಿಲ್ಲ. ಮಾತು ಕೃತಿಯಾಗಲು ನಾವೆಲ್ಲರೂ ಒಗ್ಗಟ್ಟಾಗಬೇಕಾಗಿದೆ. ಎಲ್ಲರೂ ಒಂದೇ ಧ್ವನಿಯಿಂದ ನಮ್ಮ ಒತ್ತಾಯವನ್ನು ಮಂಡಿಸಬೇಕಿದೆ

ಮಾಜಿ ಮುಖ್ಯಮಂತ್ರಿಗಳಾದ ಹೆಚ್. ಡಿ ಕುಮಾರಸ್ವಾಮಿ ಅವರು ಸಮಾವೇಶಕ್ಕೆ ಚಾಲನೆ ನೀಡಲಿದ್ದಾರೆ.

ಶ್ರೀ ವಿಶ್ವಕರ್ಮ ಜಗದ್ಗುರು ಪೀಠದ ಪೀಠಾಧಿಪತಿಗಳು ಶ್ರೀ ಶ್ರೀ ಶ್ರೀ ಶಿವಸುಜ್ಞಾನತೀರ್ಥ ಮಹಾಸ್ವಾಮೀಜಿಗಳು ದಿವ್ಯ ಸಾನಿಧ್ಯವನ್ನ ವಹಿಸಲಿದ್ದಾರೆ. ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಸಾಹಿತಿಗಳು ಪದ್ಮಶ್ರೀ ಡಾ ಚಂದ್ರಶೇಖರ ಕಂಬಾರ ರವರು ಪಂಚಶಿಲ್ಪಿಗಳಿಗೆ ಪ್ರಶಸ್ತಿ ಪ್ರಧಾನ ಮಾಡಲಿದ್ದು ಶ್ರೀ ವಿಶ್ವಕರ್ಮ ಸೇವಾ ಪ್ರತಿಷ್ಠಾನದ ಅಧ್ಯಕ್ಷರಾದ ನಿವೃತ್ತ ಐಎಎಸ್ ಅಧಿಕಾರಿ ಕೆ.ಎಸ್. ಪ್ರಭಾಕರ್ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಜೆಡಿಎಸ್ ಪಕ್ಷದ ರಾಜ್ಯಾಧ್ಯಕ್ಷರಾದ ಸಿ.ಎಂ ಇಬ್ರಾಹಿಂ ಜನತಾ ಸೇವಕ ಪುಸ್ತಕ ಬಿಡುಗಡೆಗೊಳಿಸಲಿದ್ದು, ಮಾಜಿ ಸಚಿವರಾದ ಹೆಚ್.ಡಿ ರೇವಣ್ಣ ಅವರು, ಧರ್ಮಜಾಗೃತಿ ಗ್ರಂಥವನ್ನು ಬಿಡುಗಡೆಗೊಳಿಸಲಿದ್ದಾರೆ.

ಶ್ರೀ ವಿರಾಟ್ ವಿಶ್ವಕರ್ಮ ಪಲ್ಲಕ್ಕಿ ಉತ್ಸವಕ್ಕೆ ಮಾನ್ಯ ವಿಧಾನಪರಿಷತ್ ಸದಸ್ಯರಾದ ಡಾ. ಟಿ.ಎ ಶರವಣ ಅವರು ಚಾಲನೆ ನೀಡಲಿದ್ದಾರೆ. ಶ್ರೀ ವಿರಾಟ್ ವಿಶ್ವಕರ್ಮ ಮಹೋತ್ಸವದ ಸಂಚಿಕೆಯನ್ನ ಬಸವನಗುಡಿ ವಿಧಾನಸಭಾ ಕ್ಷೇತ್ರದ ಜೆಡಿಎಸ್ ಪಕ್ಷದ ಅಭ್ಯರ್ಥಿ ಅರಮನೆ ಶಂಕರ್ ಬಿಡುಗಡೆಗೊಳಿಸಲಿದ್ದಾರೆ. ವಿಧಾನಪರಿಷತ್ ಸದಸ್ಯರಾದ ಕೆ.ಎ ತಿಪ್ಪೇಸ್ವಾಮಿ ಶ್ರೀ ವಿರಾಟ್ ವಿಶ್ವಕರ್ಮ ಧ್ವನಿ ಸಾಂದ್ರತೆ ಬಿಡುಗಡೆಗೊಳಿಸಲಿದ್ದಾರೆ

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಶಾಸಕರಾದ ಶ್ರೀ ಎ.ಮಂಜುನಾಥ್, ಶ್ರೀ ಮಂಜುನಾಥ, ಮಾಜಿ ಶಾಸಕರಾದ ಶ್ರೀ ಸುಧಾಕರ್ ಲಾಲ್ , ಜೆಡಿಎಸ್ ಮುಖಂಡ ಶ್ರೀ ಶ್ರೀ ಬಾಗೇಗೌಡರು, ಪಕ್ಷದ ಅಭ್ಯರ್ಥಿ ಶ್ರೀ ವಿ.ನಾರಾಯಣಸ್ವಾಮಿ , ಶ್ರೀ ಸುಧಾಕರ್ ಎಸ್ ಶೆಟ್ಟಿ ಜೆಡಿಎಸ್ ಪಕ್ಷದ ಬೆಂಗಳೂರು ಅಧ್ಯಕ್ಷರಾದ ಆರ್ ಪ್ರಕಾಶ್ ಹಾಗೂ ಅನೇಕ ಮುಖಂಡರು ಹಾಗೂ ನಾಯಕರು ಭಾಗವಹಿಸಲಿದ್ದಾರೆ. ರಾಜ್ಯದ ಎಲ್ಲಾ ಭಾಗಗಳಿಂದ ವಿಶ್ವಕರ್ಮ ಸಮುದಾಯದ ಮುಖಂಡರುಗಳು ಹಾಗೂ ಸಾವಿರಾರು ಜನರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

# ಶುಭಾ ಹತ್ತಳ್ಳಿ ಗೆ ಚಿನ್ನದ ಪದಕ





ಬೆಳಗಾವಿ: ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ವ್ಯಾಪ್ತಿಯ ತೊರವಿ ಫ.ಗು ಹಳಕಟ್ಟಿ ಸ್ನಾತಕೋತ್ತರ ಕೇಂದ್ರದ ಸಮಾಜ ಕಾರ್ಯ ವಿಭಾಗದಕ್ಕೆ ಮೊದಲ ರ್ಯಾಂಕ್ ಪಡೆದ ಶುಭಾ ಹತ್ತಳ್ಳಿ ಅವರಿಗೆ ವಿಶ್ವವಿದ್ಯಾಲಯದಿಂದ ಚಿನ್ನದ ಪದಕ ಹಾಗೂ ಪದವಿ ಪ್ರಧಾನ ಮಾಡಲಾಯಿತು.

ಸುವರ್ಣ ವಿಧಾನ ಸೌಧದಲ್ಲಿ ಸೋಮವಾರ (ಮಾ.20) ನಡೆದ ರಾಣಿ ಚನ್ನಮ್ಮ ವಿಶ್ವ ವಿದ್ಯಾಲಯದ 11 ನೇ ವಾರ್ಷಿಕ ಘಟಿಕೋತ್ಸವ ಕಾರ್ಯಕ್ರಮದಲ್ಲಿ ಪದವಿ ಪ್ರಧಾನ ಮಾಡಲಾಯಿತು.

ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್, ವಿಶ್ವ ವಿದ್ಯಾಲಯದ ಕುಲಪತಿ ಪ್ರೊ. ರಾಮಚಂದ್ರಗೌಡ, ಮೌಲ್ಯಮಾಪನ ಕುಲಸಚಿವರಾದ ಶಿವಾನಂದ ಗೊರನಾಳೆ ಹಾಗೂ ಬೋಧಕ, ಬೋಧಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಲಿಂಗಾಯತ ಕ್ಷೇಮಾಭಿವೃದ್ಧಿ ಸಂಘದಿಂದ ಮಹಿಳಾ ದಿನ ಆಚರಣೆ



ಬೆಳಗಾವಿ: ಲಿಂಗಾಯತ ಕ್ಷೇಮಾಭಿವೃದ್ಧಿ ಸಂಘದ ಮಹಿಳೆಯರಿಂದ ದಿನಾಂಕ 19,03,2023ರಂದು ರವಿವಾರ ಸತ್ಸಂಗದ ಮನೆಯಲ್ಲಿ "ಮಹಿಳಾ ದಿನಾಚರಣೆ"ಯನ್ನು ಆಚರಿಸಲಾಯಿತು.

ಅಧ್ಯಕ್ಷರು ಎಸ್, ಜಿ ಸಿದ್ನಾಳ ಅವರು ಮಹಿಳೆ ಎಲ್ಲ ಹಕ್ಕುಗಳಿಂದ ವಂಚಿತಳಾಗಿ ಶೂದ್ರರಂತೆ ಶೋಷಣೆಗೆ ಒಳಗಾಗಿದ್ದಳು. ಹೆಣ್ಣು ಎಂದರೆ ಹುಣ್ಣು ಎಂಬಂತೆ ಕಾಣುತ್ತಿದ್ದರು.

ಅವಳ ಸ್ಥಿತಿ ಚಿಂತಾಜನಕವಾಗಿತ್ತು. ಹನ್ನೆರಡನೇ ಶತಮಾನದಲ್ಲಿ ಬಸವಣ್ಣನವರು ಮಹಿಳೆಗೆ ಸಾಮಾಜಿಕ ಆರ್ಥಿಕ ಧಾರ್ಮಿಕ, ವೈಚಾರಿಕವಾಗಿ ಅನುಭವ ಮಂಟಪದಲ್ಲಿ ಮುಕ್ತವಾಗಿ ಅವಕಾಶವನ್ನು ಕೊಟ್ಟರು ಅದರ ಪರಿಣಾಮವಾಗಿ ಅಕ್ಕ ಮಹಾದೇವಿ, ಸತ್ಯಕ, ನೀಲಾಂಬಿಕೆ , ಗಂಗಾಂಬಿಕೆ ,ಮುಕ್ತಾಯಕ್ಕ ತನ್ನ ಅಣ್ಣ ಅಜಗಣ್ಣ ಹೆಸರಿನ ಅಂಕಿತದಲ್ಲಿ ವಚನಗಳನ್ನು ರಚನೆ ಮಾಡಿದಳು, ಅಷ್ಟೇ ಅಲ್ಲದೆ ಮಹಾ ಮೇಧಾವಿ ಅಲ್ಲಮ ಪ್ರಭುಗಳನ್ನೇ ಪ್ರಶ್ನಿಸಿದಳು ಮಹಿಳೆಯರಲ್ಲಿ ಇಂತಹ ಧೈರ್ಯವನ್ನು ತುಂಬಿದವರು ಶರಣರು.

ಸುಮಾರು 33, 35ವಚಕಾರ್ತಿಯರು ಹೊರಹೊಮ್ಮಿದರು. "ಹೆಣ್ಣು ಹೆಣ್ಣಲ್ಲ ಹೆಣ್ಣು ರಕ್ಕಸಿಯಲ್ಲ ಹೆಣ್ಣು ಸಾಕ್ಷಾತ್ ಕಪಿಲ ಸಿದ್ದಮಲ್ಲಿಕಾರ್ಜನ ". "ಒಳಗೆ ಸುಳಿಯುವ ಆತ್ಮ ಹೆಣ್ಣು ಅಲ್ಲ ಗಂಡು ಅಲ್ಲ" ಎಂದು ಲಿಂಗ ಸಮಾನತೆ ಸಾರಿದವರು ಶರಣರು ಎಂದು ಹೇಳಿದರು. ಶಂಕರ ಶೆಟ್ಟಿ ಅವರು "ಮಾತೃ ಸ್ವರೂಪಿಯಾದ ಹೆಣ್ಣು ಅವಳಿಗೆ ಅವಳೆ ಸಾಟಿ " "ಉಪ್ಪಿಗಿಂತ ರುಚಿಯಿಲ್ಲ ತಾಯಿಗಿಂತ ಬಂಧುವಿಲ್ಲ" ಎಂದು ಮಹಿಳೆಯ ಮಹತ್ವ ಕುರಿತು ಮಾತನಾಡಿದರು.

ಶರಣ ಮಹಾದೇವ ಕೋರೆ ಅವರು ಅಪ್ಪ ಬಸವಣ್ಣನವರು ತಮ್ಮ ಅಕ್ಕ ನಾಗಲಾಂಬಿಕೆಯ ಕಷ್ಟಗಳನ್ನು ಅತಿ ಹತ್ತಿರದಿಂದ ಕಂಡು ಹೆಣ್ಣು ಮಕ್ಕಳನ್ನು ಎಲ್ಲ ಸಮಸ್ಯೆಗಳಿಂದ ಮಕ್ತರಾಗಿಸಿದರು ಎಂದು ಹೇಳಿದರು.

ಶರಣೆ ವಿಜಯಾ ಅಮ್ಮಣಿಗಿಯವರು ಅಕ್ಕಮಹಾದೇವಿಯ ವಚನ ವಿಶ್ಲೇಷಣೆ ಮಾಡಿದರು, ಲಲಿತಾ ರುದ್ರಗೌಡರವರು ಐದು ವಚನಗಳನ್ನು ಕಂಠ ಪಾಠ ಹೇಳಿದರು.

ವಿಭೂತಿಯ ಮಹತ್ವ ಕುರಿತು ಚನ್ನ ಬಸವಣ್ಣವರ ವಚನವನ್ನು, ಮೇಘಾ ಪಾಟೀಲ್ ಶೋಭಾ ಶಿವಳ್ಳಿ, ತ್ರಿವೇಣಿ ಪಾಟೀಲ್, ರಾಜೇಶ್ವರಿ ತಿಪಶೆಟ್ಟಿ, ದಾಕ್ಷಾಯಿಣಿ ಉಡದಾರ, ರೇಖಾ ಮುದ್ದಾಪುರ ಸುಂದರವಾಗಿ ವಚನ ನೃತ್ಯವನ್ನು ಮಾಡಿದರು.

ಜಾನಪದದ ವೇಷಭೂಷಣದಲ್ಲಿ ಜಾನಪದಗಳನ್ನು ಹಾಡಿದರು. ಸುನಿತಾ ನಂದೆಣ್ಣವರ ನಿರೂಪಣೆ ಮಾಡಿದರು.

ಶರಣ ಕಟ್ಟಿಮನಿ ಅವರು ವಂದನಾರ್ಪಣೆ ಸಲ್ಲಿಸಿದರು. ಶರಣರಾದ ರುದ್ರಗೌಡರ, ಕುಂದ್ರಾಳ ಬಿ ಡಿ ಪಾಟೀಲ್, ಸಿದ್ದರಾಮ,ಕಮತೆ ಮುಂತಾದವರು ಶರಣೆ-ಯರಾದ ಶಾಂತಾ ಕಳಸಣ್ಣವರ ಶೋಭಾ ಕಮತೆ ತಾಯಂದಿರು ಮತ್ತು ಶರಣೆಯರು ಉಪಸ್ಥಿತರಿದ್ದರು.

# ಯುಗಾದಿ ಮಹೋತ್ಸವಗಳಲ್ಲಿ ಶ್ರೀ ಸ್ವಾಮಿಯವರ ಸ್ಪರ್ಶ ದರ್ಶನ ಸ್ಥಗಿತ

ಬೆಳಗಾವಿ: ಶ್ರೀಶೈಲ ಮಹಾ ಕ್ಷೇತ್ರದಲ್ಲಿ ಮಾ. 19, 2023 ರಿಂದ ಮಾ.23, 2023 ರ ವರೆಗೆ ಯುಗಾದಿ ಮಹೋತ್ಸವಗಳು ನಡೆಯುತ್ತವೆ.

ಐದು ದಿವಸಗಳ ಪರ್ಯಂತ ನಡೆಯುವ ಈ ಉತ್ಸವಗಳ ಸಂದರ್ಭದಲ್ಲಿ 16 ಲಕ್ಷಕ್ಕೂ ಹೆಚ್ಚಿನ ಭಕ್ತರು ಶ್ರೀ ಕ್ಷೇತ್ರವನ್ನು ಸಂದರ್ಶಿಸಬಹುದಾಗಿದೆ. ಉತ್ಸವಗಳ ಪ್ರಾರಂಭಕ್ಕಿಂತಲೂ ಒಂದು ವಾರು ಮುಂಚಿನಿಂದ ಅಂದರೆ ಮಾರ್ಚ.12 2023 ರಿಂದ ಅಧಿಕ ಸಂಖ್ಯೆಯಲ್ಲಿ ಭಕ್ತರು ಈ ಕ್ಷೇತ್ರವನ್ನು ಸಂದರ್ಶಿಸುತ್ತಾರೆ.

ಈ ಉತ್ಸವಗಳ ಅಂಗವಾಗಿ ಕರ್ನಾಟಕ ರಾಜ್ಯದಿಂದ ಮುಖ್ಯವಾಗಿ ಉತ್ತರ ಕರ್ನಾಟಕ ಮತ್ತು ಮಹಾರಾಷ್ಟ್ರದಲ್ಲಿರುವ ಸೋಲಾಪುರ, ಸಾಂಗ್ಲಿ ಮುಂತಾದ ಪ್ರಾಂತ್ಯಗಳಿಂದ ಭಕ್ತರು ಬರುತ್ತಾರೆ, ಇವರಲ್ಲಿ ಅನೇಕ ಭಕ್ತರು ಪಾದಯಾತ್ರೆಯಲ್ಲಿ ಶ್ರೀ ಶೈಲಕ್ಕೆ ಬರುವುದು ವಿಶೇಷ.

ಆದರೆ ಭಕ್ತರಿಗೆಲ್ಲರಿಗೂ ಸೌಕರ್ಯಯುತ ದರ್ಶನವನ್ನು ಕಲ್ಪಿಸಬೇಕೆಂದು ಯುಗಾದಿ ಮಹೋತ್ಸವಗಳಲ್ಲಿ ಅಂದರೆ ಮಾ. 19. 2023 ರಿಂದ ಮಾ. 23. 2023 ರ ವರೆಗೆ ಭಕ್ತರೆಲ್ಲರಿಗೂ ಸ್ವಾಮಿಯವರ ಅಲಂಕಾರ ದರ್ಶನ ಮಾತ್ರ ಕಲ್ಪಿಸಲಾಗುತ್ತದೆ. ಉತ್ಸವ ದಿನಗಳಲ್ಲಿ ಸ್ವಾಮಿಯವರ ಸ್ಪರ್ಶ ದರ್ಶನಕ್ಕೆ ಅವಕಾಶ ಇರುವುದಿಲ್ಲ.

ಭಕ್ತರಲ್ಲರಿಗೂ ಸ್ಪರ್ಶದರ್ಶನ ಕಲ್ಪಿಸಬಹುದಾದರೆ ದಿನಕ್ಕೆ ಗರಿಷ್ಠ 15 ಸಾವಿರ ಭಕ್ತರಿಗೆ ಮಾತ್ರ ದರ್ಶನ ಭಾಗ್ಯ ಸಿಗಬಹುದು, ಆದರೆ ಉತ್ಸವ ದಿನಗಳಲ್ಲಿ ದಿನಕ್ಕೆ ಸುಮಾರು 60, ಸಾವಿರ ರಿಂದ 70, ವರೆಗೆ ಭಕ್ತರು ಸಂದರ್ಶಿಸುವ ಸಂಭವವಿದೆ.

ಭಕ್ತರೆಲ್ಲರಿಗೂ ಸೌಕರ್ಯಯುತ ದರ್ಶನ ಕಲ್ಪಿಸಲಾಗುತ್ತದೆ. ಆದ್ದರಿಂದ ಈ ದಿನಗಳಲ್ಲಿ ಕೇವಲ ಶ್ರೀ ಸ್ವಾಮಿಯವರ ಅಲಂಕಾರ ದರ್ಶನಕ್ಕೆ ಹಾಗೂ ಲಘುದರ್ಶನಕ್ಕೆ ಮಾತ್ರ ಅವಕಾಶ ಕಲ್ಪಿಸಲಾಗಿದೆ.

ಉತ್ಸವ ಅವಧಿಯ ಹತ್ತು ದಿನಗಳ ಮುಂಚೆ ಅಂದರೆ ಮಾ. 09. 2023 ರಿಂದ ಮಾ. 18. 2023 ರ ವರೆಗೆ ನಿರ್ದಿಷ್ಟ ನಾಲ್ಕು ಹಂತಗಳಲ್ಲಿ ಭಕ್ತರಿಗೆ ಶ್ರೀ ಸ್ವಾಮಿಯವರ ಸ್ಪರ್ಶ ದರ್ಶನಕ್ಕೆ ಅವಕಾಶ ನೀಡಲಾಗುತ್ತದೆ.

ಈ ಸ್ಪರ್ಶ ದರ್ಶನದ ಟಿಕೆಟ್ ಬೆಲೆ 500 ರೂ ನಿಗದಿಪಡಿಸಲಾಗಿದೆ ಒಂದು ಹಂತದಲ್ಲಿ 1500 ಟಿಕೆಟ್ ಗಳನ್ನು ಮಾತ್ರ ವಿತರಿಸಲಾಗುವುದು ಭಕ್ತಾದಿಗಳು ಈ ಬದಲಾವಣೆ ಗಮನಿಸಬೇಕು.

ಈ ವಿಷಯದ ಮೇಲೆ ಈಗಾಗಲೇ ಬಾಗಲಕೋಟೆ ಜಿಲ್ಲೆಯ ರಬ್ಬಲಿಯಲ್ಲಿ ಕರ್ನಾಟಕ ಮತ್ತು ಮಹಾರಾಷ್ಟ್ರದ ಹಲವು ಭಕ್ತ ಸಂಘಗಳು, ಪಾದಯಾತ್ರೆ ವೃಂದಗಳು ಸ್ವಚ್ಚಂದ ಸೇವಾ ಸಂಸ್ಥೆಗಳ ಪ್ರತಿನಿಧಿಗಳಿಂದ ದೇವಸ್ಥಾನ ಸಮನ್ವಯ ಸಮಾವೇಶ ಏರ್ಪಾಡು ಮಾಡಲಾಗಿದೆ.

ಈ ಸಮಾವೇಶದಲ್ಲಿ ಭಕ್ತ ವೃಂದ ಪ್ರವಿಧಿಗಳಿಗೆ ಉತ್ಸವ ದಿನಗಳಲ್ಲಿ ಭಕ್ತರೆಲ್ಲರಿಗೂ ದರ್ಶನದ ಅವಕಾಶ ಕಲ್ಪಿಸಲು, ದರ್ಶನ ಸಂಬಂಧ ಏರ್ಪಾಡುಗಳ ಬಗ್ಗೆ ವಿವರಿಸಲಾಗಿದೆ.

ಶ್ರೀಶೈಲ ಜಗದ್ಗುರು ಪೀಠಾಧಿಪತಿಗಳಾದ ಶ್ರೀ ಚನ್ನ ಸಿದ್ದರಾಮ ಶಿವಾಚಾರ್ಯ ಸ್ವಾಮೀಜಿಗಳು ಕಂಡ ಈ ಸಮಾವೇಶಕ್ಕೆ ಆಗಮಿಸಿ ತಮ್ಮ ಅನುಗ್ರಹ ಸಂಭಾಷಣೆ ನೀಡಿದ್ದಾರೆ.

ಆದ್ದರಿಂದ ಭಕ್ತರೆಲ್ಲರೂ ಈ ವಿಷಯವನ್ನು ಗಮನಿಸಿ ದೇವಸ್ಥಾನಕ್ಕೆ ಸಹಕರಿಸಬೇಕು.

ಈ ಸಂದರ್ಭವಾಗಿ ಭಕ್ತರೆಲ್ಲರಿಗೂ ಶ್ರೀ ಭ್ರಮರಾಂಬೆ ಮತ್ತು ಶ್ರೀಮಲ್ಲಿಕಾರ್ಜುನ ಸ್ವಾಮಿಯವರ ಆಶೀರ್ವಾದಗಳು ಲಭಿಸಬೇಕೆಂದು ಆಕಾಂಕ್ಷಿಸುತ್ತೇವೆ. ಸಶ್ರೀ ಸ್ವಾಮಿ ಅಮ್ಮನವರ ಸೇವೆಯಲ್ಲಿ ಡಿಪ್ಯೂಟಿ ಕಲೆಕ್ಟರ್ ಮತ್ತು ಕಾರ್ಯನಿರ್ವಹಣಾಧಿಕಾರಿಗಳಾದ ಸಂ. ಎಸ್. ಲವನ್ನ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ನ್ಯಾಯಾಧೀಶ ಶಿವಾಜಿ ನಲವಡೆ ದೀಡಿರ ಭೇಟಿ: ಪಿಎಸ್‌ಐ ವಿರೂದ್ಧ ಗರಂ

## ಆಸ್ಪತ್ರೆಯ ಅವ್ಯವಸ್ಥೆ ನ್ಯಾಯಾಧೀಶರಿಂದ ವೈದ್ಯರ ತರಾಟೆ




ತಾಳಿಕೋಟೆ: ಪಟ್ಟಣದ ಸಮೂದಾಯ ಆರೋಗ್ಯ ಕೇಂದ್ರಕ್ಕೆ ದೀಡಿರನೇ ಬೆಟ್ಟಿ ನೀಡಿದ ವಿಜಯಪುರ ಜಿಲ್ಲಾ ಸತ್ರ ಹಾಗೂ ಮುಖ್ಯ ನ್ಯಾಯಾಧೀಶರಾದ ಶಿವಾಜಿ ನಲವಡೆ ಅವರು ಆಸ್ಪತ್ರೆಯಲ್ಲಿಯ ಅವ್ಯವಸ್ಥೆ ಕಂಡು ದಂಗಾದರಲ್ಲದೇ ಆಸ್ಪತ್ರೆಯಲ್ಲಿಯ ವೈದ್ಯರುಗಳನ್ನು ತರಾಟೆಗೆ ತೆಗೆದುಕೊಂಡ ಘಟನೆ ರವಿವಾರರಂದು ಮದ್ಯಾಹ್ನ ನಡೆದಿದೆ.

ಖಾಸಗಿ ಕಾರ್ಯಕ್ರಮದ ನಿಮಿತ್ಯ ತಾಳಿಕೋಟೆ ಪಟ್ಟಣಕ್ಕೆ ಆಗಮಿಸಿದ್ದ ಜಿಲ್ಲಾ ಸತ್ರ ಹಾಗೂ ಮುಖ್ಯ ನ್ಯಾಯಾಧೀಶ ಶಿವಾಜಿ ನಲವಡೆ ಅವರು ಯಾವುದೇ ಮುನ್ಸೂಚನೆ ನೀಡದೇ ಆಸ್ಪತ್ರೆಗೆ ದೀಡಿರನೇ ಬೆಟ್ಟಿ ನೀಡಿದ್ದರಿಂದ ಆಸ್ಪತ್ರೆಯಲ್ಲಿ ಕಸದ ರಾಶಿ ಅಸ್ವಚ್ಚತೆ ಅಲ್ಲದೇ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದನ್ನು ಕಂಡು ಗರಂ ಆದರಲ್ಲದೇ ನ್ಯಾಯಾಧೀಶರು ಆಸ್ಪತ್ರೆಗೆ ಬೆಟ್ಟಿ ನೀಡಿರುವ ವಿಷಯವನ್ನು ಅರೀತು ಆಗಮಿಸಿದ ಡಾ.ಆಯ್.ಬಿ.ತಳ್ಳೊಳ್ಳಿ, ಡಾ.ವಿಜಯಲಕ್ಷ್ಮೀ ಹಜೇರಿ, ಡಾ.ಮಧುಮಾಲಾ ಅಗರವಾಲಾ ವೈದ್ಯರುಗಳಿಗೆ ತರಾಟೆಗೆ ತೆಗೆದುಕೊಂಡರು ಆಸ್ಪತ್ರೆಯಲ್ಲಿ ರೋಗಿಗಳಿಗೆ ನೀಡಬೇಕಾದ ಯಾವುದೇ ಸೌಲಭ್ಯ ಸರಿಯಾಗಿ ಇಲ್ಲಾ ಆಸ್ಪತ್ರೆಯಲ್ಲಿ ಕಸವೂ ಸಹೇತ ಗೂಡಿಸಿಲ್ಲಾ ಇಲ್ಲಿ ಬರುವ ರೋಗಿಗಳಿಗೆ ಕುಡಿಯುವ ನೀರಿನ ಸೌಲಭ್ಯವು ಕಾಣಿಸುತ್ತಿಲ್ಲಾ ಆಸ್ಪತ್ರೆಯ ಆಡಳಿತ ವೈದ್ಯರೆಲ್ಲರೂ ಏನು ಮಾಡುತ್ತಿದ್ದಿರಿ ಎಂದು ತರಾಟೆಗೆ ತೆಗೆದುಕೊಂಡರು ನಂತರ ಆಸ್ಪತ್ರೆಯ ವೈದ್ಯರ ಮತ್ತು ಸಿಬ್ಬಂದಿಗಳ ಹಾಜರಿ ಪುಸ್ತಕವನ್ನು ಪರಿಶೀಲಿಸಿದರಲ್ಲದೇ ಕೆಲವರು ಹಾಜರಾತಿ ಪುಸ್ತಕಕ್ಕೆ ಸಹಿ ಮಾಡಿದ್ದರೆ.

ಇನ್ನೂ ಕೆಲವರು ಸಹಿ ಮಾಡಿರಲಿಲ್ಲಾ ಇದನ್ನು ಗಮನಿಸಿದ ಶ್ಯಾಯಾಧೀಶರಾದ ನಲವಡೆ ಅವರು ಹಾಜರಿ ಪುಸ್ತಕದಲ್ಲಿ ಸಹಿ ಮಾಡದ ಸಿಬ್ಬಂದಿಗಳು ಬಂದಿಲ್ಲವೋ ಹೇಗೆ ಅವರು ಬರದಿದ್ದರೆ ಆಪಸೇಂಟ್ ಹಾಕಬೇಕಿತ್ತು ಅದನ್ನು ಕೂಡಾ ನಿಮ್ಮಿಂದ ಮಾಡಲು ಆಗಿಲ್ಲವಲ್ಲಾ ಇದು ದನದ ಕೊಟ್ಟಡಿಯೋ ಆಸ್ಪತ್ರೆಯೋ ಎಂದು ಗರಂ ಆದರಲ್ಲದೇ ಕೂಡಲೇ ಬರದ ಸಿಬ್ಬಂದಿಗಳಿಗೆ ಗೈರು ಹಾಕಿ ಬೇಕಾಬಿಟ್ಟಿ ಸಮಯಕ್ಕೆ ಬರುವದು ಹೋಗುವದು ಮಾಡದಂತೆ ಖಡಕ್ಕಾಗಿ ಸೂಚಿಸಿದ ಅವರು ಆಸ್ಪತ್ರೆಯಲ್ಲಿ ಕ್ಷಕೀರಣ ಕೇಂದ್ರವನ್ನು ಪರಿಶೀಲಿಸಲು ತೆರಳಿದಾಗ ಕೇಂದ್ರದ ಬೀಗ ತೆಗೆದಿರಲಿಲ್ಲಾ ವಾರ್ಡಗಳ ರೂಂ ಪರಿಶೀಲಿಸಲು ಹೋದಾಗ ಯಾವುದೇ ರೂಂಗಳು ಬಳಕೆ ಯಾಗದೇ ಆಗದೇ ಹಾಗೆ ಇರುವದು ಕಡ್ಡಿ ದೂಳು ತುಂಬಿದನ್ನು ಕಂಡ ನ್ಯಾಯಾಧೀಶರಾದ ನಲವಡೆ ಅವರು ವೈದ್ಯರುಗಳಿಗೆ ಮೇಲಿಂದ ಮೇಲೆ ತರಾಟೆಗೆ ತೆಗೆದುಕೊಂಡರಲ್ಲದೇ ಸಮುದಾಯ ಆರೋಗ್ಯ ಕೇಂದ್ರ ರೋಗಿಗಳಿಗೆ ಆರೋಗ್ಯ ನೀಡುವ ಬದಲು ರೋಗ ನೀಡುವಂತಾಗಿದೆ ಕಸದ ತೊಟ್ಟೆಯಂತೆ ಮಾಡಿದ್ದೀರಿ ಇದೆಲ್ಲವೂ 2 ದಿನದಲ್ಲಿ ಸರಿ ಹೋಗದಿದ್ದಲ್ಲಿ ನಿಮ್ಮ ಮೇಲೆ ನಿರ್ಧಾಕ್ಷೀಣ ಕ್ರಮ ತೆಗೆದುಕೊಳ್ಳಬೇಕಾಗುತ್ತದೆ ಎಂದು ಏಚ್ಚರಿಸಿದರು.

**ಎಫ್‌ಐಆರ್ ದಾಖಲಿಸದ ಪಿಎಸ್‌ಐಗೆ ತರಾಟೆಗೆ**

ಸಮೂದಾಯ ಆರೋಗ್ಯ ಕೇಂದ್ರದಲ್ಲಿಯ ದಾಖಲಾದ ರೋಗಿಗಳ ತೊಂದರೆ ಆಲಿಸುವ ಸಮಯದಲ್ಲಿ ತೀರ್ವವಾದ ಗಾಯದಿಂದ ದಾಖಲಾಗಿದ್ದ ಮಹಿಳೆ ಶಾಂತಾಬಾಯಿ ಭೀಮನಗೌಡ ಬಿರಾದಾರ ಎಂಬವಳು ಕಳೆದ 3 ದಿನಗಳ ಹಿಂದೆ ನನಗೆ ಮನಬಂದಂತೆ ಹೊಡೆದಿದ್ದಾರೆ ಕಾಲು ಸಹ ಮುರಿದಿದೆ ಪೊಲೀಸ್ ಠಾಣೆಗೆ ದೂರು ಕೊಡಲು ಹೋದರೆ ಕಂಪ್ಲೇಟ್ ತೆಗೆದುಕೊಳ್ಳುತ್ತಿಲ್ಲಾ ಎಂದು ಕಣ್ಣೀರು ಸುರಿಸುತ್ತಾ ನ್ಯಾಯಾಧೀಶರಮುಂದೆ ಅವಲತ್ತುಕೊಂಡಳು ಇದೇ ಸಮಯದಲ್ಲಿ ಉಪಸ್ಥಿತರಿದ್ದ ಪಿಎಸ್‌ಐ ಸುರೇಶ ಮಂಟೂರ ಅವರಿಗೆ ನ್ಯಾಯಯುತವಾಗಿ ಮಾಡಬೇಕಾದ ಕೆಲಸ ಮಾಡಲು ಆಗಿಲ್ಲಿಲ್ಲಾವೆಂದರೆ ಏಕೆ ಆ ಹುದ್ದೆಯಲ್ಲಿ ಇದ್ದೀರಿ ಮಹಿಳೆಗೆ ಇಷ್ಟೊಂದು ಗಾಯವಾಗಿದ್ದರೂ ಜಿಲ್ಲಾ ಆಸ್ಪತ್ರೆಗೆ ಕಳುಹಿಸುವ ಕೆಲಸ ಮಾಡಿಲ್ಲಾ ಆ ಮಹಿಳೆಯ ದೂರಿನ ಕಂಪ್ಲೇಟ್ ತೆಗೆದುಕೊಂಡಿಲ್ಲಾವೇಕೆ ಈ ರೀತಿ ಕಂಪ್ಲೇಟ್ ತೆಗೆದುಕೊಳ್ಳದೇ ವಿಳಂಬ ಮಾಡಿ ಅಲೇದಾಡಿಸುತ್ತಿರುವದು ಸರಿಯಲ್ಲಾವೆಂದು ಅಸಮಾದಾನ ವ್ಯಕ್ತ ಪಡಿಸಿದ ಅವರು ಈರೀತಿ ಇನ್ನೋಮ್ಮೆ ಕಂಡುಬಂದಲ್ಲಿ ನಿಮ್ಮನ್ನು ಸಸ್ಪೇಂಡ್ ಮಾಡಬೇಕಾಗುತ್ತದೆ ಎಂದು ಏಚ್ಚರಿಸಿದರಲ್ಲಿ ಪಿ.ಎಸ್.ಐ. ಮೇಲೆ ಸೂಕ್ತ ಕ್ರಮಕ್ಕೆ ಮೇಲಾಧಿಕಾರಿಗೆ ಸೀಫಾರಸ್ಸು ಮಾಡಲು ಸದಸ್ಯ ಕಾರ್ಯದರ್ಶಿಗಳಿಗೆ ಇದೇ ಸಮಯದಲ್ಲಿ ನಿರ್ಧೇಶನ ನೀಡಿದರು.

ಈ ಸಮಯದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಹಿರಿಯ ಸಿವ್ಹಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿ ವೆಂಕಣ್ಣ ಹೊಸಮನಿ, ಒಳಗೊಂಡಂತೆ ನ್ಯಾಯವಾದಿಗಳಾದ ಬಸನಗೌಡ ಮುಂದಿನಮನಿ, ಬಿ.ಪಿ.ಮ್ಯಾಗೇರಿ, ಎಸ್.ಬಿ.ನಾರಿ, ಎಂ.ಎಸ್.ಹಜೇರಿ, ಮಲ್ಲು ಜೂಲಿ, ಆನಂದ ಮದರಕಲ್ಲ, ಆನಂದ ಕೊಂಗಂಡಿ, ಪ್ರಭಾಕರ ನಾಯ್ಕೋಡಿ, ಎಂ.ಎಸ್.ಅಮಲ್ಯಾಳ, ಬಿ.ಜಿ.ಮದರಕಲ್ಲ, ಹಾಗೂ ಪಟ್ಟಣದ ಪ್ರಮುಖದರು ಇದ್ದರು.

## ಕಂಪ್ಯೂಟರ್ ಹಾರ್ಡವೇರ್ ಮತ್ತು ನೆಟವರ್ಕಿಂಗ್ ತರಬೇತಿ: ಅರ್ಜಿ ಆಹ್ವಾನ

ಬೆಳಗಾವಿ: ಕೆನರಾ ಬ್ಯಾಂಕ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ ವತಿಯಿಂದ ಬೆಳಗಾವಿ ಜಿಲ್ಲೆಯ ಗ್ರಾಮೀಣ ಪ್ರದೇಶದ ಯುವಕ, ಯುವತಿಯರಿಗೆ 45 ದಿನಗಳ ಕಂಪ್ಯೂಟರ್ ಹಾರ್ಡವೇರ್ ಮತ್ತು ನೆಟವರ್ಕಿಂಗ್ ತರಬೇತಿ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಅರ್ಹತೆಗಳು :**

18 ರಿಂದ 45 ವಯಸ್ಸಿನವರಾಗಿರಬೇಕು, ಗ್ರಾಮೀಣ ಪ್ರದೇಶದವರಾಗಿರಬೇಕು, BPL ಕಾರ್ಡ ಹೊಂದಿರಬೇಕು, ದಾಖಲೆಗಳು. BPL ಕಾರ್ಡ, ಆಧಾರ ಕಾರ್ಡ, ಬ್ಯಾಂಕ ಪಾಸ್ ಬುಕ್. 4 ಭಾವಚಿತ್ರಗಳನ್ನು ಲಗತ್ತಿಸಬೇಕು.

ತರಬೇತಿ ಅವಧಿ ಮಾರ್ಚ. 23, 2023 ರಿಂದ ಪ್ರಾರಂಭವಾಗಲಿದೆ.

ಅರ್ಜ ಸಲ್ಲಿಸುವ ಕೊನೆಯ ದಿನಾಂಕ ಮಾರ್ಚ. 20 2023, ರೊಳಗಾಗಿ ಆರ್ಜಿಯನ್ನು ಸಂಸ್ಥೆಯ ಆರ್ಜಿ ನಮೂನೆಯಲ್ಲಿ ಅಥವಾ ಬಿಳಿಹಾಳಿಯಲ್ಲಿ ನೇರವಾಗಿ ಕಾರ್ಯಾಲಯಕ್ಕೆ, ಪೋಸ್ಟ್ ಮುಖಾಂತರ ಅಥವಾ ಕೆಳಗೆ ನೀಡಿದ https://docs.google.com/forms/d/e/1FAIpQLSdZEI9npV5dVuQbdqFXUGc6yt__7daI02YrhyvRSLywjlFfKA/viewform?vc=0&c=0&w=1&flr=0 ಗೂಗಲ್ ಪಾರ್ಮ ಲಿಂಕನಲ್ಲಿ ಮಾಹಿತಿ ಸಲ್ಲಿಸಬಹುದಾಗಿದೆ.

ಸಂಸ್ಥೆಯ ವಿಳಾಸ ಕೆನರಾ ಬ್ಯಾಂಕ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ (ಸಿಬಿ ಆರ್‌ಸೆಟಿ), ಪ್ಲಾಟ ನಂ. ಸಿ ಎ –03 (ಪಾರ್ಟ) ಕಣಬರ್ಗಿ ಇಂಡಸ್ಟ್ರಿಯಲ್ ಎರಿಯಾ, ಆಟೋ ನಗರ, ಬೆಳಗಾವಿ – 590015 ಭೇಟಿ ನಿಡಬಹುದು.

45 ದಿನಗಳಕಾಲ ತರಬೇತಿ ಅವಧಿಯಲ್ಲಿ ಊಟ, ವಸತಿ ಸಂಪೂರ್ಣ ಉಚಿತವಾಗಿರುತ್ತದೆ, ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 0831–2440644, 8296792166, 9845750043, 8050406866, 8867388906, 9449860564 ಗೆ 9.30 ರಿಂದ ಸಾಯಂಕಾಲ 6. ವರೆಗೆ ಸಂಪರ್ಕಿಸಬಹುದು ಎಂದು ಬೆಳಗಾವಿ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ–ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜ್ಯ ಸ್ವಾತಂತ್ರ್ಯ ಯೋಧರ ಪಿಂಚಣಿ: ಡಿಬಿಟಿ ತಂತ್ರಾಂಶದಲ್ಲಿ ಮಾಹಿತಿ ಅಳವಡಿಸುವಂತೆ ಸೂಚನೆ

ಬೆಳಗಾವಿ: ರಾಜ್ಯ ಸ್ವಾತಂತ್ರ್ಯ ಹೋರಾಟಗಾರರ ಗೌರವಧನ ಹಾಗೂ ಕುಟುಂಬ ಪಿಂಚಣಿಯನ್ನು ಆಧಾರ್ ಆಧಾರಿತ ನೇರ ಹಣ ಸಂದಾಯದ ಮೂಲಕ ಪಿಂಚಣಿಯನ್ನು ಪಾವತಿಸಲು ಫಲಾನುಭವಿಗಳ ವಿವರಗಳನ್ನು ಆಧಾರ ಕಾರ್ಡನಲ್ಲಿ ಇದ್ದಂತೆ ಡಿಬಿಟಿ ತಂತ್ರಾಂಶದಲ್ಲಿ ಅಳವಡಿಸುವಂತೆ ಸೂಚಿಸಲಾಗಿದೆ.

ರಾಜ್ಯ ಸ್ವಾತಂತ್ರ್ಯ ಯೋಧರ ಪಿಂಚಣಿ ಹಾಗೂ ಗೋವಾ ವಿಮೋಚನಾ ಚಳುವಳಿಯ ಪಿಂಚಣಿಯನ್ನು ಪಡೆಯುತ್ತಿರುವ ಅರ್ಹ ಫಲಾನುಭವಿಗಳು ತಮ್ಮ ವಿವರಗಳನ್ನು ಡಿಬಿಟಿ ತಂತ್ರಾಂಶದಲ್ಲಿ ಅಳವಡಿಸಬೇಕಾಗಿರುವ ಕಾರಣ ಪಿಂಚಣಿ ಪಡೆಯುತ್ತಿರುವ ಫಲಾನುಭವಿಗಳ ಆಧಾರ ಕಾರ್ಡ ಜೆರಾಕ್ಸ್ ಹಾಗೂ ಲಿಂಕ್ ಆಗಿರುವ ಮೊಬೈಲ್ ಸಂಖ್ಯೆ, ಬ್ಯಾಂಕ್ ಪಾಸ್‌ಬುಕ್ ಜೆರಾಕ್ಸ್ ಹಾಗೂ ಜೀವಿತ ಪ್ರಮಾಣ ಪತ್ರಗಳನ್ನು ಫಲಾನುಭವಿಗಳ ಜೊತೆಗಾರರು ಕೂಡಲೇ ಜಿಲ್ಲಾಧಿಕಾರಿಗಳ ಕಾರ್ಯಾಲಯದ ರೂ.ನಂ. 5 ರಲ್ಲಿ ಸಲ್ಲಿಸಬಹುದಾಗಿದೆ.

ದೂರದ ತಾಲ್ಲೂಕಿನವರು ತಮ್ಮ ತಾಲ್ಲೂಕು ಕಛೇ–ರಿಯ ಸ್ವಾತಂತ್ರ್ಯ ಯೋಧರ ವಿಷಯನಿರ್ವಾಹಕರ ಹತ್ತಿರ ಮಾರ್ಚ.21 2023 ರೊಳಗಾಗಿ ಸಲ್ಲಿಸಬಹುದು.

ಮಾಹಿತಿ ಸಲ್ಲಿಸಲು ತಪ್ಪಿದ್ದಲ್ಲಿ ಏಪ್ರಿಲ್–2023 ನೇ ಮಾಹೆಯ ಪಿಂಚಣಿಯನ್ನು ತಮ್ಮ ಖಾತೆಗೆ ಜಮಾ ಮಾಡಲಾಗುವುದಿಲ್ಲ (ಪಿಂಚಣಿದಾರರನ್ನು ಕರೆತರಬಾರದು ಅವರ ಜೊತೆಗಾರರು ಮಾತ್ರ ದಾಖಲೆಗಳನ್ನು ಈ ಕಾರ್ಯಾಲಯಕ್ಕೆ ತಂದು ಸಲ್ಲಿಸತಕ್ಕದ್ದು) ಎಂದು ಬೆಳಗಾವಿಯ ಅಪರ ಜಿಲ್ಲಾಧಿಕಾರಿ ಕೆ.ಟಿ ಶಾಂತಲಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಧಾನ ಮಂತ್ರಿ ಗ್ರಾಮ ಸಡಕ ಯೋಜನೆ ಕಾಮಗಾರಿಗಳ ಪರಿವೀಕ್ಷಣೆ

ಬೆಳಗಾವಿ: NRRDA ಯಿಂದ ನಿಯೋಜಿರಾದ ಕೇಂದ್ರಗುಣ ನಿಯಂತ್ರಣ ಪರಿವೀಕ್ಷಕರು (NQM) ಹೋತ್ವಾನಿ ರಮೇಶ ನಾನಕ ರಾಮ ಅವರು ಬೆಳಗಾವಿ ಜಿಲ್ಲೆಯ ಪ್ರಧಾನ ಮಂತ್ರಿ ಗ್ರಾಮ ಸಡಕ ಯೋಜನೆಯಡಿಯಲ್ಲಿ ಕೈಗೊಂಡ ಕಾಮಗಾರಿಗಳ ಪರಿವಿಕ್ಷಣೆಗಾಗಿ ಮಾರ್ಚ್ 23 ರಿಂದ 27 ರವರೆಗೆ ಪ್ರವಾಸ ಕೈಗೊಳ್ಳಲಿದ್ದಾರೆ.

ಪ್ಯಾಕೇಜ್ ನಂ– ಕೆ.ಎನ್. 04–103 ಎಂ.ಆರ್.ಎಲ್.21 ಹಿಡಲಗಾ ದಿಂದ ಅಂಬೇವಾಡೀ ಖಡೀ ಮಶೀನ ದಿಂದ ಕಾಡೋಲಿ ವರೆಗೆ, ಪ್ಯಾಕೇಜ್ ನಂ– ಕೆ.ಎನ್. 04–111, ಎಂ.ಆರ್.ಎಲ್.14 ಕನಗಲಾ ದಿಂದ ಸೋಲಾಪೂರ ವ್ಹಾಯಾ ಹೊನ್ನಿಹಾಳ ವರೆಗೆ ಕೆ .ಎನ.04 117 ಎಂ. ಆರ್. ಎಲ್ 25 ಚೀಲಭಾವಿ ದಿಂದ ಅರಳಿಕಟ್ಟಿ ಎಂ. ಡಿ. ಆರ್. ವರೆಗೆ ಪರಿವೀಕ್ಷಣೆ ಕೈಗೊಳ್ಳಲಿದ್ದಾರೆ.

ಅದೇ ರೀತಿಯಲ್ಲಿ ಪ್ಯಾಕೇಜ್ ನಂ– ಕೆ.ಎನ್. 04–142 ಎಂ.ಆರ್.ಎಲ್ 35– ಮುಚ್ಚಂಡಿ ಬುದ್ಯಾನೂರ ದಿಂದ ಕರವಿ ವರೆಗೆ ಕಾಮಗಾರಿಗಳನ್ನು ಎಂದು ಬೆಳಗಾವಿಯ ಯೋಜನಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಂಗ್ರೆಸ್ಸಿಗರು ಅಂಬೇಡ್ಕರ್‌ಗೆ ಶೋಷಿಸಿದ್ದಾರೆ: ಜಿ.ಸೋಮಶೇಖರ ರೆಡ್ಡಿ



ಬಳ್ಳಾರಿ: ಸಂವಿಧಾನ ಶಿಲ್ಪಿ ಡಾ.ಬಿಆರ್ ಅಂಬೇಡ್ಕರ್ ಅವರನ್ನು ಚುನಾವಣೆಯಲ್ಲಿ ಸೋಲಿಸಿದ್ದಲ್ಲದೆ, ಅವರನ್ನು ಸಂಸತ್‌ಗೆ ಕಾಲಿಡದಂತೆ ವ್ಯವಸ್ಥಿತ ಪಿತೂರಿ ನಡೆಸಿದ್ದ ಕಾಂಗ್ರೆಸ್ ಪಕ್ಷ ಅಂಬೇಡ್ಕರ್ ಮೃತ ಪಟ್ಟಾಗ ಆರಡಿ–ಮೂರಡಿ ಜಾಗ ನೀಡಿರಲಿಲ್ಲ. ಅಂಥಹ ಕಾಂಗ್ರೆಸ್‌ಗೆ ದಲಿತರು ಮತ ಹಾಕುತ್ತೀರಾ? ಎಂದು ನಗರ ಶಾಸಕ ಜಿ.ಸೋಮಶೇಖರ್ ರೆಡ್ಡಿ ಪ್ರಶ್ನಿಸಿದರು.


ವಾಲ್ಮೀಕಿ ಭವನದಲ್ಲಿ ಭಾರತೀಯ ಜನತಾ ಪಾರ್ಟಿ ಎಸ್‌ಸಿ ಮೋರ್ಚಾ ಜಿಲ್ಲಾ ಘಟಕವು ಹಮ್ಮಿಕೊಂಡಿದ್ದ ವಿದಾನಸಭಾ ಚುನಾವಣಾ ಪೂರ್ವಭಾವಿ ಸಮಾವೇಶದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ನೆಹರು, ಇಂದಿರಾಗಾಂಧಿ ಮತ್ತು ರಾಜೀವ್ ಗಾಂಧಿ ಮೃತಪಟ್ಟರೆ ಅವರಿಗೆ ನೂರಾರು ಎಕರೆ ಜಮೀನು ನೀಡಿದ ಕಾಂಗ್ರೆಸ್ ಅಂಬೇಡ್ಕರ್ ಶವ ಹೂಳಲು ಜಾಗ ನೀಡದೇ ಉದ್ಧಟತನ ಮೆರೆದಿದ್ದು ಇತಿಹಾಸದಲ್ಲಿದೆ. ಕಾಂಗ್ರೆಸ್ ಪಕ್ಷಕ್ಕೆ ದಲಿತರು ಅಂದರೆ ಗ್ಯಾರಂಟಿ ಓಟ್ ಹಾಕುವ ಮತದಾರರು ಮಾತ್ರ ಎಂದುಕೊಂಡಿದೆ. ಅಂಬೇಡ್ಕರ್ ಅವರನ್ನು ಶೋಷಣೆ ಮಾಡಿರುವ ಕಾಂಗ್ರೆಸ್ ಇಷ್ಟು ವರ್ಷ ದಲಿತರನ್ನೂ ಹತ್ತಿಕ್ಕುತ್ತಲೇ ಬಂದಿದೆ ಎಂದರು. ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಸಂವಿಧಾನಶಿಲ್ಪಿ ಡಾ.ಬಿಆರ್ ಅಂಬೇಡ್ಕರ್ ಅವರಿಗೆ ಜಾಗತಿಕ ಮಟ್ಟದಲ್ಲಿ ಗೌರವ ಹಾಗೂ ಘನತೆ ತಂದುಕೊಟ್ಟಿದ್ದಾರೆ. ಅಂಬೇಡ್ಕರ್ ಹುಟ್ಟಿದ ಮನೆ, ಅವರು ಓದಿದ ಶಾಲೆ, ಲಂಡನ್ ನಲ್ಲಿ ವ್ಯಾಸಂಗ ಮಾಡಿದ ಸ್ಥಳ, ಅವರು ಇಹಲೋಕ ತ್ಯಜಿಸಿದ ಜಾಗವನ್ನು ಪಂಚರತ್ನಗಳು ಎಂದು ಘೋಷಿಸಿ ಅಭಿವೃದ್ಧಿಪಡಿಸಿದ್ದಾರೆ. ಹಿಂದುಳಿದವರು, ದಲಿತರು ಅಂಬೇಡ್ಕರ್ ಅವರ ಈ ಪಂಚರತ್ನಗಳು ಸ್ಥಳ ವೀಕ್ಷಣೆ ಮಾಡಿ ಪ್ರೇರಣೆ ಪಡೆಯಲು ತೆರಳಿದರೆ ಅಂಥವರಿಗೆ ಸರ್ಕಾರದಿಂದ ಹಣಕಾಸಿನ ನೆರವು ಒದಗಿಸುತ್ತೇನೆ ಎಂದರು.

ಅಲ್ಲದೆ, ಅಂಬೇಡ್ಕರ್ ಅವರ ಜನ್ಮದಿನದ ಅಂಗವಾಗಿ ಪ್ರತಿವರ್ಷ ಏಪ್ರಿಲ್ 14ರಂದು ಜಾಗತಿಕ ಜ್ಞಾನದ ದಿನ ಎಂದು ಘೋಷಿಸಿದ್ದಾರೆ.

ಮೋದಿ ಅವರು ದಲಿತರಿಗೆ ಹೆಚ್ಚಿನ ಆದ್ಯತೆ ನೀಡಿದ್ದು ಬಿಜೆಪಿ ಮತ್ತೊಮ್ಮೆ ಸರ್ಕಾರ ರಚಿಸಲು ನಿಮ್ಮೆಲ್ಲರ ಕೊಡುಗೆ ಅಪಾರವಾಗಿದೆ. ಹೀಗಾಗಿ ಮುಂದಿನ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿಗೆ ಮತ ಹಾಕುವಂತೆ ಕೋರಿದರು. ಭಾರತೀಯ ಜನತಾ ಪಾರ್ಟಿ ಎಸ್‌ಸಿ ಮೋರ್ಚಾ ಮಾಜಿ ರಾಜ್ಯಾಧ್ಯಕ್ಷರು ಹಾಗೂ ಮಾಜಿ ವಿಧಾನ ಪರಿಷತ್ ಸದಸ್ಯರಾದ ಡಿಎಸ್ ವೀರಯ್ಯ ಅವರು ಮಾತನಾಡಿ, ಬಳ್ಳಾರಿ ನಗರದಲ್ಲಿ ಬಿಜೆಪಿ ಎಸ್‌ಸಿಮೋರ್ಚಾ ಸಮಾವೇಶವನ್ನು ಶಾಸಕ ಜಿ.ಸೋಮಶೇಖರರೆಡ್ಡಿ ಅವರು ದೊಡ್ಡ ಪ್ರಮಾಣದಲ್ಲಿ ಹಮ್ಮಿಕೊಂಡಿರುವುದು ನಿಜಕ್ಕೂ ಅಭಿನಂದನೀಯ. ಅಂಬೇಡ್ಕರ್ ದೇಶದ ಎಲ್ಲ ಜನರಿಗೆ ಮತದಾನದ ಹಕ್ಕು ನೀಡಿದ್ದಾರೆ. ಕಾಂಗ್ರೆಸ್ ಕೆಲವು ಸಮುದಾಯದವರಿಗೆ ಮಾತ್ರ ಮತದಾನದ ಹಕ್ಕು ನೀಡುವಂತೆ ಪ್ರತಿಪಾದಿಸಿತ್ತು. ಇದನ್ನು ಅಂಬೇಡ್ಕರ್ ವಿರೋಧಿಸಿದ್ದರು ಎಂದು ಮೆಲುಕು ಹಾಕಿದರು. ಕಾಂಗ್ರೆಸ್ ಪಕ್ಷ ಅಸ್ತಿತ್ವಕ್ಕೆ ಬಂದಾಗಿನಿಂದ ಅಂಬೇಡ್ಕರ್ ಅವರನ್ನು ಎಲ್ಲ ರೀತಿಯಿಂದಲೂ ದಮನ ಮಾಡಿದೆ.

ದಲಿತರನ್ನು ಮೇಲೇಳದಂತೆ ಮಾಡಿರುವ ಕಾಂಗ್ರೆಸ್ ಪಕ್ಷಕ್ಕೆ ಓಟು ಹಾಕುವ ಮುನ್ನ ಒಮ್ಮೆ ನೆನೆಪು ಮಾಡಿಕೊಳ್ಳಿರಿ ಎಂದು ಸಮಾವೇಶದಲ್ಲಿ ಪಾಲ್ಗೊಂಡ ಕಾರ್ಯಕರ್ತರಿಗೆ ಕಿವಿ ಮಾತು ಹೇಳಿದರು. ವೇದಿಕೆಯಲ್ಲಿ ಪಾಲಿಕೆ ಸದಸ್ಯರಾದ ಕೆ.ಹನುಮಂತು, ಗುಡಿಗಂಟಿ ಹನುಮಂತು, ಕಲ್ಪನಾ ಪಿ.ವೆಂಕಟರಾಮಿರೆಡ್ಡಿ, ಈರಮ್ಮ ಸುರೇಂದ್ರ, ಸುರೇಖ್ ಎಸ್. ಮಲ್ಲನಗೌಡ, ಬಿಜೆಪಿ ಜಿಲ್ಲಾ ಉಪಾಧ್ಯಕ್ಷರಾದ ವೀರಶೇಖರರೆಡ್ಡಿ, ಮುಖಂಡರಾದ ಎರಂಗಳಿ ತಿಮ್ಮಾರೆಡ್ಡಿ, ದಾಸರಿ ಗೋವಿಂದ್, ಜಿ.ರಾಮಚಂದ್ರಯ್ಯ, ಗಾಳಿ ಶಂಕ್ರಪ್ಪ, ಸುಗುಣ, ಪುಷ್ಪಾ ಚಂದ್ರಶೇಖರ್, ಸುಮಾ ರೆಡ್ಡಿ, ಬುಡಾ ಸದಸ್ಯ ರಾಮಾಂಜಿನಿ, ಎಸ್ ಸಿ ಮೋರ್ಚಾದ ಬಿಸಿ ರಾಜೇಶ್ ಇನ್ನಿತರರು ಇದ್ದರು. ನಿರೂಪಣೆಯನ್ನು ಎಂ.ವಿರೂಪಾಕ್ಷಿ ನೆರವೇರಿಸಿದರೆ, ಸಾಧನಾ ಮತ್ತು ತ್ರಿವೇಣಿ ಪ್ರಾರ್ಥಿಸಿದರು. ಕೆ.ಪಕ್ಕಿರಯ್ಯ ಸ್ವಾಗತಿಸಿದರು. ನಗರದ ಎಸ್‌ಸಿ ಮೋರ್ಚಾದ 70 ಬೂತ್ ಗಳು ಒಳಗೊಂಡಂತೆ ಜಿಲ್ಲೆಯ 130ಕ್ಕೂ ಅಧಿಕ ವಿವಿಧ ಮಂಡಲಗಳಿಂದ ಆಗಮಿಸಿದ ಸಾವಿರಾರು ಬಿಜೆಪಿ ಕಾರ್ಯಕರ್ತರು ಈ ಸಮಾವೇಶದಲ್ಲಿ ಪಾಲ್ಗೊಂಡಿದ್ದರು.

## 50 ಕಾರ್ಯಕರ್ತರು ಬಿಜೆಪಿ ಸೇರ್ಪಡೆ



ಬಳ್ಳಾರಿ: ಬಳ್ಳಾರಿ ಜಿಲ್ಲೆಯ ಕಂಪ್ಲಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಗುತ್ತಿಗನೂರು ಗ್ರಾಮದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಭಾರತೀಯ ಜನತಾ ಪಾರ್ಟಿಯ ಪಕ್ಷ ಸಿದ್ಧಾಂತ, ಮತ್ತು ಟಿ ಹೆಚ್ ಸುರೇಶ್ ಬಾಬುರವರ ಅಧಿಕಾರದ ಅವಧಿಯಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾರ್ಯಕ್ರಮಗಳಿಂದ ಪ್ರೇರಿತರಾಗಿ ಸುಮಾರು 50ಕ್ಕೂ ಹೆಚ್ಚು ಅಧಿಕ ಸಂಖ್ಯೆಯ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಅಧಿಕೃತವಾಗಿ ಭಾರತೀಯ ಜನತಾ ಪಕ್ಷಕ್ಕೆ ಸೇರ್ಪಡೆಯಾದರು.

ನೂತನವಾಗಿ ಪಕ್ಷ ಸೇರ್ಪಡೆಯಾದ ಎಲ್ಲರನ್ನೂ ಅಭಿನಂದಿಸಿ ಮುಂದೆ ನಮ್ಮ ಭಾರತೀಯ ಜನತಾ ಪಾರ್ಟಿಯು ನೀಡುವ ಜವಾಬ್ದಾರಿಯಲ್ಲಿ ಸಮರ್ಥವಾಗಿ ತೊಡಗಿಸಿಕೊಂಡು ಕಂಪ್ಲಿ ಕ್ಷೇತ್ರದಲ್ಲಿ ನಮ್ಮ ಪಕ್ಷವನ್ನು ಸದೃಢವಾಗಿ ಕಟ್ಟಲು ಶ್ರಮಿಸುವಂತೆ ಸುರೇಶ್‌ಬಾಬು ಅವರು ಕಾರ್ಯಕರ್ತರೆಲ್ಲರಿಗೂ ತಿಳಿಸಿ ಅಭಿನಂದಿಸಿದರು. ಈ ಕಾರ್ಯಕ್ರಮದಲ್ಲಿ ನಮ್ಮ ಗುತ್ತಿಗನೂರು ಗ್ರಾಮದ ನಮ್ಮ ಪಕ್ಷದ ಹಿರಿಯ ಕಾರ್ಯಕರ್ತರು ಹಲವು ಪ್ರಮುಖರು ಜೊತೆಯಲ್ಲಿದ್ದರು.


## ಬಿಜೆಪಿ ಕಾರ್ಯಕರ್ತರ ಸಭೆ



ಬಳ್ಳಾರಿ: ಬಳ್ಳಾರಿ ಗ್ರಾಮಾಂತರ ಕ್ಷೇತ್ರದ ಸಂಗನಕಲ್ಲು ಫಾರ್ಮ್ ಹೌಸ್‌ನಲ್ಲಿ ದಿನಾಂಕ 20.3.2023 ರಂದು ಬಳ್ಳಾರಿ ಗ್ರಾಮಾಂತರ ಕ್ಷೇತ್ರದ ಬಿಜೆಪಿ ಕಾರ್ಯಕರ್ತರ ಸಭೆ ಶ್ರೀರಾಮುಲು ರವರ ನೇತೃತ್ವದಲ್ಲಿ ನಡೆಯಿತು.

ಈ ಕಾರ್ಯಕ್ರಮದಲ್ಲಿ ರಾಜ್ಯ ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿಗಳಾದ ಗುರುಲಿಂಗನಗೌಡರವರು, ಮಾಜಿ ಸಂಸದರಾದ ಪಕ್ಕಿರಪ್ಪ ರವರು,ಶಾಂತ ರವರು, ಬಿಜೆಪಿ ಜಿಲ್ಲಾ ಉಪಾಧ್ಯಕ್ಷರಾದ ಬಿ ಓಬಳೇಶ್ ರವರು, ಹಿರಿಯ ಮುಖಂಡರಾದ ರಾಮಲಿಂಗಪ್ಪ ರವರು, ಬಿಜೆಪಿ ಬಳ್ಳಾರಿ ಗ್ರಾಮಾಂತರ ಮಂಡಲದ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡರು, ಬಳ್ಳಾರಿ ಗ್ರಾಮಾಂತರ ಕ್ಷೇತ್ರದ ಎಲ್ಲಾ ಕಾರ್ಯಕರ್ತರು, ಪದಾಧಿಕಾರಿಗಳು, ಮುಖಂಡರು ಉಪಸ್ಥಿತರಿದ್ದರು.

## ಹಾಸನ: ಕಸ ಸಂಗ್ರಹಣೆ ಆಟೋ ಚಾಲಕರಾದ ನಗರಸಭೆ ಅಧ್ಯಕ್ಷ



ಹಾಸನ: ಹಾಸನ ನಗರದ ಮೊದಲ ಪ್ರಜೆ (ನಗರಸಭೆ ಅಧ್ಯಕ್ಷರು) ಕಸ ಸಂಗ್ರಹಣೆ ಆಟೋ ಆಟೋ ಚಾಲಕನ ಕೆಲಸವನ್ನು ನಿಭಾಯಿಸಿದ್ದಾರೆ.

ಚಾಲಕರು, ಕಸ ಸಂಗ್ರಹಿಸುವವರು ಮುಷ್ಕರ ನಡೆಸುತ್ತಿರುವ ಹಿನ್ನೆಲೆಯಲ್ಲಿ ನಗರದ ಇತಿಹಾಸದಲ್ಲೇ ಮೊದಲ ಬಾರಿಗೆ ಹಾಸನ ನಗರಸಭೆಯ ಅಧ್ಯಕ್ಷರು ಕಸ ಸಂಗ್ರಹಣೆ ಆಟೋವನ್ನು ಸ್ವತಃ ಸಾರ್ವಜನಿಕರ ಮನೆ ಬಾಗಿಲಿಗೆ ಕೊಂಡೊಯ್ದು ಮನೆ ಮನೆಯಿಂದ ಕಸ ಸಂಗ್ರಹಿಸಿದ್ದಾರೆ.

## ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್‌ಗಳ ವಿತರಣೆ



ಬಳ್ಳಾರಿ: ಬಳ್ಳಾರಿ ನಗರದ ಶ್ರೀ ಕನ್ಯಕಾ ಪರಮೇಶ್ವರ ದೇವಸ್ಥಾನ ಬೀದಿಯಲ್ಲಿರುವ ಲಕ್ಷ್ಮಿ ವೆಂಕಟೇಶ್ವರ ಕಲ್ಯಾಣ ಮಂಟಪದಲ್ಲಿ ಮಾ 19 ರಂದು ಕರ್ನಾಟಕ ಆರ್ಯವೈಶ್ಯ ಮಹಾಸಭಾ ಬೆಂಗಳೂರು, ಬಳ್ಳಾರಿ ಜಿಲ್ಲಾ ಸಮಿತಿಯ ವತಿಯಿಂದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್‌ಗಳನ್ನು ವಿತರಿಸಲಾಯಿತು. ಕಾರ್ಯಕ್ರಮವನ್ನು ಉದ್ದೇಶಿಸಿ ಆರ್ಯವೈಶ್ಯ ಅಸೋಸಿಯೇಷನ್‌ನ ಅಧ್ಯಕ್ಷರಾದ ಡಾ. ರಮೇಶ್ ಗೋಪಾಲ್ ಮಾತನಾಡುತ್ತಾ ವಿದ್ಯಾರ್ಥಿಗಳು ಸಮಯವನ್ನು ವ್ಯರ್ಥ ಮಾಡದಂತೆ, ಮೊಬೈಲನ್ನು ಹೆಚ್ಚಿಗೆ ಬಳಸದಂತೆ, ಚನ್ನಾಗಿ ವಿದ್ಯಾಭ್ಯಾಸವನ್ನು ಮಾಡಿ ಹೆಚ್ಚಿನ ಅಂಕಗಳನ್ನು ಗಳಿಸಿ ಮುಂದಿನ ದಿನಗಳಲ್ಲಿ ಉನ್ನತ ಮಟ್ಟಕ್ಕೇರಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಕನ್ಯಕಾ ಪರಮೇಶ್ವರಿ ದೇವಸ್ಥಾನದ ಮ್ಯಾನೇಜಿಂಗ್ ಟ್ರಸ್ಟಿ ಗಾದೆಂ ಗೋಪಾಲಕೃಷ್ಣ, ಕರ್ನಾಟಕ ಆರ್ಯವೈಶ್ಯ ಮಹಾಸಭಾದ ಕಾರ್ಯಕಾರಿ ಸಮಿತಿ ಸದಸ್ಯರಾದ ಜೆ.ಸಿ.ಶ್ರೀಧರ್, ಜಯಂತಿ, ಕಿಶೋರ್, ಕಂಪ್ಲಿ ಜಿ. ರಾಜಾರಾವ್, ಬಳ್ಳಾರಿ ಜಿಲ್ಲಾಧ್ಯಕ್ಷರಾದ ಹೆಚ್.ಆರ್.ಬಾಲನಾಗರಾಜ್, ರಾಜ್ಯ ಪ್ರಧಾನ ಕಾರ್ಯದರ್ಶಿ ಹೆಚ್.ಜೆ.ಹನುಮಂತಯ್ಯ ಸಿರುಗುಪ್ಪ, ಗುಲ್ಬರ್ಗಾ ವಲಯ ಉಪಾಧ್ಯಕ್ಷ ನಾಮ ನಾಗರಾಜ್ ಬಳ್ಳಾರಿ, ಸೊಂತ ಗಿರಿಧರ್,ಸಮುದಾಯದ ಮಹಿಳೆಯರು ಮತ್ತಿತರರು ಉಪಸ್ಥಿತರಿದ್ದರು.

## ಮಾ.29ರಂದು ಬಳ್ಳಾರಿ ಪಾಲಿಕೆ ಮೇಯರ್ ಚುನಾವಣೆ




ಬಳ್ಳಾರಿ: ಬಳ್ಳಾರಿ ಮಹಾನಗರ ಪಾಲಿಕೆಯ 22ನೇ ಅವಧಿಯ ಮೇಯರ್, ಉಪಮೇಯರ್ ಮತ್ತು ನಾಲ್ಕು ಸ್ಥಾಯಿ ಸಮಿತಿಗಳ ಚುನಾವಣೆಯನ್ನು ಮಾ.29ರಂದು ನಡೆಸಲು ನಿರ್ಧರಿಸಲಾಗಿದೆ ಎಂದು ಸೋಮವಾರದಂದು ಪ್ರಾದೇಶಿಕ ಆಯುಕ್ತರು ಆದೇಶ ಹೊರಡಿಸಿದ್ದಾರೆ.

ಈ ಕುರಿತು ಪಾಲಿಕೆ ಆಯುಕ್ತರಿಗೆ ಪತ್ರ ಬರೆದಿರುವ ಪ್ರಾದೇಶಿಕ ಆಯುಕ್ತರು. ಸರ್ಕಾರದ ದಿ: 30.06.2019 ರ ನಿರ್ದೇಶನ ಹಾಗೂ ಆಯುಕ್ತರು ಮಹಾನಗರ ಪಾಲಿಕೆ ಬಳ್ಳಾರಿ ಮಾ.20ರ ಕೋರಿಕೆಯನ್ವಯ, ಕರ್ನಾಟಕ ಪೌರಾಡಳಿತ ಕಾಯ್ದೆ 1976 ರ ಕಲಂ 71 ರನ್ವಯ ಹಾಗೂ ಚುನಾವಣೆ ನಿಯಮಗಳು–1979 ರ ನಿಯಮ 71 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ ಕಲಬುರಗಿ ವಿಭಾಗದ ಬಳ್ಳಾರಿ ಜಿಲ್ಲೆಯ, ಬಳ್ಳಾರಿ ಮಹಾನಗರ ಪಾಲಿಕೆಯ 22ನೇ ಅವಧಿಯ ಮೇಯರ್, ಉಪ ಮೇಯರ್ ಹಾಗೂ 4(ನಾಲ್ಕು) ಸ್ಥಾಯಿ ಸಮಿತಿಗಳ ಚುನಾವಣೆಯನ್ನು ಮಾ.29ರಂದು ಮಧ್ಯಾಹ್ನ 12:30ಗಂಟೆಗೆ ಜರುಗಿಸಲು ನಿರ್ಧರಿಸಿ ಚುನಾವಣಾ ನೋಟಿಸುಗಳನ್ನು ಸಂಬಂಧಪಟ್ಟ ಮತದಾರರಿಗೆ ಜಾರಿಗೊಳಿಸಲಾಗಿದೆ.

ಕರ್ನಾಟಕ ಪೌರಾಡಳಿತ ನಿಯಮ–1979 ರ ನಿಯಮ–72 ರನ್ವಯ ಚುನಾವಣೆ ನೋಟಿಸು ಹೊರಡಿಸಿದ ದಿನಾಂಕದಿಂದ ಚುನಾವಣೆ ನಿಗದಿಪಡಿಸಲಾದ ಎರಡು ಗಂಟೆ ಮುಂಚಿತವಾಗಿ ಸ್ಪರ್ಧಿಸುವ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಲು ಅವಕಾಶವಿರುತ್ತದೆ.ಅಪರ ಜಿಲ್ಲಾಧಿಕಾರಿ, ಬಳ್ಳಾರಿ ಇವರಿಗೆ ಮೇಲ್ಕಂಡ ಅವಧಿಯಲ್ಲಿ ಈ ಚುನಾವಣೆಯ ನಾಮಪತ್ರಗಳನ್ನು ಸ್ವೀಕರಿಸಲು ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿದ್ದು, ಅದರಂತೆ ನಿಯಮಾನುಸಾರ ಕಾರ್ಯನಿರ್ವಹಿಸಲು ಆದೇಶಿಸಿದೆಂದು ಆದೇಶದಲ್ಲಿ ತಿಳಿಸಿದ್ದಾರೆ.

## ಅಧಿಕಾರಿಗಳೊಂದಿಗೆ ಕಲಿತ ಅನುಭ ಮರೆಯಬಾರದು



ಬಳ್ಳಾರಿ: ಪೊಲೀಸ ಇಲಾಖೆಯಲ್ಲಿ ಸಿಬ್ಬಂದಿಗಳು, ಅಧಿಕಾರಿಗಳು ಹಿಂದೆ ಕರ್ತವ್ಯ ನಿರ್ವಹಿಸಿದ ಅನುಭವ ಮತ್ತು ಅಧಿಕಾರಿಗಳೊಂದಿಗೆ ಕಲಿತ ಅನುಭವವನ್ನು ಮರೆಯಬಾರದು ಎಂದು ಬ್ರೂಸ್ ಪೇಟೆ ಠಾಣೆಯ ಪಿಐ ಎಮ್.ಎನ್ ಸಿಂಧೂರ ಅವರು ತಿಳಿಸಿದರು. ನಗರದಲ್ಲಿ ಭಾನುವಾರ ಸಂಜೆ ಬ್ರೂಸ್ ಪೇಟೆ ಪೊಲೀಸ್ ಠಾಣೆಯಲ್ಲಿ ಆವರಣದಲ್ಲಿ ಎ.ಎಸ್.ಐ ಹುದ್ದೆ ಯಿಂದ ಪಿ.ಎಸ್.ಐ ಹುದ್ದೆಗೆ ಬಡ್ತಿ ಪಡೆದ ಅಧಿಕಾರಿಗಳು ಬಿಳ್ಕೋಡಿಗೆ ಸಮಾರಂಭ ನಡೆಯಿತು.

ಬ್ರೂಸ್ ಪೇಟೆ ಠಾಣೆಯ ಪಿಐ ಎಮ್.ಎನ್ ಸಿಂಧೂರ ಮಾತನಾಡಿದ ಅವರು ಪೊಲೀಸ್ ಇಲಾಖೆಯಲ್ಲಿನ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಜೀವನದಲ್ಲಿ ಆರೋಗ್ಯ ಮತ್ತು ಅಧಿಕಾರಿಗಳ ಅನುಭವ ಬಹಳ ಮುಖ್ಯ. ಹಿಂದೆ ನಡೆದ ಘಟನೆಗಳನ್ನು ಮರೆಯಬಾರದು ಹಾಗೂ ಕಠಿಣ ಶ್ರಮ ಪಡಬೇಕು. ಎ.ಎಸ್.ಐ ನಿಂದ ಪಿ.ಎಸ್.ಐ ಆಗಿ ಬಡ್ತಿ ಹೊಂದಿದ ಅಧಿಕಾರಿಗಳಿಗೆ ಶುಭ ಕೋರಿದರು. ಪೊಲೀಸ ಇಲಾಖೆಯಲ್ಲಿ ಇರುವವರು ಮನೋಭಾವ ಮತ್ತು ವೃತ್ತಿ ಬದಲಾವಣೆಯನ್ನು ಮಾಡಿಕೊಳ್ಳಬೇಕು. ಪೊಲೀಸ್ ಇಲಾಖೆ ಗೌರವ ನೀಡುತ್ತೆ ಹಾಗೂ ಅನ್ನವನ್ನು ನೀಡುತ್ತದೆ ಎಂದರು. ಈ ಸಮಯದಲ್ಲಿ ಕಿರಿಯ ಪೊಲೀಸ್ ಸಿಬ್ಬಂದಿಗಳು ಹಿರಿಯ ಸಲಹೆ ಮತ್ತು ಸೂಚನೆ ಬಹಳ ಮುಖ್ಯ ಎಂದರು.

ಪಿ.ಎಸ್.ಐ ಆಗಿ ಬಡ್ತಿ ಹೊಂದಿದ ಹನುಮಂತಪ್ಪ.ಜಿ ಮಾತನಾಡಿದ ಅವರು ಪೊಲೀಸ್ ಇಲಾಖೆಯಲ್ಲಿ ಮೊದಲು ಕೆಲಸ ಕಲಿಯಬೇಕು. ಶಿಸ್ತು ಬಹಳ ಮುಖ್ಯ. ಪೊಲೀಸ್ ವೃತ್ತಿಯಲ್ಲಿ 34 ವರ್ಷಗಳ ಕಾಲ ಸೇವೆಯನ್ನು ಸಲ್ಲಿಸಿದ್ದೆನೆ. ಸಿಪಿಐ ಮತ್ತು ಡಿವೈಎಸ್ಪಿ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿದ್ದೆನೆ ಎಂದರು. ಅಧಿಕಾರಿಗಳಿಗೆ ಗೌರವವನ್ನು ನೀಡಿ ಕೆಲಸ ಮಾಡಬೇಕು ಎಂದು ತಿಳಿಸಿದರು. ನಂತರ ಪಿ.ಎಸ್.ಐ ನಾಗಭೂಷಣ ಮಾತನಾಡಿದ ಅವರು ಬಳ್ಳಾರಿ ಜಿಲ್ಲೆಯಲ್ಲಿ ಅನೇಕ ವರ್ಷಗಳಿಂದ ಕೆಲಸವನ್ನು ಮಾಡಿದ್ದೆವೆ. ಮುಂದೆನು ಉತ್ತಮವಾಗಿ ಕರ್ತವ್ಯ ನಿರ್ವಹಿಸಿದ್ದೆನೆ ಎಂದು ತಿಳಿಸಿದರು. ಅಧಿಕಾರಿಗಳಿಗೆ ಗೌರವ ಕೊಡಬೇಕು ಎಂದು ತಿಳಿಸಿದರು.

ಪಿ.ಎಸ್.ಐ ಸುರೇಶಪ್ಪ ಮಾತನಾಡಿದ ಅವರು ಪಿ.ಎಸ್.ಐ ಆಗಿ ಬಡ್ತಿ ಪಡೆದ ಸ್ನೇಹಿತ ಹನುಮಂತಪ್ಪ.ಜಿ ಅವರು ಸ್ನೇಹ ಜೀವಿಯಾಗಿದ್ದರು. ಪೊಲೀಸ್ ಅಧಿಕಾರಿಗಳು ಜೊತೆಗೆ ಹೇಗೆ ? ಕರ್ತವ್ಯ ನಿರ್ವಹಿಸಬೇಕು ಎನ್ನುವ ಅಂಶಗಳನ್ನು ಪಾಲನೆ ಮಾಡಿದ್ದೆನೆ ಎಂದರು. ಪೊಲೀಸ ಇಲಾಖೆಯಲ್ಲಿ ಸಮಾಧಾನ ಮತ್ತು ತಾಳ್ಮೆ ಇರಬೇಕು ಎನ್ನುವ ಮಾಹಿತಿಯನ್ನು ತಿಳಿಸಿದರು. ಅದನ್ನು ಪಾಲನೆ ಮಾಡಿದ್ದೆನೆ ಎಂದರು.

ಠಾಣೆಯ ಸಿಪಿಐ ಮತ್ತು ಪಿ.ಎಸ್.ಐ ಅಧಿಕಾರಿಗಳು,ಬಡ್ತಿ ಹೊಂದಿದ ಪಿ.ಎಸ್.ಐ ಅಧಿಕಾರಿಗಳಿಗೆ ಡಬಲ್ ಸ್ಟಾರ್ ಗಳನ್ನು ಹಾಕಿದರು. ಶಾಲು, ಪೇಟ, ಹೂವಿನಹಾರ ಹಾಕಿ ಸನ್ಮಾನ ಮಾಡಿದರು.

# ಸ್ವಕುಲಸಾಳಿ ಸಮಾಜ ತಮ್ಮ ಕುಲ ಕಸುಬಿನಿಂದ ಅಂತರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಳ್ಳಬೇಕು: ಗೌರಿ ಮಾನಸ್



ಬಳ್ಳಾರಿ: ಮಹಿಳೆಯರು ಸ್ವಂತ ಪರಿಶ್ರಮ ಮತ್ತು ವಿವೇಚನೆಯಿಂದ ಸಮಾಜದ ಮುಖ್ಯ ವಾಹಿನಿಗೆ ಬರಬೇಕು, ತನ್ಮೂಲಕ ಕೌಟುಂಬಿಕವಾಗಿ, ಆರ್ಥಿಕವಾಗಿ, ಸಾಮಾಜಿಕವಾಗಿ ಗುರುತಿಸಿಕೊಳ್ಳಬೇಕು, ಪ್ರಧಾನ ಮಂತ್ರಿ, ರಾಷ್ಟ್ರಪತಿ, ಸೇರಿದಂತೆ ದೇಶದ ಅತ್ಯುನತವಾದ ಹುದ್ದೆಗಳನ್ನು ಅಲಂಕರಿಸಿ ಎಲ್ಲಾ ರಂಗದಲ್ಲೂ ತನ್ನ ಹೆಚ್ಚೆ ಗುರುತನ್ನು ಮೂಡಿಸಿ ಹೆಣ್ಣು ಅಬಲೆಯಲ್ಲ ಸಬಲೆ ಎಂದು ನಿರೂಪಿಸಿದ್ದಾರೆ ಎಂದು ನಗರ ಶಾಸಕ ಗಾಲಿ ಸೋಮಶೇಖರ್ ರೆಡ್ಡಿ ಅಭಿಪ್ರಾಯಪಟ್ಟರು.

ಅವರು ನಗರದ ಕುಬೇರ ನಗರದ ಸ್ವಕುಲ ಸಾಳಿ ಸಮಾಜದ ಸಮುದಾಯ ಭವನದಲ್ಲಿ ಶ್ರೀ ಭುವನೇಶ್ವರಿ ಮಹಿಳಾ ಸಂಘದವತಿಯಿಂದ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಸಸಿಗೆ ನೀರು ಎರೆಯುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಮಹಿಳಾ ಸಬಲೀಕರಣ ವಿಷಯದ ಕುರಿತು ಶ್ರೀಕೃಷ್ಣದೇವರಾಯ ವಿಶ್ವ ವಿದ್ಯಾಲಯದ ಸಹಾಯಕ ಪ್ರಾಧ್ಯಾಪಕಿ ಗೌರಿ ಮಾಣಿಕ್ ಮಾನಸ್ ರವರು ಉಪನ್ಯಾಸ ನೀಡಿ, ಮಹಿಳೆ ಯಾವ ಕ್ಷೇತ್ರದಲ್ಲಿ ಹಿಂದುಳಿಯದೆ ಎಲ್ಲಾ ರಂಗದಲ್ಲೂ ಕೆಲಸ ಮಾಡಿ ಸೈ ಎನಿಸಿಕೊಂಡಿದ್ದಾರೆ, ಇತಿಹಾಸಿದಿಂದಲೂ ಸಮಾಜದಲ್ಲಿ ಪುರುಷರಿಗೆ ಸಮಾನವಾಗಿ ದುಡಿಯುತ್ತಾ ಆರ್ಥಿಕವಾಗಿ ಸಬಲರಾಗುತ್ತಾ ಕುಟುಂಬದಲ್ಲಿ ಸಹ ತನ್ನ ಪ್ರಮುಖ ಜವಬ್ಧಾರಿಯನ್ನು ನಿಭಾಯಿಸುತ್ತಾಳೆ, ಇಂದಿನ ಕಾಲದಲ್ಲಿ ಮಹಿಳೆಯಿಲ್ಲದ ಯಾವುದೇ ಕಛೇರಿಯನ್ನು ಕಾಣಲು ಅಸಾಧ್ಯವೆಂದು ಅಭಿಪ್ರಾಯಪಟ್ಟರು. ಸಮಾಜದಲ್ಲಿ ಮೇಲು ಕೀಳು ಎನ್ನುವುದನ್ನು ಮರೆತು ನಿಸ್ವಾರ್ಥದಿಂದ ಕೆಲಸ ಮಾಡಬೇಕು, ಯಾವುದೇ ಕಾರಣಕ್ಕೂ ಇಗೋ ಇಟ್ಟುಕೊಳ್ಳದೆ ಒಬ್ಬರಿಗೊಬ್ಬರು ಸಹಾಯ ಪಡೆದುಕೊಂಡು ಸಮಾಜದ ಮುಖ್ಯವಾಹಿನಿಗೆ ಬರಬೇಕೆಂದರು. ತಾವು ಕಲಿತ ಕರಕುಶಲ ಕಲೆಯನ್ನು ಬಳಸಿಕೊಂಡು ತಮ್ಮ ನೇಕಾರಿಕೆಯ ಸೀರೆ ಸೇರಿದಂತೆ ಇತರೆ ಬಟ್ಟೆಗಳನ್ನು ರಾಷ್ಟ್ರೀಯ ಅಂತರಾಷ್ಟ್ರೀಯ ಮಟ್ಟಕ್ಕೆ ತಮ್ಮ ಉತ್ಪನ್ನಗಳನ್ನು ಕೊಂಡು ಹೋಗಬೇಕೆಂದರು. ಶ್ರೀಭುವನೇಶ್ವರಿ ಮಹಿಳಾ ಮಂಡಳಿಯ ಅಧ್ಯಕ್ಷೆ ಮಲ್ಲೇಶ್ವರಿ ಜುಜಾರೆ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿ, ರಾಣಿ ಅಬ್ಬಕ್ಕ, ಕಿತ್ತೂರು ರಾಣಿ ಚೆನ್ನಮ್ಮ, ಒನಕೆ ಓಬವ್ವರಾದಿಯಾಗಿ ಇತಿಹಾಸ ಮಹಿಳೆಯರನ್ನು ಆದರ್ಶವಾಗಿಟ್ಟುಕೊಂಡು ನಮ್ಮ ಜೀವನದಲ್ಲಿ ಧ್ಯರ್ಯದಿಂದ ಹೆಜ್ಜೆ ಮುಂದಡಿಯಿಡಬೇಕು, ಮಹಿಳೆ ಕಲೆ, ರಂಗಭೂಮಿ, ಸಿನಿಮಾ, ಗಾಯನ, ಚಿತ್ರಕಲೆ, ಸೈನ್ಯ, ಪೈಲೆಟ್, ಸೇರಿದಂತೆ ಹಲವಾರು ಕ್ಲಿಷ್ಟಕರ ಕ್ಷೇತ್ರದಲ್ಲೂ ದುಡಿಯುತ್ತಾ ಎಲ್ಲಾ ರಂಗದಲ್ಲೂ ಸೈ ಎನಿಸಿಕೊಂಡಿದ್ದಾರೆ ಎಂದರು. ಗಗನಸಖಿ ಮತ್ತು ಪೈಲೆಟ್ ನಂತ ಉತ್ತುಂಗದ ಹುದ್ದೆಯನ್ನು ನಿಭಾಹಿಸಿದ್ದನ್ನು ಕಂಡಿದ್ದೇನೆ ಮತ್ತು ಅತ್ಯಂತ ಕೆಳ ಹಂತದಲ್ಲಿ ಚಪ್ಪಲಿ ಹೊಲಿಯುವುದನ್ನು ಸಮಾಜದಲ್ಲಿ ಕಂಡಿದ್ದೇನೆ ಎಂದರು.

ಈ ಕಾರ್ಯಕ್ರಮದಲ್ಲಿ ಮಾಜಿ ಕೆ.ಎಂ. ಎಫ್ ಅಧ್ಯಕ್ಷ ವೀರಶೇಕರ್ ರೆಡ್ಡಿ, ಮಾಜಿ ಬೂಡಾ ಅಧ್ಯಕ್ಷ ಗುರುಲಿಂಗನಗೌಡ, ಮಾಜಿ ನಗರ ಪಾಲಿಕೆ ಸದಸ್ಯ ಮಲ್ಲನಗೌಡ ಮತ್ತು ಮಹಿಳಾ ಮಂಡಳಿಯ ಪದಾಧಿಕಾರಿಗಳು ಮತ್ತು ಸದಸ್ಯರಾದ ಅಮೃತ್ ಗಾಯಕ್ವಾಡ್, ಕಮಲಾಬಾಯಿ ಗುಣಾಯಿತಿ, ಸುಮಿತ್ರಾಬಾಯಿ ವಾಂಜ್ರೆ, ಜಿಂದೆ ಲಕ್ಷ್ಮಿಬಾಯಿ, ಪಾಣೀಭಾತೆ ಜಯಲಕ್ಷ್ಮಿ,ಶಾಂತಲಕ್ಷ್ಮಿ ಗಾಯಕ್ವಾಡ್, ಜುಜಾರೆ ಕಾಂತಬಾಯಿ, ಗೌರಮ್ಮ ಸಪಾರೆ, ಸಾಕ್ರೆ ಲಕ್ಷ್ಮಿಬಾಯಿ ಸೇರಿದಂತೆ ನೂರಾರು ಮಹಿಳೆಯರಿದ್ದರು. ಸಪಾರೆ ಶ್ರೀಧರ್, ಸ್ವಕುಲಸಾಳಿ ಸಮಾಜದ ಅಧ್ಯಕ್ಷರು, ರಾಜಶೇಖರ್ ಉಪಾಧ್ಯಕ್ಷರು, ವಿದ್ಯಾವರ್ಧಕ ಸಂಘದ ಅಧ್ಯಕ್ಷರಾದ ಸಿಂಧೆ ಶ್ರೀನಿವಾಸ್, ಕಾರ್ಯದರ್ಶಿ ವಿಜೇಂದ್ರ, ಸರ್ಗಿ ನಾರಾಯಾಣ ಸೇರಿದಂತೆ ನೂರಾರು ಜನ ಸಮಾಜದ ಮತ್ತು ಮಂಡಳಿಯ ಕಾರ್ಯಕ್ರಮವನ್ನು ಕಾರ್ಯದರಶಿ ಜೀಜಾಬಾಯಿ, ಸ್ವಾಗತಿಸಿ, ಸುನೀತಾ ಸೂರೆ ನಿರೂಪಿಸಿದರು, ವಂದಿಸಿದರು. ಸ್ವಕುಲ ಸಾಳಿ ಸಮಾಜದ ಅಭಿವೃದ್ಧಿಗಾಗಿ ದುಡಿದಂತಹ ಮಹಿಳೆಯರನ್ನು ಶಾಲು ಹೊದಿಸಿ ಸನ್ಮಾನಿಸಿ ಗೌರವಿಸಲಾಯಿತು.

# ರಾಣಿ ಚೆನ್ನಮ್ಮ ವಿವಿ 11ನೇ ಘಟಿಕೋತ್ಸವ: ಇಬ್ಬರಿಗೆ ಗೌರವ ಡಾಕ್ಟರೇಟ್

## ವೃತ್ತಿ ಕೌಶಲ್ಯದಿಂದ ಯಶಸ್ಸು ಸಾಧ್ಯ: ರಾಜ್ಯಪಾಲ ಥಾವರಚಂದ್ ಗೆಹ್ಲೋಟ್




ಬೆಳಗಾವಿ: "ಕಲಿತ ವಿದ್ಯೆಯು ಬದುಕಿನಲ್ಲಿ ಶಾಶ್ವತವಾಗಿರುತ್ತದೆ. ಇಂದಿನ ತಂತ್ರಜ್ಞಾನ ಯುಗದಲ್ಲಿ ಅಗತ್ಯ ಕೌಶಲವನ್ನು ಗಳಿಸಬೇಕು. ಯಾವುದೇ ಕ್ಷೇತ್ರವಿರಲಿ ಕೌಶಲದಿಂದ ಮಾತ್ರ ಯಶಸ್ಸು ಸಾಧ್ಯವಾಗುತ್ತದೆ. ಆದ್ದರಿಂದ ಕೌಶಲ್ಯವನ್ನು ಹೆಚ್ಚಿಸಿಕೊಳ್ಳಲು ನಿರಂತರವಾಗಿ ಪ್ರಯತ್ನಿಸಬೇಕು" ಎಂದು ರಾಜ್ಯಪಾಲರಾದ ಥಾವರಚಂದ್ ಗೆಹ್ಲೋಟ್ ಅವರು ಕರೆ ನೀಡಿದರು.

ಸುವರ್ಣ ವಿಧಾನಸೌಧದ ಸೆಂಟ್ರಲ್ ಸಭಾಂಗಣದಲ್ಲಿ ಸೋಮವಾರ (ಮಾ.20) ನಡೆದ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ 11 ನೇ ಘಟಿಕೋತ್ಸವ ಸಮಾರಂಭದಲ್ಲಿ ಅವರು ಮಾತನಾಡಿದರು.

ವಿದ್ಯೆಯು ನಮ್ಮ ಹಾಗೂ ಸಮಾಜದ ಏಳ್ಗೆಗೆ ಬಳಕೆಯಾಗಬೇಕು. ಸಹೋದರತೆ ಭಾವದೊಂದಿಗೆ ನಾವೆಲ್ಲರೂ ಒಟ್ಟಾಗಿ ಮುನ್ನಡೆಯಬೇಕು.

ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಕರ್ನಾಟಕವು ಪ್ರಪ್ರಥಮವಾಗಿ ಅನುಷ್ಠಾನಗೊಳಿಸಿದೆ. ದೇಶದ ಯುವಸಮುದಾಯದ ಅಭಿವೃದ್ಧಿಗೆ ಪೂರಕವಾಗಿದೆ.

ಸ್ವಾತಂತ್ರ್ಯದ ಅಮೃತ ಮಹೋತ್ಸವದ ಸಂದರ್ಭದಲ್ಲಿ ದೇಶದ ಸ್ವಾತಂತ್ರ್ಯವನ್ನು ಮತ್ತಷ್ಟು ಬಲಪಡಿಸುವುದರ ಜತೆಗೆ ಸ್ವಾತಂತ್ರ್ಯದ ಶತಮಾನೋತ್ಸವ ವೇಳೆಗೆ ಭಾರತವನ್ನು ಜಗತ್ತಿನ ಅತ್ಯಂತ ಬಲಿಷ್ಠ ದೇಶವಾಗಿ ಹೊರಹೊಮ್ಮಿಸುವ ನಿಟ್ಟಿನಲ್ಲಿ ಯೋಜನೆ ರೂಪಿಸಲಾಗಿದೆ.

ಸರಕಾರದ ಯೋಜನೆಗಳ ಸಹಭಾಗಿತ್ವದಿಂದ ಮಾತ್ರ ಅಭಿವೃದ್ಧಿ ಸಾಧ್ಯ. ಕಳೆದ 75 ವರ್ಷಗಳಲ್ಲಿ ಇದು ಸಾಬೀತಾಗಿದೆ. ಕೋವಿಡ್ ಸಮಸ್ಯೆಯನ್ನು ದೇಶವು ಪರಿಣಾಮಕಾರಿಯಾಗಿ ನಿಭಾಯಿಸಿದೆ. ಇಡೀ ಜಗತ್ತಿಗೆ ಕೋವಿಡ್ ಲಸಿಕೆಯನ್ನು ಒದಗಿಸಿದೆ.

ನವ ಪದವೀಧರರು ಮುಂಬರುವ ದಿನಗಳಲ್ಲಿ ಕ್ರೀಡೆ ಮತ್ತು ಕಲಾಕ್ಷೇತ್ರದಲ್ಲಿ ತಮ್ಮನ್ನು ತೊಡಗಿಸಿಕೊಂಡು ದೈಹಿಕವಾಗಿ ಮತ್ತು ಮಾನಸಿಕವಾಗಿ ಸದೃಢರಾಗಿ ಇರಬೇಕು.

ಪರಿಸರ ಮಾಲಿನ್ಯ ಮತ್ತು ಅಸಮತೋಲನ ನಿರ್ವಹಣೆಗಾಗಿ ನಿರಂತರ ಪ್ರಯತ್ನ ಮಾಡಬೇಕು.

ರಾಣಿ ಚೆನ್ನಮ್ಮ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದವರು. ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯವು ಅತೀ ದೊಡ್ಡ ವಿಶ್ವವಿದ್ಯಾಲಯಗಳಲ್ಲಿ ಒಂದಾಗಿದೆ. ವಿವಿ ತನ್ನ ಮೂಲ ಉದ್ದೇಶದ ಈಡೇರಿಕೆ ನಿಟ್ಟಿನಲ್ಲಿ ಫಲಪ್ರದ ಹೆಜ್ಜೆಗಳನ್ನು ಇಡುತ್ತಿದೆ.

ಗೌರವ ಡಾಕ್ಟರೇಟ್ ಪದವಿ ಪುರಸ್ಕೃತರನ್ನು ಅಭಿನಂದಿಸಿದ ಅವರು, ಮುಂಬರುವ ದಿನಗಳಲ್ಲಿ ತಮ್ಮ ಸೇವೆಯನ್ನು ಇದೇ ರೀತಿ ಮುಂದುವರಿಸಬೇಕು ಎಂದರು.

ಪದವೀಧರರನ್ನು ಕೂಡ ಅಭಿನಂದಿಸಿದ ಅವರು, ಶಿಕ್ಷಣ ಮತ್ತು ನೈತಿಕಮೌಲ್ಯವು ವಿದ್ಯಾರ್ಥಿಗಳ ಭವಿಷ್ಯವನ್ನು ಉಜ್ವಲಗೊಳಿಸಲಿ ಎಂದು ಹಾರೈಸಿದರು.

ವಿವಿ ಧ್ಯೇಯವಾಕ್ಯ ಗಮನದಲ್ಲಿಟ್ಟುಕೊಂಡು ಜೀವನಪರ್ಯಂತ ವಿದ್ಯಾರ್ಥಿಯಾಗಿ ಜ್ಞಾನಾರ್ಜನೆ ಮಾಡುವುದರ ಜತೆಗೆ ಗಳಿಸಿದ ಜ್ಞಾನವನ್ನು ಧಾರೆಯರಿಯುವ ಮೂಲಕ ಸಮಾಜದ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ರಾಜ್ಯಪಾಲರಾದ ಥಾವರಚಂದ್ ಗೆಹ್ಲೋಟ್ ಅವರು ಕರೆ ನೀಡಿದರು.

ಘಟಿಕೋತ್ಸವ ಭಾಷಣ ಮಾಡಿದ ವಿಶ್ರಾಂತ ಕುಲಪತಿ ಹಾಗೂ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಮಂಡಳಿಯ ಮಾಜಿ ಉಪಾಧ್ಯಕ್ಷರಾದ ಡಾ.ಬಿ.ತಿಮ್ಮೇಗೌಡ ಅವರು, ಆಯಾ ಕಾಲಕ್ಕೆ ಎದುರಾಗುವ ಪರಿಸ್ಥಿತಿಯನ್ನು ಸಮರ್ಥವಾಗಿ ನಿಭಾಯಿಸುವುದರ ಜತೆಗೆ ಬದುಕುವ ಕಲೆಯನ್ನು ಕಲಿಸುವುದೇ ಶಿಕ್ಷಣದ ಗುರಿಯಾಗಿದೆ" ಎಂದು ಹೇಳಿದರು.

ಯಶಸ್ಸಿಗೆ ಯಾವುದೇ ಶಾರ್ಟ್ ಕಟ್ ದಾರಿಗಳಿಲ್ಲ; ಕಠಿಣ ಪರಿಶ್ರಮದಿಂದ ಮಾತ್ರ ಯಶಸ್ಸು ಗಳಿಸುವುದು ಸಾಧ್ಯ. ಬರೀ ತಾವು ಕಲಿತ ವಿಷಯದ ಜ್ಞಾನವಿದ್ದರೆ ಸಾಲದು, ಸಂದರ್ಭಕ್ಕೆ ಅನುಗುಣವಾಗಿ ಅದನ್ನು ಬಳಕೆ ಮಾಡುವುದು ಗೊತ್ತಿರಬೇಕು. ಅಂದಾಗ ಮಾತ್ರ ಶಿಕ್ಷಣದ ಉದ್ದೇಶ ಈಡೇರುತ್ತದೆ. ಕ್ಷಣ ಕ್ಷಣಕ್ಕೂ ಬದಲಾಗುವ ಈ ಜಗದಲ್ಲಿ ಜ್ಞಾನ ಮತ್ತು ಕೌಶಲ್ಯವನ್ನು ಗಳಿಸುವುದಕ್ಕೆ ಅಪರಿಮಿತ ಅವಕಾಶಗಳಿವೆ. ಆದ್ದರಿಂದ ಕಾಲಕ್ಕೆ ತಕ್ಕಂತೆ ನಾವು ಜ್ಞಾನಕೌಶಲಗಳನ್ನು ರೂಢಿಸಿಕೊಳ್ಳಬೇಕು ಎಂದು ಡಾ.ತಿಮ್ಮೇಗೌಡ ಅವರು ವಿದ್ಯಾರ್ಥಿ ಸಮೂಹಕ್ಕೆ ಕರೆ ನೀಡಿದರು.

ಇಂಧನ, ಪರಮಾಣು, ಕೈಗಾರಿಕೆ ಸೇರಿದಂತೆ ಸೀಮಿತ ಸಂಪನ್ಮೂಲ ಹೊಂದಿರುವ ಭಾರತ ದೇಶದಲ್ಲಿ ಮಾನವ ಸಂಪನ್ಮೂಲವೇ ದೊಡ್ಡ ಆಸ್ತಿಯಾಗಿದೆ. ಇಲ್ಲಿನ ಯುವ ಸಂಪನ್ಮೂಲವನ್ನು ಸರಿಯಾದ ನಿಟ್ಟಿನಲ್ಲಿ ಬಳಸಿಕೊಳ್ಳಲು ಸೂಕ್ತ ತರಬೇತಿಯ ಅವಶ್ಯಕತೆಯಿದೆ ಎಂದು ಅವರು ಪ್ರತಿಪಾದಿಸಿದರು.

ಆಧುನಿಕ ವಿಜ್ಞಾನ–ತಂತ್ರಜ್ಞಾನದ ಪ್ರಗತಿಯು ನಾಗಾಲೋಟದಲ್ಲಿ ಮುಂದುವರಿದಿದೆ. ಅಕುಶಲ ಕಾರ್ಮಿಕರ ಬಹುಪಾಲು ಕೆಲಸವನ್ನು ಯಂತ್ರೋಪಕರಣಗಳು ಕಸಿದುಕೊಂಡಿವೆ.

ಪ್ರಸ್ತುತ ಸನ್ನಿವೇಶದಲ್ಲಿ ವೈಯಕ್ತಿಕ ಏಳ್ಗೆಯ ಜತೆಗೆ ದೇಶ ಮತ್ತು ಜಗತ್ತಿನ ಸರ್ವತೋಮುಖ ಪ್ರಗತಿಗೆ ಪೂರಕವಾದ ಶಿಕ್ಷಣವನ್ನು ಒದಗಿಸುವುದು ಅತ್ಯಗತ್ಯವಾಗಿದೆ ಎಂದು ಡಾ.ತಿಮ್ಮೇಗೌಡ ಹೇಳಿದರು.

ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ರಾಮಚಂದ್ರಗೌಡ ಅವರು, ವಿಶ್ವವಿದ್ಯಾಲಯದ ನೂತನ ಕ್ಯಾಂಪಸ್ ನಿರ್ಮಾಣ ಕಾಮಗಾರಿ ಭರದಿಂದ ನಡೆದಿದೆ ಎಂದು ವಿವರಿಸಿದರು.

ವಿಶ್ವವಿದ್ಯಾಲಯದ ವಿವಿಧ ವಿಭಾಗಗಳ ಅಕಾಡೆಮಿಕ್ ಸಾಧನೆ ಹಾಗೂ ಕ್ರೀಡಾಸಾಧನೆಯನ್ನು ತಿಳಿಸಿದರು. ಪ್ರಸಕ್ತ ವರ್ಷದಲ್ಲಿ 27 ಪಿಎಚ್.ಡಿ; 2611 ಸ್ನಾತಕೋತ್ತರ ಮತ್ತು 44,498 ಸ್ನಾತಕ ಪದವಿಗಳನ್ನು ನೀಡಲಾಗುತ್ತಿದೆ ಇದರೊಂದಿಗೆ 11 ಬಂಗಾರದ ಪದಕಗಳು ಮತ್ತು 149 ರ್ಯಾಂಕ್ ಗಳನ್ನು ಪ್ರದಾನ ಮಾಡಲಾಗುತ್ತಿದೆ ಎಂದು ಹೇಳಿದರು.

**11 ಸ್ವರ್ಣ ಪದಕ; 27 ಪಿಎಚ್.ಡಿ ಪ್ರದಾನ:**

ಘಟಿಕೋತ್ಸವದಲ್ಲಿ ಒಟ್ಟು 47,185 ಸ್ನಾತಕ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಪದವಿ ಪ್ರಧಾನ ಮಾಡಲಾಯಿತು. ಸ್ನಾತಕೋತ್ತರ ಹಾಗೂ ಸ್ನಾತಕ ವಿದ್ಯಾರ್ಥಿಗಳಿಗೆ 11 ಸ್ವರ್ಣ ಪದಕಗಳು, 27 ಪಿಹೆಚ್.ಡಿ. ಪದವಿಗಳನ್ನು ಪ್ರದಾನ ಮಾಡಲಾಯಿತು.

ಸ್ನಾತ್ತಕೋತ್ತರ ವಿದ್ಯಾರ್ಥಿಗಳಾದ ಬಾಗಲಕೋಟೆ ಬಸವೇಶ್ವರ ಕಲಾ ಕಾಲೇಜಿನ ಕಲಾ ವಿಭಾಗದ ವಿದ್ಯಾರ್ಥಿನಿ ಶಶಿಕಲಾ ಅವರಿಗೆ ನಿಗರಿ 3 ಚಿನ್ನದ ಪದಕ, ಪದವಿ ಪ್ರಧಾನ ಮಾಡಲಾಯಿತು.

ಅದೇ ರೀತಿಯಲ್ಲಿ ಬೆಳಗಾವಿಯ ಕೆ.ಎಲ್. ಎಸ್ ಗೋಗಟೆ ಕಾಲೇಜಿನ ವಾಣಿಜ್ಯ ವಿಭಾಗದ ವಿದ್ಯಾರ್ಥಿನಿ ಶ್ವೇತಾ ಪಾಟೀಲ್, ತೊರವಿ ಫ.ಗು ಹಳಕಟ್ಟಿ ಸ್ನಾತಕೋತ್ತರ ಕೇಂದ್ರ ಸಮಾಜ ಕಾರ್ಯ ವಿಭಾಗದ ಶುಭಾ ಹತ್ತಳ್ಳಿ, ಜಮಖಂಡಿ ತುಂಗಲ್ ಬೇಸಿಕ್&ಅಪ್ಲಿಕೇಶನ್ ಕಾಲೇಜಿನ ಬಿ.ಎಸ್.ಸಿ ವಿಭಾಗದ ಶ್ರೀದೇವಿ ಅರಕೇರಿ, ಬೆಳಗಾವಿ ರಾಣಿ ಚನ್ನಮ್ಮ ವಿಶ್ವ ವಿದ್ಯಾಲಯದ ಸಮಾಜಶಾಸ್ತ್ರ ವಿಭಾಗದ ಲಕ್ಷ್ಮಿ ಮಗದುಮ, ಬಾಗಲಕೋಟೆ ಬಿ.ವಿ ಇನ್ಸಿಟ್ಯೂಟ್ ಆಫ್ ಮ್ಯಾನೆಜ್‌ಮೆಂಟ್ ಕಾಲೇಜಿನ ಎಂಬಿಎ ವಿಭಾಗದ ಗುರಮ್ಮಾ ಬಳೆಗಾರ, ಜಮಖಂಡಿ ಬ್ಲೆಡ್ಸ ವಾಣಿಜ್ಯ, ಕಲಾ ಆ್ಯಂಡ್ ಸೈನ್ಸ್ ಕಾಲೇಜಿನ ಪ್ರಿಯಾಂಕ ಮಗದುಮ, ರಾಮದುರ್ಗದ ಸಿ.ಎಸ್.ಬಿ ಕಾಲೇಜಿನ ಇಂಗ್ಲಿಷ್ ವಿಭಾಗದ ಮುಸ್ಕಾನ್ ಮುಲ್ಲಾ, ಹಾರೂಗೇರಿ ಎಸ್.ಪಿ.ಎಂ ಕಾಲೇಜಿನ ಕಲಾ ವಿಭಾಗದ ಸವಿತಾ ಕೊಳ್ಳೆನ್ನವರ, ಶ್ರೀ ಸಿದ್ದೇಶ್ವರ ಕಲಾ, ವಾಣಿಜ್ಯ ಕಾಲೇಜಿನ ಸಮಾಜಶಾಸ್ತ್ರ ವಿಭಾಗದ ಕ್ರಾಂತಿ ಪೂಜೇರಿ ಹಾಗೂ ಬೆಳಗಾವಿಯ ರಾಣಿ ಚನ್ನಮ್ಮ ವಿಶ್ವ ವಿದ್ಯಾಲಯದ ಮಾಸ್ಟರ್ ಆಫ್ ಕಾಮರ್ಸ್ ವಿಭಾಗದ ಪೂಜಾ ಪರಸನ್ನವರ ವಿದ್ಯಾರ್ಥಿನಿಗೆ, ಪದವಿ ಪ್ರಧಾನ, ತಲಾ ಒಂದು ಚಿನ್ನದ ಪದಕ ಪಡೆದುಕೊಂಡರು.

ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಕುಲಸಚಿವರಾದ ರಾಜಶ್ರೀ ಜೈನಾಪುರ, ಕುಲಸಚಿವರು(ಮೌಲ್ಯಮಾಪನ) ಪ್ರೊ.ಶಿವಾನಂದ ಗೊರನಾಳೆ, ಹಣಕಾಸು ಅಧಿಕಾರಿಗಳಾದ ಪ್ರೊ. ಎಸ್.ಬಿ.ಆಕಾಶ, ಸಿಂಡಿಕೇಟ್ ಹಾಗೂ ವಿದ್ಯಾವಿಷಯಕ ಪರಿಷತ್ತಿನ ಸದಸ್ಯರು, ವಿವಿಧ ವಿಭಾಗಗಳ ಡೀನ್, ವಿಭಾಗ ಮುಖ್ಯಸ್ಥರು, ವಿದ್ಯಾರ್ಥಿಗಳು ಮತ್ತು ಪಾಲಕರು ಸಮಾರಂಭದಲ್ಲಿ ಪಾಲ್ಗೊಂಡಿದ್ದರು.




**ಪ್ರೊ.ಮಲ್ಲೇಪುರಂ ವೆಂಕಟೇಶ್ ಹಾಗೂ ದಿ.ಸುರೇಶ್ ಅಂಗಡಿ ಅವರಿಗೆ ಗೌರವ ಡಾಕ್ಟರೇಟ್ ಪ್ರದಾನ:**
ಸಮಾಜಸೇವೆಗಾಗಿ ಬೆಳಗಾವಿ ಲೋಕಸಭಾ ಕ್ಷೇತ್ರದ ಸಂಸದರು ಹಾಗೂ ರೈಲ್ವೆ ಇಲಾಖೆಯ ರಾಜ್ಯ ಸಚಿವರಾಗಿದ್ದ ದಿ.ಸುರೇಶ ಅಂಗಡಿ ಅವರಿಗೆ (ಮರಣೋತ್ತರ) "ಡಾಕ್ಟರ್ ಆಫ್ ಲೆಟರ್ಸ" ಗೌರವ ಡಾಕ್ಟರೇಟ್ ಪದವಿ ಹಾಗೂ ಪ್ರೋ. ಮಲ್ಲೇಪುರಂ ಜಿ. ವೆಂಕಟೇಶ್ ಅವರಿಗೆ "ಡಾಕ್ಟರ್ ಆಫ್ ಲೆಟರ್ಸ" ಗೌರವ ಡಾಕ್ಟರೇಟ್ ಪದವಿ ಪ್ರಧಾನ ಮಾಡಲಾಯಿತು. ಸಂಸದರೂ ಆಗಿರುವ ಮಂಗಳ ಸುರೇಶ್ ಅಂಗಡಿ ಅವರು ದಿ.ಸುರೇಶ್ ಅಂಗಡಿ ಅವರಿಗೆ ವಿಶ್ವವಿದ್ಯಾಲಯ ವತಿಯಿಂದ ಘೋಷಿಸಲಾದ ಗೌರವ ಡಾಕ್ಟರೇಟ್ ಪದವಿ ಸ್ವೀಕರಿಸಿದರು.

## ಅನುಭವ ಮಂಟಪದ ನಿರ್ಮಾಣ ಕುರಿತು ಲಿಂಗಾಯತ ಸಮಾಜದ ಮುಖಂಡರುಗಳೊಂದಿಗೆ ಪೂರ್ವಭಾವಿ



ಬೆಳಗಾವಿ: ಬೆಳಗಾವಿ ಉತ್ತರ ಮತಕ್ಷೇತ್ರದ ಶಾಸಕ ಅನಿಲ ಬೆನಕೆ ರವರ ಕಣಸಿನ ಯೋಜನೆಯಾದ ಬೆಳಗಾವಿಯಲ್ಲಿ ಅನುಭವ ಮಂಟಪ ನಿರ್ಮಾಣ ಮಾಡುವಕುರಿತು ಪ್ರಮುಖ ಪರಿನಿತರು ಸಂಶೋಧನೆ ನಡೆಸಿ ಹಲವಾರು ಬಸವ ಶರಣರ ಅಭಿಪ್ರಾಯ ಸಂಗ್ರಹ ಮಾಡಿಅನುಭವ ಮಂಟಪವನ್ನು ನಿರ್ಮಾಣ ಮಾಡುವ ಕುರಿತು ಲಿಂಗಾಯತ ಸಮಾಜದ ಮುಖಂಡರುಗಳೊಂದಿಗೆ ಪೂರ್ವಭಾವಿ ಸಭೆಯನ್ನು ನಡೆಸಿದರು.


ಬೆಳಗಾವಿ ನಗರದಮಾಳ ಮಾರುತಿ ಬಡಾವಣೆ ಮಹಾಂತೇಶ ನಗರದಲ್ಲಿ ಅನುಭವ ಮಂಟಪವನ್ನು ನಿರ್ಮಿಸಲು ಸಜ್ಜಾಗಿದ್ದು, ಬೆಳಗಾವಿ ನಗರದ ಬಸವಾದಿ ಶರಣರ ಅಭಿಪ್ರಾಯ ಸಂಗ್ರಹ ಮಾಡಿ ಎಲ್ಲ ಗೊಂದಲಗಳ ನಿವಾರಣೆ ಆದ ಬಳಿಕ ಅನುಭವ ಮಂಟಪದ ಒಳಾಂಗಣ ಕಾಮಗಾರಿಗೆ ಚಾಲನೆ ನೀಡಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು. ಅನುಭವ ಮಂಟಪದ ಸ್ಥಾಪನೆಯ ಅಡಿಗಲ್ಲು ಸಮಾರಂಭವನ್ನು ನಿಕಟ ಪೂರ್ವ ಮುಖ್ಯಮಂತ್ರಿಗಳಾದ ಶ್ರೀ ಬಿ.ಎಸ್. ಯಡಿಯೂರಪ್ಪಾಜಿರವರು ನೆರವೇರಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಅನುಭವ ಮಂಟಪದ ನಿರ್ಮಾಣದ ಕುರಿತು ಬೆಳಗಾವಿ ಜನತೆಯು ಅಗತ್ಯ ಸಲಹೆ ಸೂಚನೆಗಳನ್ನು ನೀಡಲು ಶಾಸಕರ ಕಚೇರಿಯನ್ನು ಸಂಪರ್ಕಿಸುವಂತೆ ತಿಳಿಸಿದರು.

## ರದ್ದಾದ ವಿಮಾನ ಸಂಚಾರ ಪುನಾರಂಭಿಸಲು ಸೂಚನೆ

ಬೆಳಗಾವಿ: ಉಡಾನ್ ಯೋಜನೆ ಅಡಿ 13 ಮಾರ್ಗಗಳಿಗೆ ಬೆಳಗಾವಿಯಿಂದ ದೇಶದ ವಿವಿಧ ನಗರಗಳ ನಡುವೆ ವಿಮಾನ ಸಂಚಾರ ಸೇವೆ ಪುನಾರಂಭಿಸುವಂತೆ ಕೋರಿ ಕೆಎಲ್‌ಇ ಕಾರ್ಯಾಧ್ಯಕ್ಷರೂ ಆಗಿರುವ ರಾಜ್ಯಸಭಾ ಮಾಜಿ ಸದಸ್ಯ ಡಾ.ಪ್ರಭಾಕರ ಕೋರೆ ನಾಗರಿಕ ವಿಮಾನಯಾನ ಸಚಿವರಾದ ಜ್ಯೋತಿರಾದಿತ್ಯ ಸಿಂಧಿಯಾ ಅವರಿಗೆ ಮನವಿ ಮಾಡಿದ್ದರು, ಈ ಮನವಿಗೆ ಸಚಿವರು ಸ್ಪಂದಿಸಿದ್ದು ಸಂಬಂಧಿಸಿದ ದೇಸಿಯ ವಿಮಾನಯಾನ ಸಂಸ್ಥೆಗಳು ಬೆಳಗಾವಿ ಜನತೆಯ ಬೇಡಿ–ಕೆಗೆ ಅನುಗುಣವಾಗಿ ಪುನರ್ ಪ್ರಾರಂಭಿಸುವಂತೆ ಸೂಚಿಸಿದ್ದಾರೆ.

ಬೆಳಗಾವಿ ವಿಮಾನ ನಿಲ್ದಾಣದಿಂದ ಉಡಾನ್‌ಯೋಜನೆ ಹಿಂಪಡೆದ ಹಿನ್ನೆಲೆಯಲ್ಲಿ ಹಲವು ವಿಮಾನ ಸಂಸ್ಥೆಗಳು ವಿಮಾನಗಳ ಸಂಚಾರರದ್ದು ಪಡಿಸಿವೆ. ಬೆಂಗಳೂರು ಹೊರತು ಪಡಿಸಿದರೆ ರಾಜ್ಯದಲ್ಲಿಅತಿ ಹೆಚ್ಚು ವಿಮಾನ ಸಂಚಾರ ಸಂಚಾರದಟ್ಟಣೆ ಹೊಂದಿರುವುದು ಬೆಳಗಾವಿ, ಇದರಿಂದ ದೇಶದ ವಿವಿಧ ಪ್ರದೇಶಗಳ ಸಂಪರ್ಕಅನುಮತಿ ನೀಡಿದ್ದರೂ ಸಂಚಾರದಟ್ಟಣೆ ಹೆಚ್ಚಾಗಿ ಪ್ರತಿದಿನ32ಕ್ಕೂ ಅಧಿಕ ವಿಮಾನಗಳು ಬೆಳಗಾವಿಯಿಂದ ಹಾರಾಟ ನಡೆಸುತ್ತಿದ್ದವು.



ಅತಿ ಹೆಚ್ಚು ಪ್ರಯಾಣಿಕರ ದಟ್ಟಣೆ ಹೊಂದಿದ್ದ ದೆಹಲಿ, ಮುಂಬಯಿ ಮತ್ತುಪುಣೆ ಮಾರ್ಗಗಳ ಸೇವೆ ಕೂಡ ಸ್ಥಗಿತಗೊಂಡಿರುವುದು ಬೆಳಗಾವಿ ಜಿಲ್ಲೆ ಬೆಳವಣಿಗೆಗೆ ಅಡ್ಡಿಯಾಗಿದೆ. ರಾಜ್ಯದ ಎರಡನೇ ರಾಜಧಾನಿ ಸ್ಥಾನಮಾನ ಹೊಂದಿರುವ ಬೆಳಗಾವಿಗೆ ಈ ಮೊದಲಿನಂತೆಯೇ ವಿಮಾನ ಸೇವೆಗಳನ್ನು ಮುಂದುವರಿಸುವ ಅಗತ್ಯತೆ ಹೆಚ್ಚಿದೆ. ಈ ನಿಟ್ಟಿನಲ್ಲಿ ಸೂಕ್ತಕ್ರಮ ವಹಿಸಬೇಕು ಎಂದು ಡಾ.ಪ್ರಭಾಕರ ಕೋರೆ ಅವರು ಪತ್ರದ ಮೂಲಕ ಮನವಿ ಮಾಡಿದ್ದರು.

ವಿಮಾನಯಾನವನ್ನು ಕಡಿತ ಮಾಡಿರುವುದರಿಂದ ಜಿಲ್ಲೆಯ ಆರ್ಥಿಕ ವಹಿವಾಟು ಸೇರಿದಂತೆ ಸಾರ್ವಜನಿಕ ಸೇವೆಗಳಿಗೆ ಪೆಟ್ಟು ಬೀಳುತ್ತಿದೆ. ಮೂರು ವಿಶ್ವವಿದ್ಯಾಲಯ, ಅತ್ಯುನ್ನತ ಆರೋಗ್ಯ ಸೇವಾ ಸಂಸ್ಥೆ ಜತೆಗೆವಿಶ್ವಮಾನ್ಯತೆಯ ಪೌಂಡಿಕ್ಲಸ್ಟರ್, ಹೈಡ್ರಾಲಿಕ್ಸ್ ವೈಮಾನಿಕ ಉತ್ಪಾದನೆಯಲ್ಲಿ ಮುಂಚೂಣಿಯಲ್ಲಿರುವ ಬೆಳಗಾವಿಯ ಕೈಗಾರಿಕಾ ವಲಯ ಸೇರಿದಂತೆ ಸಾರ್ವಜನಿಕ ಸೇವಾ ಕ್ಷೇತ್ರಗಳು ಸಂಕಷ್ಟಕ್ಕೆ ಸಿಲುಕಿದಂತಾಗಿವೆ ಎಂದು ಅವರು ಪತ್ರದಲ್ಲಿ ಉಲ್ಲೇಖಿಸಿದ್ದರು.

ಈ ಮನವಿಗೆ ಸ್ಪಂದಿಸಿರುವ ವಿಮಾನಯಾನ ಸಚಿವರು ಡಾ.ಪ್ರಭಾಕರ ಕೋರೆಯವರೆಗೆ ಪತ್ರ ಬರೆಯುವ ಮೂಲಕ ಬೇಡಿ–ಕೆಗೆ ಅನುಗುಣವಾಗಿ ನಿರ್ದಿಷ್ಟ ಸ್ಥಳಗಳಿಗೆ ವಿಮಾನ ಸೇವೆಗಳನ್ನು ಒದಗಿಸುವುದು ವಿಮಾನಯಾನ ನಿರ್ವಾಹಕರಿಗೆ ಬಿಟ್ಟದ್ದುಆದರೂ ಬೆಳಗಾವಿಗೆ ದೇಶೀಯ ವಿಮಾನಯಾನ ಸಂಸ್ಥೆಗಳು ಈ ಮೊದಲಿನಂತೆ ಸೇವೆ ನೀಡುವಂತೆ ಕೋರಲಾಗಿದೆಂದು ತಿಳಿಸಿದ್ದಾರೆ.

## ಡಾ. ಬಿ.ಆರ್ ಅಂಬೇಡ್ಕರ್ ಜಯಂತಿ: ಮಾ.21 ರಂದು ಪೂರ್ವ ಸಿದ್ಧತಾ ಸಭೆ

ಬೆಳಗಾವಿ: ಸಂವಿಧಾನ ಶಿಲ್ಪಿ, ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ 132 ನೇ ಜಯಂತಿ ಏಪ್ರಿಲ್ 14 ರಂದು ಮತ್ತು ಮಾರ್ಚ್ 5 ರಂದು ಹಸಿರು ಕ್ರಾಂತಿ ಹರಿಕಾರ ಮಾಜಿ ಪ್ರಧಾನಿ ಡಾ. ಬಾಬು ಜಗಜೀವನರಾಮರವರ 116ನೇ ಜಯಂತಿಗಳನ್ನು ಆಚರಿಸುವ ಸಲುವಾಗಿ ಬೆಳಗಾವಿ ಜಿಲ್ಲಾಧಿಕಾರಿ ನಿತೇಶ್ ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ಮಂಗಳವಾರ (ಮಾ.21) ಮಧ್ಯಾಹ್ನ 3 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಏರ್ಪಡಿಸಲಾಗಿದೆ.

ಸದರಿ ಸಭೆಗೆ ಸಮುದಾಯದ ಎಲ್ಲಾ ಮುಖಂಡರುಗಳು ಮತ್ತು ಸಂಘ ಸಂಸ್ಥೆಗಳ ಮುಖಂಡರುಗಳು ಹಾಜರಾಗಿ ತಮ್ಮ ಸಲಹೆ, ಸೂಚನೆಗಳನ್ನು ನೀಡಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜಕೀಯ ನಿವೃತ್ತಿ ಎಚ್ಚರಿಕೆ ನೀಡಿದ ರಮೇಶ ಜಾರಕಿಹೊಳಿ

ಅಥಣಿ: ಈ ಬಾರಿ ಮತ್ತೆ ಭಾರತೀಯ ಜನತಾ ಪಕ್ಷದಿಂದ ಅಥಣಿ ಕ್ಷೇತ್ರದಿಂದ ಮಹೇಶ ಕುಮಟಳ್ಳಿ ಸ್ಪರ್ದೆ ಮಾಡುವುದು ನಿಶ್ಚಿತ ಇದರಲ್ಲಿ ಯಾವುದೇ ಅನುಮಾನ ಬೇಡವೆಂದು ಮಾಜಿ ಸಚಿವ ರಮೇಶ ಜಾರಕಿಹೋಳಿ ಹೇಳಿದ್ದಾರೆ.

ಅಥಣಿ ವಿಶ್ರಾಂತಿ ಗೃಹದಲ್ಲಿ ಕರೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಹೇಶ ಕುಮಟಳ್ಳಿ ಮತ್ತು ನಮ್ಮೆಲ್ಲರ ತ್ಯಾಗದಿಂದ ಬಿಜೆಪಿ ಸರಕಾರ ರಚನೆಯಾಗಿದ್ದು ಯಾವುದೇ ಕಾರಣಕ್ಕೂ ಮಹೇಶ ಕುಮಟಳ್ಳಿಯೇ ಅಥಣಿ ಕ್ಷೇತ್ರದ ಬಿಜೆಪಿ ಅಭ್ಯರ್ಥಿ.

ಒಂದು ವೇಳೆ ಅವರಿಗೆ ಟಿಕೆಟ್ ಸಿಗದೆ ಇದ್ದಲ್ಲಿ ನಾನು ಕೂಡಾ ರಾಜಕೀಯ ನಿವೃತ್ತಿ ತಗೆದುಕೊಳ್ಳುವೆ ನಾನು ಗೋಕಾಕನಿಂದ ಸ್ಪರ್ಧೆ ಮಾಡಲಾರೆ ಎಂದರು.

ಲಕ್ಷ್ಮಣ ಸವದಿ ಬುದ್ದಿವಂತ ರಾಜಕಾರಣಿ ಅವರು ಯಾಕೆ ಹೀಗೆ ಮಾಡುತ್ತಿದ್ದಾರೆ ಎಂಬುದು ಗೊತ್ತಿಲ್ಲ, ಅವರಿಗೆ ಕನಿಷ್ಠ ಜ್ಞಾನ ಇರಬೇಕು ಇನ್ನು ಐದು



ವರ್ಷಗಳ ಕಾಲ ಅವರು ವಿಧಾನ ಪರಿಷತ್ ಸದಸ್ಯರಾಗಿ ಮುಂದುವರೆಯಲು ಅವಕಾಶವಿದೆ ಅದು ಬಿಟ್ಟು ವರಿಷ್ಠರ ಹತ್ತಿರ ಟಿಕೇಟ್ ಕೇಳುತ್ತಾನೆ ಎಂಬ ಮಾತು ನನಗೆ ಅಚ್ಚರಿ ಉಂಟುಮಾಡಿದೆ ಎಂದು ಸ್ವಪಕ್ಷದ ನಾಯಕರ ವಿರುದ್ಧವೇ ಗರಂ ಆಗಿದ್ದಾರೆ.

ಮಾಜಿ ಡಿಸಿಎಮ್ ಲಕ್ಷ್ಮಣ ಸವದಿ ಸ್ವಾಭಿಮಾನಕ್ಕೆ ಧಕ್ಕೆ ಉಂಟಾಗಿದೆ ಎಂಬ ಅವರ ಹೇಳಿಕೆ ಕುರಿತು ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಅವರು ಅವರಿಗೆ ಯಾರಿಂದ ಧಕ್ಕೆ ಉಂಟಾಗಿದೆ ಗೊತ್ತಿಲ್ಲ, ನನಗೂ ನನ್ನ ಸ್ವಾಭಿಮಾನಕ್ಕೆ ಧಕ್ಕೆ ಆದರೂ ಪಕ್ಷದಲ್ಲಿ ನಾವು ಕೆಲಸ ಮಾಡುತ್ತಿದ್ದೆವೆ ಎಂದರು.

ಕೇಂದ್ರ ಸಚಿವ ಅಮೀತ್ ಶಾ ಬಹಳ ದಿನಗಳಿಂದ ಭೇಟಿಯಾಗಿರಲಿಲ್ಲ ಅದಕ್ಕೆ ವಿಶೇಷ ಅರ್ಥ ಕಲ್ಪಿಸ ಬೇಕಿಲ್ಲ ಇದು ನಮ್ಮ ಆಂತರಿಕ ವಿಚಾರ.

ಪಕ್ಷದ ಹಿತ ದೃಷ್ಟಿಯಿಂದ ನಡೆದ ವಿಷಯಗಳನ್ನು ಬಹಿರಂಗ ಪಡಿಸಲು ಸಾಧ್ಯವಿಲ್ಲ. ಸ್ಥಳೀಯ ಆರ್ ಎಸ್ ಎಸ್ ಮುಖಂಡ ಅರವಿಂದ ದೇಶಪಾಂಡೆ ಮನೆಗೆ ಭೇಟಿ ನೀಡಿರಿರುವದು ಸೌಜನ್ಯ ಭೇಟಿಯಾಗಿ–ತ್ತು ಮತ್ತೆ ಇದೇ ತಿಂಗಳ 28 ರಂದು ತಾಲೂಕಿನ ಅಮ್ಮಾ ಮಹೇಶ್ವರಿ ಏತ ನೀರಾವರಿ ಯೋಜನೆಯ ಭೂಮಿ ಪೂಜಾ ಕಾರ್ಯಕ್ರಮ ಜರುಗಲಿದ್ದು ರಾಜ್ಯದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಯೋಜನೆಗೆ ಚಾಲನೆ ನೀಡಲಿದ್ದಾರೆ ಎಂದರು.

## ಅಪರಿಚಿತ ವಾಹನ ಡಿಕ್ಕಿ; ಸ್ಥಳದಲ್ಲೇ ಪ್ರಾಣಬಿಟ್ಟ ಹೆಡ್ ಕಾನ್‌ಸ್ಟೇಬಲ್



ಕಲಬುರಗಿ: ಅಪರಿಚಿತ ವಾಹನ ಡಿಕ್ಕಿ ಹೊಡೆದ ಪರಿನಾಮ ಪೊಲೀಸ್ ಠಾಣೆಯ ಹೆಡ್ ಕಾನ್ಸ್ಟೇಬಲರೊಬ್ಬರು ಮೃತಪಟ್ಟಿರುವ ಘಟನೆ ಚಿತ್ತಾಪುರ ತಾಲೂಕಿನ ಹಲಕರ್ಟಿ–ಲಾಡ್ಲಾಪುರ ರಸ್ತೆ ಮಧ್ಯದಲ್ಲಿ ನಡೆದಿದೆ.

ವಾಡಿ ಪೊಲೀಸ್ ಠಾಣೆಯ ಕರಿಯಪ್ಪ ಪೂಜಾರಿ (35) ಮೃತಪಟ್ಟ ಹೆಡ್ ಕಾನ್ಸ್ಟೇಬಲ್. ಇವರು ಬೈಕ್ನಲ್ಲಿ ಹೋಗುತ್ತಿದ್ದ ವೇಳೆಗೆ ಅಪರಿಚಿತ ವಾಹನ ಡಿಕ್ಕಿಯಾಗಿದೆ. ಅಪಘಾತ ಮಾಡಿದವರು ಸ್ಥಳದಿಂದ ಪರಾರಿಯಾಗಿದ್ದಾರೆ. ಮೃತ ಕರಿಯಪ್ಪ ಪೂಜಾರಿ ವಿಜಯಪುರ ಜಿಲ್ಲೆಯ ಇಂಡಿ ತಾಲೂಕಿನ ತೆಗ್ಗಳ್ಳಿ ಮೂಲದವರು. ವಾಡಿಯ ಠಾಣೆಯಲ್ಲಿ ಸೇವೆ ಸಲ್ಲಿಸುತ್ತಿದ್ದರು. ಯಾದಗಿರಿ ಮಾರ್ಗದ ರಾಷ್ಟ್ರೀಯ ಹೆದ್ದಾರಿ ನಾಲವಾರ ಚೆಕ್ ಪೋಸ್ಟ್ ಬಳಿ ಕರ್ತವ್ಯ ನಿರ್ವಹಿಸಿದ್ದ ಹೆಡ್ಕಾನ್ಸ್ಟೇಬಲ್ ಕರಿಯಪ್ಪ ರಾತ್ರಿ 8 ಗಂಟೆಗೆ ಕರ್ತವ್ಯ ಮುಗಿದ ನಂತರ ಅಪರಿಚಿತ ಕಾರಿನಲ್ಲಿ ವಾಡಿ ಪೊಲೀಸ್ ಕ್ವಾಟ್ರಸ್‌ನ ಮನೆಗೆ ತೆರಳಿದ್ದು, ಎಂದಿನಂತೆ ಊಟ ಮಾಡಿ ಮಲಗಿದ್ದರು ಎನ್ನಲಾಗಿದೆ.

ತಡರಾತ್ರಿ ಎದ್ದು ಪುನಃ ನಾಲವಾರ ಚೆಕ್ ಪೋಸ್ಟ್ ಕಡೆಗೆ ಬೈಕ್ ಸವಾರಿ ಹೋದವರು ಸೋಮವಾರ ಬೆಳಗ್ಗೆ ಲಾಡ್ಲಾಪುರ ಗ್ರಾಮ ಸಮೀಪದ ಡಿಗ್ಗಿ ತಾಂಡಾ ಪಕ್ಕದ ಕೂಡು ರಸ್ತೆ ಸಮೀಪ ಶವವಾಗಿ ಪತ್ತೆಯಾಗಿದ್ದಾರೆ. ಘಟನಾ ಸ್ಥಳಕ್ಕೆ ಕೂಡಲೇ ಪೊಲೀಸರು ಭೇಟಿ ನೀಡಿ ಕುಟುಂಬದವರಿಗೆ ಮಾಹಿತಿ ನೀಡಿದ್ದಾರೆ. ಬಳಿಕ ಮನೆಯವರು ಆಗಮಿಸಿದ ನಂತರ ಸ್ಥಳ ಪಂಚನಾಮೆ ಮಾಡಲಾಗಿದೆ. ಅಪಘಾತ ಎಂಬುವುದು ಸ್ಪಷ್ಟವಾಗಿದ್ದು, ವಾಡಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಸ್ಥಳಕ್ಕೆ ಕಲಬುರ್ಗಿ ಎಸ್ಪಿ ಇಶಾ ಪಂತ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ವಿಕಲಚೇತನರು ಹಾಗೂ 80 ವರ್ಷ ಮೇಲ್ಪಟ್ಟವರಿಗೆ ಐಚ್ಚಿಕ ಅಂಚೆ ಮತ ಸೌಲಭ್ಯ: ಜಿಲ್ಲಾಧಿಕಾರಿ

ಬೆಳಗಾವಿ: ಮತಗಟ್ಟೆಗೆ ಆಗಮಿಸಿ ಮತ ಚಲಾಯಿಸಲು ಸಾಧ್ಯವಾಗದ 80 ವರ್ಷ ಮೇಲ್ಪಟ್ಟವರು ಹಾಗೂ ವಿಕಲಚೇತನ ಮತದಾರರಿಗೆ ಅಂಚೆ ಮತಪತ್ರಗಳ ಮೂಲಕ ತಮ್ಮ ಮನೆಯಿಂದಲೇ ಮತದಾನ ಮಾಡುವಂತಹ ಐಚ್ಚಿಕ ಅವಕಾಶವನ್ನು ಕಲ್ಪಿಸಲಾಗಿರುತ್ತದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.



ಅಂಚೆ ಮತಪತ್ರ ವಿತರಣೆ, ಮತದಾನ ಮತ್ತಿತರ ಪ್ರಕ್ರಿಯೆ ಕುರಿತು ಕರ್ನಾಟಕ ರಾಜ್ಯ ಮುಖ್ಯ ಚುನಾವಣಾಧಿಕಾರಿಗಳು ವಿಡಿಯೋ ಸಂವಾದದ ಮೂಲಕ ಮಾಹಿತಿಯನ್ನು ನೀಡಿದ ಬಳಿಕ ಸಂಬಂಧಿಸಿದ ಅಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು.

ಒಮ್ಮೆ ಐಚ್ಚಿಕವಾಗಿ ಅಂಚೆ ಮತಪತ್ರವನ್ನು ಪಡೆದುಕೊಂಡವರಿಗೆ ಯಾವುದೇ ಕಾರಣ–ಕ್ಕೂ ಮತಗಟ್ಟೆಗಳಲ್ಲಿ ಮತ ಚಲಾಯಿಸಲು ಅವಕಾಶ ಇರುವುದಿಲ್ಲ.

ಐಚ್ಚಿಕವಾಗಿ ಅಂಚೆ ಮತಕ್ಕೆ ನೋಂದಾಯಿಸಿದ ಮತದಾರರಿಗೆ ಮುಂಚಿತವಾಗಿಯೇ ಮಾಹಿತಿಯನ್ನು ನೀಡಿದ ಬಳಿಕ ಮತ ಅಧಿಕಾರಿಗಳ ತಂಡವು ಮನೆಗೆ ಭೇಟಿ ನೀಡಿ ಮತದಾನಕ್ಕೆ ಅವಕಾಶ ಕಲ್ಪಿಸಲಿದೆ.

**ಐದು ಅಧಿಕಾರಿ/ಸಿಬ್ಬಂದಿ ತಂಡ ಮನೆಗೆ ಆಗಮನ:**

ತಂಡದಲ್ಲಿ ಇಬ್ಬರು ಮತ ಅಧಿಕಾರಿ, ಮೈಕ್ರೋ ಅಬ್ಸರ್ವರ್, ಪೊಲೀಸ್ ಅಧಿಕಾರಿ ಮತ್ತು ಒಬ್ಬ ಛಾಯಾಗ್ರಾಹಕ ಸೇರಿದಂತೆ ಐದು ಜನರ ತಂಡ ಮತದಾರರ ಮನೆಗೆ ಭೇಟಿ ನೀಡಲಿದೆ.

ಅರ್ಹ ಮತದಾರರ ಕೋರಿಕೆ ಮೇರೆಗೆ ಸಂಬಂಧಿಸಿದ ಮತಕ್ಷೇತ್ರದ ನಿಯೋಜಿತ ಮತ ಅಧಿಕಾರಿಗಳ ತಂಡಗಳು ಅಂಚೆ ಮತಪತ್ರಗಳನ್ನು ಒದಗಿಸಲಿವೆ.

ಐಚ್ಚಿಕವಾಗಿ ನೋಂದಾಯಿತ ಮತದಾರರ ಮತ ಸಂಗ್ರಹಕ್ಕಾಗಿ ಅಧಿಕಾರಿಗಳ ತಂಡ ಮತದಾರನ ಮನೆಗೆ ಭೇಟಿ ನೀಡುವ ದಿನಾಂಕ ಕುರಿತು ಮುಂಚಿತವಾಗಿ ಮಾಹಿತಿಯನ್ನು ನೀಡಲಾಗುವುದು.

ಅವರ ಮೊಬೈಲ್ ಗೆ ಎಸ್.ಎಂ.ಎಸ್. ಮೂಲಕ ಮಾಹಿತಿ ನೀಡಲಾಗುತ್ತದೆ.

ಇದಾದ ಬಳಿಕ ಮತದಾರರ ಮನೆಗೆ ತೆರಳಲಿರುವ ಆಯಾ ಮತಕ್ಷೇತ್ರದ ತಂಡಗಳು ಅವರ ಗುರುತಿನ ಚೀಟಿ ಮತ್ತಿತರ ದಾಖಲಾತಿಗಳನ್ನು ಚುನಾವಣಾ ಆಯೋಗದ ಮಾರ್ಗಸೂಚಿ ಪ್ರಕಾರ ಪರಿಶೀಲಿಸಿ ಮತದಾನಕ್ಕೆ ಅವಕಾಶ ಒದಗಿಸಲಾಗುತ್ತದೆ.

ಮತದಾನದ ಬಳಿಕ ಮತ ಅಧಿಕಾರಿಗಳು ಸದರಿ ಮತಪತ್ರವನ್ನು ನಿಗದಿತ ಲಕೋಟೆಯಲ್ಲಿ ಭದ್ರವಾಗಿಟ್ಟು ನಂತರದ ದಿನಗಳಲ್ಲಿ ಚುನಾವಣಾಧಿಕಾರಿಗಳ ಮೂಲಕ ಮತ ಎಣಿಕೆ ಕೇಂದ್ರಕ್ಕೆ ಕಳಿಸಲಾಗುವುದು.

ಈ ಎಲ್ಲ ಪ್ರಕ್ರಿಯೆಯು ಕನಿಷ್ಠ ಹತ್ತು ದಿನಗಳ ಮುಂಚೆ ಆರಂಭಿಸಿ ನಿಗದಿತ ಮತದಾನ ದಿನಾಂಕಕ್ಕಿಂತ ಒಂದು ದಿನ ಮುಂಚೆ ಪೂರ್ಣಗೊಳಿಸಬೇಕು ಎಂದು ತಿಳಿಸಿದರು.

ಮತದಾರರಿಗೆ ಮತದಾನ ವಿಧಾನದ ಬಗ್ಗೆ ತಿಳಿವಳಿಕೆ ನೀಡಬೇಕು. ಅಂಚೆ ಮತದ ಗೌಪ್ಯತೆಯನ್ನು ಕಟ್ಟುನಿಟ್ಟಾಗಿ ಕಾಪಾಡಬೇಕು. ಯಾವುದೇ ಕಾರಣಕ್ಕೂ ಇದು ಬಹಿರಂಗಗೊಳ್ಳಬಾರದು.

ಸಂಪೂರ್ಣ ಮತದಾನ ಪ್ರಕ್ರಿಯೆಯನ್ನು ವಿಡಿಯೋಗ್ರಫಿ ಮಾಡಬೇಕು.

ಅಂಚೆ ಮತಪತ್ರ ವಿತರಣೆ, ಸಂಗ್ರಹ ಸೇರಿದಂತೆ ಪ್ರತಿಯೊಂದು ಮಾಹಿತಿಯನ್ನು ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ನೀಡಬೇಕು. ಈ ಪ್ರಕ್ರಿಯೆ ಕುರಿತು ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ಅವರಿಗೆ ಮನವರಿಕೆ ಮಾಡಬೇಕು ಎಂದು ನಿತೇಶ್ ಪಾಟೀಲ ತಿಳಿಸಿದರು.

## ಬಹುವಿಧ ಅಂಗವಿಕಲ ವ್ಯಕ್ತಿಗಳ ಆಧಾರಕಾರ್ಡ ನೊಂದಣಿ

ಬೆಳಗಾವಿ: ಕೇಂದ್ರ ಸರ್ಕಾರದ ಭಾರತೀಯ ವಿಶಿಷ್ಟ ಗುರುತು ಪ್ರಾಧಿಕಾರದ ವತಿಯಿಂದ ಸಿದ್ದಪಡಿಸಿರುವ ವಿನೂತನ ತಂತ್ರಜ್ಞಾನ ಮೂಲಕ ಕುಷ್ಠರೋಗದಿಂದ ಬಾಧಿತರು ಹಾಗೂ ಕೈಯಲ್ಲಿನ ಹತ್ತು ಬೆರಳುಗಳು ಹಾಗೂ ಎರಡು ಕಣ್ಣು ಇಲ್ಲದಿದ್ದರೂ ಕೇವಲ ಮುಖ ಚಹರೆ (ಭಾವಚಿತ್ರ) ಮೂಲಕವೇ ಆಧಾರ ನೊಂದಣಿ ಮಾಡಲಾಗುತ್ತಿದೆ.

ಕಾರಣ ಬೆಳಗಾವಿ ಜಿಲ್ಲೆಯಲ್ಲಿ ಆಧಾರಕಾರ್ಡ ಪಡೆಯದೆ ಇರುವ ಕುಷ್ಠ ರೋಗದಿಂದ ಬಾಧಿತರು ಮತ್ತು ಎರಡು ಕಣ್ಣು ಹಾಗೂ ಎರಡು ಕೈಗಳ ಬೆರಳುಗಳು ಇಲ್ಲದಿರುವ ವಿಕಲಚೇತನರು, ಬುದ್ಧಿಮಾಂದ್ಯರು, ಬಹುವಿಧ ಅಂಗವಿಕಲ ವ್ಯಕ್ತಿಗಳು ಆಧಾರಕಾರ್ಡ ನೊಂದಣಿ ಮಾಡಿಸಲು ತಮ್ಮ ಹೆಸರನ್ನು ನೊಂದಾಯಿಸಲು ಇಲಾಖೆಯಿಂದ ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿ ಹಾಗೂ ಹೆಸರು ನೊಂದಾಯಿಸಲು ಕಛೇರಿ ದೂರವಾಣಿ ಸಂಖ್ಯೆ 0831–2476096/7 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti, Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089